ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 231
8–3–2025 ಶನಿವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 231

## ಸಮಾಜ ಸೇವಕ ವಾಸುದೇವ ರಾಯ್ಕರ್ ಅವರಿಗೆ ಶ್ರೀ ಮಂತ್ರಾಲಯ ಪರಿಮಳ ಪ್ರಶಸ್ತಿ ಪ್ರದಾನ



**ಮಂತ್ರಾಲಯ (ಆಂಧ್ರಪ್ರದೇಶ):** ಇಲ್ಲಿನ ರಾಘವೇಂದ್ರ ಸ್ವಾಮಿಗಳ ಮಠದಿಂದ, ದಾವಣಗೆರೆಯ ಸಮಾಜ ಸೇವಕ ವಾಸುದೇವ ರಾಯ್ಕರ್ ಅವರಿಗೆ ಶ್ರೀ ಮಂತ್ರಾಲಯ ಪರಿಮಳ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಡಾ. ಶ್ರೀ 1008 ಮತ್ತುಬುಧೇಂದ್ರತೀರ್ಥ ಶ್ರೀಪಾದಂಗಳವರ ಸಾನ್ನಿಧ್ಯದಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

## ಬಜೆಟ್ : ಪತ್ರಕರ್ತರ ಮಾಸಾಶನ ಹೆಚ್ಚಳ : ಸಿದ್ದರಾಮಯ್ಯ

**ಬೆಂಗಳೂರು:** ಪತ್ರಕರ್ತರ ಮಾಸಾಶನವನ್ನು ಈ ಬಾರಿಯ ಬಜೆಟ್‌ನಲ್ಲಿ ಹೆಚ್ಚಿಸಲಾಗಿದೆ ಎಂದು 2025–26ನೇ ಬಜೆಟ್ ಭಾಷಣದ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ.

ಸಂಕಷ್ಟದಲ್ಲಿರುವ ಪತ್ರಕರ್ತರಿಗೆ ಪ್ರಸ್ತುತ ನೀಡುತ್ತಿರುವ 712,000 ಮಾಸಾಶನವನ್ನು 715,000ಕ್ಕೆ ಹಾಗೂ ಕುಟುಂಬ ಮಾಸಾಶನವನ್ನು 26,000 ದಿಂದ 37,000ಕ್ಕೆ ಹೆಚ್ಚಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

ಮಾಧ್ಯಮ ಮಾನ್ಯತೆ ಹೊಂದಿರುವ ರಾಜ್ಯದ ಒಟ್ಟು 2,500 ಪತ್ರಕರ್ತರು ಹಾಗೂ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ 15 ಲಕ್ಷವರೆಗೆ ನಗದುರಹಿತ ಚಿಕಿತ್ಸೆಗಾಗಿ 'ಮುಖ್ಯಮಂತ್ರಿಗಳ ಮಾಧ್ಯಮ ಸಂಜೀವಿನಿ ಅನುಷ್ಠಾನಗೊಳಿಸಲಾಗುವುದು ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

# 4 ಲಕ್ಷ ಕೋಟಿ ರೂ. ಬಜೆಟ್ ಮಂಡಿಸಿದ ಸಿಎಂ

## 19 ಸಾವಿರ ಕೋಟಿ ಆದಾಯ ಕೊರತೆ; 1,16,000 ಕೋಟಿ ಸಾಲದ ಮೊರೆ

**ಬೆಂಗಳೂರು:** ಹಣಕಾಸು ಖಾತೆಯನ್ನೂ ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ 2025–26ನೇ ಸಾಲಿನ ಬಜೆಟ್ ಮಂಡಿಸಿದ್ದು, ಗ್ಯಾರಂಟಿ ಯೋಜನೆಗಳಿಗೆ ಬರೋಬ್ಬರಿ 51 ಸಾವಿರ ಕೋಟಿ ರೂ. ನೀಡುವುದರ ಜೊತೆಗೆ ಹತ್ತು ಹಲವು ಹೊಸ ಘೋಷಣೆಗಳನ್ನೂ ಮಾಡಿದ್ದಾರೆ.

ಇಂದು ವಿಧಾನಸಭೆಯಲ್ಲಿ 4,09,549 ಕೋಟಿ ರೂ. ಗಾತ್ರದ ಬಜೆಟ್ ಮಂಡಿಸಿದ ಸಿಎಂ ಸಿದ್ದರಾಮಯ್ಯ ಅವರು ಇದರಲ್ಲಿ 19,262 ಕೋಟಿ ರೂ. ರಾಜಸ್ವ ಕೊರತೆಯನ್ನು ಉಲ್ಲೇಖಿಸಿದ್ದಾರೆ.

1994 ರಲ್ಲಿ ಜನತಾ ದಳದ ಆಡಳಿತದಲ್ಲಿ ಡಿಸಿಎಂ ಆಗಿ ಮೊದಲ ಬಾರಿ ಬಜೆಟ್ ಮಂಡಿಸಿದ್ದ ಸಿದ್ದರಾಮಯ್ಯ ಅವರು ಇಂದು ತಮ್ಮ 16ನೇ ಬಜೆಟ್ ಅನ್ನು ಮಂಡಿಸುವ ಮೂಲಕ ಒಂದು ರೀತಿಯ ಇತಿಹಾಸವನ್ನು ಸೃಷ್ಟಿಸಿದರು. ಎರಡನೇ



ಅವಧಿಗೆ ರಾಜ್ಯದ ಮುಖ್ಯಮಂತ್ರಿಯಾಗಿ ಇದು ಅವರ ಮೂರನೇ ಬಜೆಟ್ ಮತ್ತು ಸತತ ಎರಡನೇ ಆದಾಯ ಕೊರತೆ ಬಜೆಟ್ ಆಗಿದೆ.

ಈ ಬಾರಿಯೂ ಪಂಚ ಗ್ಯಾರಂಟಿಗೆ 51,034 ಕೋಟಿ ರೂ. ಅನುದಾನ ನೀಡಲಾಗಿದೆ. ಹೀಗಾಗಿ ಇನ್ನೂ ಹೆಚ್ಚಿನ ಸಾಲದೊಂದಿಗೆ 4,09,549 ಕೋಟಿ ರೂ. ಮೊತ್ತದ ಆಯವ್ಯಯ ಮಂಡಿಸಿದ್ದಾರೆ.

"ಕರ್ನಾಟಕವು ಭಾರತದಲ್ಲಿ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ರಾಜ್ಯಗಳಲ್ಲಿ ಒಂದಾಗಿದೆ, ಇದು ರಾಷ್ಟ್ರೀಯ ಒಟ್ಟು ದೇಶೀಯ ಉತ್ಪನ್ನಕ್ಕೆ (GDP) ಶೇ. 8.4ರಷ್ಟು ಕೊಡುಗೆ ನೀಡುತ್ತದೆ. ಇದು 2024–25ನೇ ಸಾಲಿನಲ್ಲಿ ತನ್ನ ಪ್ರಭಾವಶಾಲಿ ಬೆಳವಣಿಗೆಯ ಪಥವನ್ನು ಮುಂದುವರೆಸಿದೆ ಮತ್ತು ಶೇ. 7.4 ರಷ್ಟು ಉಖಆಕ ಬೆಳವಣಿಗೆಯ ದರವನ್ನು ಸಾಧಿಸಲು ಸಜ್ಜಾಗಿದೆ. ಇದು ರಾಷ್ಟ್ರೀಯ ಬೆಳವಣಿಗೆಯ ದರ ಶೇ. 6.4 ಕ್ಕಿಂತ ಹೆಚ್ಚಾಗಿದೆ" ಎಂದು ಸಿಎಂ ಒತ್ತಿ ಹೇಳಿದರು.

ರಾಜ್ಯ ಸರ್ಕಾರದ ಗ್ಯಾರಂಟಿಗಳು ಅಭಿವೃದ್ಧಿಯನ್ನು ತಿಂದುಹಾಕುತ್ತಿವೆ ಎಂದು ದೂರುತ್ತಿದ್ದ ಆಡಳಿತಾರೂಢ ಕಾಂಗ್ರೆಸ್ ಮತ್ತು ವಿರೋಧ ಪಕ್ಷಗಳ ಶಾಸಕರನ್ನು ಸಮಾಧಾನಪಡಿಸುವ ಯತ್ನದಲ್ಲಿ ಸಿಎಂ ಸಿದ್ದರಾಮಯ್ಯ ಅವರು 8,000 ಕೋಟಿ ರೂ.ಗಳ ಸಿಎಂ ಮೂಲಸೌಕರ್ಯ ಅಭಿವೃದ್ಧಿ ಕಾರ್ಯಕ್ರಮ(ಅಒಖಆಕ) ಎಂಬ ಹೊಸ ಯೋಜನೆಯನ್ನು ಘೋಷಿಸಿದ್ದಾರೆ.

ಈ ಯೋಜನೆಯು ಎಲ್ಲಾ 224 ವಿಧಾನಸಭಾ ಕ್ಷೇತ್ರಗಳಲ್ಲಿ ಸಣ್ಣ ನೀರಾವರಿ, ರಸ್ತೆಗಳು ಮತ್ತು ನಗರ ಮೂಲಸೌಕರ್ಯಗಳ ಮೇಲೆ ಕೇಂದ್ರೀಕರಿಸುವ ಮೂಲಕ ರಾಜ್ಯಾದ್ಯಂತ ಸಮತೋಲಿತ ಅಭಿವೃದ್ಧಿಯನ್ನು ಖಚಿತಪಡಿಸುತ್ತದೆ.

ಇನ್ನು ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ವಿವಿಧ ಯೋಜನೆಗಳನ್ನು ಘೋಷಿಸಿದ ಸಿಎಂ, ರಾಜಧಾನಿ ಬೆಂಗಳೂರಿನ ಅಭಿವೃದ್ಧಿಗಾಗಿ ದೇವನಹಳ್ಳಿಯವರೆಗೆ ಮೆಟ್ರೋ ರೈಲು ಯೋಜನೆಯ ವಿಸ್ತರಣೆ ಸೇರಿದಂತೆ ಬಂಪರ್ ಕೊಡುಗೆ ನೀಡಿ–ದ್ದಾರೆ.

# ಸಿದ್ದರಾಮಯ್ಯ ಮಂಡಿಸಿದ ಬಜೆಟ್‌ಗೆ ಎಸ್ಸೆಸ್, ಎಸ್ಸೆಸ್ಸೆಂ ಸ್ವಾಗತ

**ದಾವಣಗೆರೆ:** ಕಾಂಗ್ರೆಸ್ ಪಕ್ಷ 2013ರಿಂದ 2018ರವರೆಗಿನ ಅವಧಿ ಮತ್ತು 2023ರಿಂದ ಆರಂಭವಾದ ಸರ್ಕಾರದ ಅವಧಿಯಲ್ಲಿ ನಾವು ಪ್ರಣಾಳಿಕೆಯಲ್ಲಿ ನೀಡಿದಂತೆ ಕೊಟ್ಟ ಮಾತನ್ನು ಉಳಿಸಿಕೊಂಡಿದ್ದೇವೆ ಎಂದು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ. ಶಾಮನೂರು ಶಿವಶಂಕರಪ್ಪನವರು, ಸಚಿವ ಎಸ್.ಎಸ್.ಮಲ್ಲಿಕಾರ್ಜುನ್, ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರು ಹಾಗೂ ದಾವಣಗೆರೆ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಹೆಚ್.ಬಿ. ಮಂಜಪ್ಪ, ಪ್ರಧಾನ ಕಾರ್ಯದರ್ಶಿ ದಿನೇಶ್ ಕೆ. ಶೆಟ್ಟಿ ತಿಳಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ದಾಖಲೆಯ 16ನೇ ಬಜೆಟ್ ಸಮೃದ್ಧಿಯ ಪ್ರತೀಕವಾಗಿದೆ ಎಂದು ಅಭಿಪ್ರಾಯಪಟ್ಟಿರುವ ಅವರುಗಳು, ಬಿಜೆಪಿಯವರಿಗೆ ನಾಚಿಕೆಯಾಗಬೇಕು. ನಾವು ಕೊಟ್ಟ ಮಾತುಗಳನ್ನು ಉಳಿಸಿಕೊಂಡಿದ್ದೇವೆ. ಅವರ ಕಾಲದ ಬಜೆಟ್ ರೀತಿ ನಮ್ಮದು ಇರುವುದಿಲ್ಲ. ಕೇಂದ್ರ ಬಜೆಟ್‌ನಲ್ಲಿ



ಕರ್ನಾಟಕಕ್ಕೆ ಏನೂ ಕೊಡುಗೆ ನೀಡಿಲ್ಲ. ಕರ್ನಾಟಕ ಉಳಿಸಿ ಎಂದು ಹೇಳುವುದಕ್ಕೆ ಅವರಿಗೆ ನೈತಿಕತೆಯಿಲ್ಲ. ನಾವು ನಮ್ಮ ಜನರನ್ನು ಕಾಪಾಡುತ್ತೇವೆ, ಕಾಪಾಡಿದ್ದೇವೆ" ಎಂದಿದ್ದಾರೆ.

ದಾವಣಗೆರೆ ಜಿಲ್ಲಾ ಆಸ್ಪತ್ರೆ ಸೇರಿದಂತೆ ಇತ–ರೆ ಜಿಲ್ಲೆಗಳ ಒಟ್ಟು 08 ತಾಲ್ಲೂಕು ಆಸ್ಪತ್ರೆಗಳನ್ನು 650 ಕೋಟಿ ರೂ ವೆಚ್ಚದಲ್ಲಿ ನವೀಕರಣ ಮಾಡಲಾಗಿದೆ ಇದು ಉತ್ತಮವಾಗಿದೆ. ಬಂಜಾರ ಸಮುದಾಯದ ಪ್ರಮುಖ ಧಾರ್ಮಿಕ ಸ್ಥಳವಾದ ದಾವಣಗೆರೆ ಜಿಲ್ಲೆಯ ಸಂತ ಸೇವಾಲಾಲ್ ಪುಣ್ಯಕ್ಷೇತ್ರವಾದ ಸೂರಗೊಂಡನ ಕೊಪ್ಪದಲ್ಲಿ ಒಂದು ವಸತಿ ಶಾಲೆಯನ್ನು ಕ್ರೈಸ್ ವತಿಯಿಂದ ಪ್ರಾರಂಭಿಸಲಾಗುತ್ತಿದೆ

ದಾವಣಗೆರೆಯ ಕೊಂಡಜ್ಜಿಯ ಪರಿಸರದಲ್ಲಿ ಸ್ಥಾಪಿಸಲಾಗಿರುವ ವೃತ್ತಿರಂಗಭೂಮಿ ರಂಗಾಯಣದಲ್ಲಿ ಮೂಲಭೂತ ಸೌಕರ್ಯ, ವೃತ್ತಿ 'ರಂಗಾಯಣ ಸಮುಚ್ಚಯ ಹಾಗೂ ಥಿಯೇಟರ್ ಮ್ಯೂಸಿಯಂ ನಿರ್ಮಾಣಕ್ಕೆ ಸಿದ್ದರಾಮಯ್ಯನವರು ಬಜೆಟ್ನಲ್ಲಿ 3.00 ಕೋಟಿ ರೂ. ತೆಗೆದಿರಿಸಿರುವುದು ಸ್ವಾಗತಾರ್ಹವೆಂದರು.

ಜಗಳೂರು ಕೆರೆ ತುಂಬಿಸುವ ಯೋಜನೆ, ಹೊನ್ನಾಳಿಯ ಬೆನಕನಹಳ್ಳಿ ಗೋವಿನಕೋವಿ ಮತ್ತು ಹನುಮಸಾಗರ ಕೆರೆ ತುಂಬಿಸುವ ಯೋಜನೆಗೆ ಅನುದಾನ ತೆಗೆದಿರಿಸಿರುವುದು ಹಾಗೂ ರಾಜ್ಯ ಸರ್ಕಾರವು ರೈಲ್ವೆ ಸಹಯೋಗದೊಂದಿಗೆ ತುಮಕೂರು–ದಾವಣಗೆರೆ ಸೇರಿದಂತೆ 9 ವಿವಿಧ ರೈಲ್ವೇ ಯೋಜನೆಗಳಿಗೆ ಮಂಜೂರಾತಿ ನೀಡಿರುವುದು ನೋಡಿದರೆ ರಾಜ್ಯ ಮತ್ತು ಜಿಲ್ಲೆಯನ್ನು ಸಮೃದ್ಧಿಗೆ ತೆಗೆದುಕೊಂಡು ಹೋಗುತ್ತಿರುವುದು ಕಾಣಬಹುದು ಎಂದು ಅವರುಗಳು ತಿಳಿಸಿದ್ದಾರೆ.

ಪ್ರಸಕ್ತ ವರ್ಷದಿಂದ ದಾವಣಗೆರೆ ಕೇಂದ್ರ ವಲಯದಲ್ಲಿ ಬಾಂಬ್ ಪತ್ತೆ ಮತ್ತು ನಿಷ್ಕ್ರಿಯ ದಳಗಳನ್ನು ಸ್ಥಾಪನೆ ದಾವಣಗೆರೆ ಜಿಲ್ಲೆ ವಿದ್ಯುನ್ಮಾನ ಕ್ಯಾಮರಾ ಅಳವಡಿಕೆಗೆ ಮಂಜೂರಾತಿ ದೊರೆತಿದೆ ಎಂದು ತಿಳಿಸಿದ್ದಾರೆ.

ಕಟ್ಟಡ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕೆ ಪ್ರೊ?ರೀತ್ಸಾಹ ನೀಡಲು ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ರಾಜ್ಯದ 31 ಜಿಲ್ಲೆಗಳಲ್ಲಿ 06 ನೇ ತರಗತಿಯಿಂದ 12ನೇ ತರಗತಿಯವರೆಗಿನ ವಸತಿ ಶಾಲೆಗಳ ನಿರ್ಮಾಣ, ಅಂಗನವಾಡಿ ಕಾರ್ಯಕರ್ತರು ಮತ್ತು ಸಹಾಯಕಿಯರಿಗೆ ಹಾಗೂ ಬಿಸಿಯೂಟ ಕಾರ್ಯಕರ್ತರಿಗೆ ವೇತನ ಹೆಚ್ಚಳ, ನಿವೃತ್ತ ಪತ್ರಕರ್ತರಿಗೆ ಗೌರವ ಸಂಭಾವನೆ ಹೆಚ್ಚಳ, ಪತ್ರಕರ್ತರಿಗೆ ಆರೋಗ್ಯ ಸಂಜೀವಿನಿ ಯೋಜನೆ ಸೇರಿದಂತೆ ಹೀಗೆ ಎಲ್ಲಾ ವಲಯಕ್ಕೂ ಈ ಬಜೆಟ್ ಪೂರಕವಾಗಿ ಸ್ಪಂದಿಸಿದೆ ಎಂದಿದ್ದಾರೆ.



# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಹೆಚ್ಚಿನ ಕ್ಯಾಲೊರಿ ಆಹಾರವನ್ನು ತಪ್ಪಿಸಿ ಮತ್ತು ನಿಮ್ಮ ವ್ಯಾಯಾಮವನ್ನು ಕೈಬಿಡಬೇಡಿ. ನಿಮ್ಮ ತಾಯಿ ಅಥವಾ ತಂದೆಯ ಆರೋಗ್ಯಕ್ಕಾಗಿ ನೀವು ಇಂದು ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗಬಹುದು. ಇದು ನಿಮ್ಮ ಹಣಕಾಸಿನ ಸ್ಥಿತಿಯನ್ನು ಹದಗೆಡಿಸುತ್ತದೆ ಆದರೆ ಸಂಬಂಧವನ್ನು ಬಲಪಡಿಸುತ್ತದೆ. ನಿಮ್ಮ ಸಮಸ್ಯೆಗಳನ್ನು ಮರೆತು ಕುಟುಂಬದ ಸದಸ್ಯರೊಂದಿಗೆ ಒಳ್ಳೆಯ ಸಮಯ ಕಳೆಯುತ್ತೀರಿ.

### ವೃಷಭ ರಾಶಿ

ಮನರಂಜನೆ ಮತ್ತು ಮೋಜಿನ ಒಂದು ದಿನ. ಇಂದು, ನೀವು ಸಾಕಷ್ಟು ಸಕಾರಾತ್ಮಕತೆಯೊಂದಿಗೆ ಮನೆಯಿಂದ ಹೊರಬರುತ್ತೀರಿ, ಆದರೆ ಕೆಲವು ಅಮೂಲ್ಯ ವಸ್ತುವಿನ ಕಳ್ಳತನದಿಂದಾಗಿ, ನಿಮ್ಮ ಮನಸ್ಥಿತಿಗೆ ತೊಂದರೆಯಾಗಬಹುದು. ಇಂದು ಹಣದ ಬಗ್ಗೆ ಕುಟುಂಬ ಸದಸ್ಯರಲ್ಲಿ ಗೊಂದಲ ಉಂಟಾಗಬಹುದು. ಹಣಕಾಸಿನ ವಿಷಯದ ಬಗ್ಗೆ ನೀವು ಕುಟುಂಬದ ಎಲ್ಲ ಸದಸ್ಯರಿಗೆ ಸ್ಪಷ್ಟವಾಗಿರಲು ಸಲಹೆ ನೀಡಬೇಕು.

### ಮಿಥುನ ರಾಶಿ

ಆಹಾರದ ಸ್ವಾದ ಉಪ್ಪಿನಿಂದ ಬರುವಂತೆ ಅತೃಪ್ತಿಯಿದ್ದಾಗಲೇ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ. ನೀವು ಮನೆಯಿಂದ ಹೊರ ಇದ್ದು ಉದ್ಯೋಗ ಅಥವಾ ಅಧ್ಯಯನ ಮಾಡುತ್ತಿದ್ದರೆ, ನಿಮ್ಮ ಹಣ ಮತ್ತು ಸಮಯವನ್ನು ವ್ಯರ್ಥ ಮಾಡುವಂತಹ ಜನರಿಂದ ದೂರವಿರುವುದು ಕಲಿತುಕೊಳ್ಳಬೇಕು. ನಿಮ್ಮ ಸಂಗಾತಿಯ ಜೊತೆಗಿನ ಸಂಬಂಧ ನಿಮ್ಮ ಕಚೇರಿ ಕೆಲಸದ ಕಾರಣ ಹಾಳಾಗಬಹುದು. ಇಂದು ಪ್ರಣಯದ ಭಾವನೆಗಳಿಗೆ ಪ್ರತಿಕ್ರಿಯೆ ದೊರಕುತ್ತದೆ.

### ಕರ್ಕ ರಾಶಿ

ಸ್ನೇಹಿತರೊಂದಿಗಿನ ಸಂಜೆ ಆಹ್ಲಾದಕರವಾಗಿದ್ದರೂ ವಿಪರೀತ ತಿನ್ನುವುದು ಮತ್ತು ಹಾರ್ಡ್ ಡ್ರಿಂಕ್ ಗಳ ಬಗ್ಗೆ ಎಚ್ಚರಿಕೆಯಿಂದಿರಿ. ನೀವು ಪ್ರಯಾಣ ಮಾಡುವ ಮತ್ತು ಹಣ ಖರ್ಚು ಮಾಡುವ ಮನಸ್ಥಿತಿಯಲ್ಲಿರುತ್ತೀರಿ. ಅದರೆ ಹಾಗೆ ಮಾಡಿದಲ್ಲಿ ನೀವು ವಿಷಾದಿಸುತ್ತೀರಿ. ಗೃಹ ಜೀವನ ಶಾಂತಿಯುತ ಮತ್ತು ಉತ್ತಮವಾಗಿರುತ್ತದೆ ಹೊಸ ಪ್ರೀತಿಯ ಸಂಪರ್ಕವನ್ನು ಹೊಂದುವ ಅವಕಾಶಗಳು ಬಲವಾಗಿದ್ದರೂ ವೈಯಕ್ತಿಕವಾದ ಮತ್ತು ಗೌಪ್ಯವಾದ ಮಾಹಿತಿಯನ್ನು ಬಹಿರಂಗಪಡಿಸಬೇಡಿ. ನಿಮ್ಮ ಕೆಲಸಕ್ಕೆ ಮೆಚ್ಚುಗೆ ದೊರಕಲಿದೆ.

### ಸಿಂಹ ರಾಶಿ

ಉತ್ತಮ ಆರೋಗ್ಯ ಏನಾದರೂ ಅಸಾಮಾನ್ಯವಾಗಿದ್ದನ್ನು ಸಾಧಿಸಲು ಸಾಧ್ಯವಾಗಿಸುವ ಒಂದು ವಿಶೇಷ ದಿನ. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು. ನಿಮ್ಮ ಜೀವನದಲ್ಲಿ ಒಂದು ಭವ್ಯವಾದ ಲಯವನ್ನು ರೂಪಿಸಿಕೊಳ್ಳಿ ಮತ್ತು ಶರಣಾಗತಿಯ ಮತ್ತು ಹೃದಯದಲ್ಲಿ ಪ್ರೀತಿಯ ಜೊತೆ ನೇರವಾಗಿ ಮತ್ತು ಕೃತಜ್ಞತೆಯಿಂದ ನಡೆಯುವ ಕಲೆಯ ಮೌಲ್ಯಗಳನ್ನು ತಿಳಿದುಕೊಳ್ಳಿ. ಇದು ನಿಮ್ಮ ಕೌಟುಂಬಿಕ ಜೀವನವನ್ನು ಹೆಚ್ಚು ಅರ್ಥಪೂರ್ಣವಾಗಿಸುತ್ತದೆ.

### ಕನ್ಯಾ ರಾಶಿ

ನಿಮ್ಮಲ್ಲಿ ಕೆಲವರು ಇದು ಇಂದು ಬಲವಂತವಾಗಿ ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳಬೇಕಾಗಬಹುದು ಹಾಗೂ ಇದು ನಿಮ್ಮನ್ನು ಉದ್ವೇಗಭರಿತರನ್ನಾಗಿಯೂ ಹಾಗೂ ಗಾಬರಿಯಿರುವವರನ್ನಾಗಿಯೂ ಮಾಡಬಹುದು. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ. ಒಂದು ಕುಟುಂಬದ ಒಟ್ಟಾಗುವಿಕೆಯಲ್ಲಿ ನೀವೇ ಕೇಂದ್ರಬಿಂದುವಾಗಿರುತ್ತೀರಿ.

### ತುಲಾ ರಾಶಿ

ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ನಿಮ್ಮ ಹಣವನ್ನು ಸಂಗ್ರಹಿಸಿದಾಗ ಮಾತ್ರ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ. ಇದನ್ನು ನೀವು ಚೆನ್ನಾಗಿ ಅರ್ಥಮಾಡಿಕೊಳ್ಳಿ ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ವಿಷಾದಿಸಬೇಕಾಗುತ್ತದೆ. ಇಂದು ನೀವು ಮನೆಯಲ್ಲಿ ಸೂಕ್ಷ್ಮ ಸಮಸ್ಯೆಯನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ ಮತ್ತು ಪ್ರಭಾವವನ್ನು ಬಳಸಬೇಕಾಗುತ್ತದೆ.

### ವೃಶ್ಚಿಕ ರಾಶಿ

ನಿಮ್ಮ ಆಹಾರವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ ಮತ್ತು ಫಿಟ್ ಆಗಿ ಉಳಿಯಲು ವ್ಯಾಯಾಮ ಮಾಡಿ. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು, ಇದರಿಂದ ನಿಮ್ಮ ಅನೇಕ ಆರ್ಥಿಕ ಸಮಸ್ಯೆಗಳು ದೂರವಾಗುತ್ತವೆ. ನಿಮಗೆ ಗೊತ್ತಿದ್ದ ಯಾರಾದರೂ ಹಣಕಾಸಿಗೆ ಸಂಬಂಧಿಸಿದ ವಿಷಯಗಳಿಗೆ ಅತಿಯಾಗಿ ಪ್ರತಿಕ್ರಿಯಿಸಬಹುದು, ಇದು ಮನೆಯಲ್ಲಿ ಆತಂಕದ ಕ್ಷಣಗಳು ತರುತ್ತದೆ. ಸಮಯ, ಕೆಲಸ, ಹಣ, ಸ್ನೇಹಿತರು, ಕುಟುಂಬ, ಬಂಧುಗಳು; ಎಲ್ಲವೂ ಒಂದು ಕಡೆ ಮತ್ತು ನಿಮ್ಮ ಸಂಗಾತಿಯ ಜೊತೆ ನೀವು ಇನ್ನೊಂದು ಕಡೆಗಿರುತ್ತೀರಿ.

### ಧನು ರಾಶಿ

ಬಸುರಿಯು ನೆಲದ ಮೇಲೆ ನಡೆದುಕೊಂಡು ಹೋಗುವಾಗ ವಿಶೇಷ ಕಾಳಜಿ ವಹಿಸಬೇಕು. ಇಂದು ನೀವು ಹಣಕ್ಕೆ ಸಂಬಂಧಿಸಿದ ಸಮಸ್ಯೆಯ ಕಾರಣದಿಂದ ತೊಂದರೆಗೊಳಗಾಗಬಹುದು. ಇದಕ್ಕಾಗಿ ನೀವು ನಿಮ್ಮ ಯಾವುದೇ ವಿಶ್ವಾಸಾರ್ಹರಿಂದ ಸಲಹೆಯನ್ನು ತೆಗೆದುಕೊಳ್ಳಬೇಕು. ಸ್ನೇಹಿತರು ನಿಮಗೆ ಬೆಂಬಲ ನೀಡಿದರೂ –ಆದರೆ ಮಾತುಗಳ ಬಗ್ಗೆ ಎಚ್ಚರದಿಂದಿರಿ ಪ್ರೀತಿಪಾತ್ರರಲ್ಲದೇ ನಿಮ್ಮ ಸಮಯ ಕೊಲ್ಲುವುದು ಕಷ್ಟ.

### ಮಕರ ರಾಶಿ

ನಿಮ್ಮ ಪ್ರಚಂಡ ಪ್ರಯತ್ನ ಹಾಗೂ ಕುಟುಂಬದ ಸದಸ್ಯರ ಸಕಾಲಿಕ ಬೆಂಬಲ ಬಯಸಿದ ಫಲಿತಾಂಶಗಳು ತರುತ್ತದೆ. ಆದರೆ ಪ್ರಸ್ತುತ ಚೇತನವನ್ನು ಕಾಯ್ದುಕೊಳ್ಳಲು ಶ್ರಮಿಸುತ್ತೀರಿ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ.

### ಕುಂಭ ರಾಶಿ

ನೀವು ಪರಿಸ್ಥಿತಿಯ ನಿಯಂತ್ರಣ ಹೊಂದುತ್ತಿದ್ದಂತೆ ನಿಮ್ಮ ಆತಂಕ ಕಣ್ಮರೆಯಾಗುತ್ತದೆ. ಇದು ಧೈರ್ಯದ ಮೊದಲ ಸ್ಪರ್ಶದಲ್ಲಿ ಕುಸಿದುಹೋಗುವ ಸಾಬೂನಿನ ಗುಳ್ಳೆಯಷ್ಟೇ ಗಟ್ಟಿಯೆಂದು ನೀವು ಅರ್ಥ ಮಾಡಿಕೊಳ್ಳುತ್ತೀರಿ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ. ಮನೆಯಲ್ಲಿ ಧರ್ಮಕಾರ್ಯಗಳನ್ನು ನಡೆಸಲಾಗುವುದು. ನಿಮ್ಮ ಗೆಳತಿ ನಿಮಗೆ ಮೋಸ ಮಾಡಬಹುದು.

### ಮೀನ ರಾಶಿ

ತುಂಬಾ ಚಿಂತೆ ಮತ್ತು ಒತ್ತಡ ನಿಮ್ಮ ಆರೋಗ್ಯವನ್ನು ನಾಶಮಾಡಬಹುದು. ನೀವು ಮಾನಸಿಕ ಸ್ಪಷ್ಟತೆಯನ್ನು ಕಾಯ್ದುಕೊಳ್ಳಲು ಗೊಂದಲ ಮತ್ತು ಹತಾಶೆಯನ್ನು ತಡೆಗಟ್ಟಬೇಕು. ಕೆಲವರಿಗೆ ಪ್ರಯಾಣದ ಗಡಿಬಿಡಿ ಮತ್ತು ಒತ್ತಡದಿಂದ ಕೂಡಿರುತ್ತವೆ – ಆದರೆ ಆರ್ಥಿಕವಾಗಿ ಲಾಭದಾಯಕವಾಗಿರುತ್ತವೆ. ನಿಮ್ಮ ಕುಟುಂಬದ ಸದಸ್ಯರ ಭಾವನೆಗಳನ್ನು ನೋಯಿಸುವುದನ್ನು ತಪ್ಪಿಸುವ ಮೂಲಕ ನಿಮ್ಮ ಕೋಪವನ್ನುನಿಯಂತ್ರಿಸಿ.

## ಸಂತೆಬೀದಿಯ ಶ್ರೀ ಲಕ್ಷ್ಮೀನಾರಾಯಣ ಹಾಡು ಬಿಡುಗಡೆ



ನಗರದಡಾ.ಬಿ.ಆರ್.ಅಂಬೇಡ್ಕರ್‌ರಸ್ತೆಯಲ್ಲಿರುವ ಶ್ರೀ ಲಕ್ಷ್ಮೀನಾರಾಯಣ ಸ್ವಾಮಿ ಸನ್ನಿಧಿಯಲ್ಲಿಇತ್ತೀಚೆಗೆ ಏರ್ಪಡಿಸಿದ್ದ ಭಕ್ತಿಗೀತೆ ಲೋಕಾರ್ಪಣೆಕಾರ್ಯಕ್ರಮದಲ್ಲಿಗಾಯಕದರ್ಶನ್ ಎ. ಹಾಗೂ ಚೈತ್ರಾದರ್ಶನ್‌ದಂಪತಿಯನ್ನು ಸನ್ಮಾನಿಸಲಾಯಿತು.

**ಚಿಕ್ಕಮಗಳೂರು:** ಭಕ್ತಿಯಿಂದ ನಿಸ್ವಾರ್ಥವಾಗಿ ಭಗವಂತನನ್ನು ಪ್ರಾರ್ಥಿಸಿದರೆ ನಮ್ಮಆತ್ಮಶಕ್ತಿ ಹೆಚ್ಚಿ ಬದುಕು ಸದೃಢವಾಗುತ್ತದೆಎಂದು ಸವಳಂಗ ಸರ್ಕಾರಿ ಪದವಿ ಪೂರ್ವಕಾಲೇಜಿನಕನ್ನಡಉಪನ್ಯಾಸಕ ಸುಬ್ರಹ್ಮಣ್ಯ ತಿಳಿಸಿದರು.

ನಗರದಕಲ್ಕಟ್ಟೆ ಪುಸ್ತಕದ ಮನೆ, ಸೂರಂಕಣ, ದೀವಿಗೆ ಬಳಗದವರು ಚಿಕ್ಕಮಗಳೂರು ಭಾವಸಾರಕ್ಷತ್ರಿಯ ಮಂಡಳಿಯವರ ಸಹಯೋಗದಲ್ಲಿಡಾ.ಬಿ.ಆರ್. ಅಂಬೇಡ್ಕರ್‌ರಸ್ತೆಯಲ್ಲಿರುವ ಶ್ರೀ ಲಕ್ಷ್ಮೀನಾರಾಯಣ ಸ್ವಾಮಿ ಸನ್ನಿಧಿಯಲ್ಲಿಇತ್ತೀಚೆಗೆಏರ್ಪಡಿಸಿದ್ದ 'ಸಂತೆಬೀದಿಯ ಶ್ರೀ ಲಕ್ಷ್ಮೀನಾರಾಯಣ? ಭಕ್ತಿಗೀತೆ ಲೋಕಾರ್ಪಣೆಕಾರ್ಯಕ್ರಮದಲ್ಲಿಅವರು ಮಾತನಾಡಿದರು.

ಭರತ ಮುನಿಯುತನ್ನ ನಾಟ್ಯಶಾಸ್ತ್ರ ಪುಸ್ತಕದಲ್ಲಿ ಸಂಗೀತದಕುರಿತಾಗಿಯೂ ವಿಶೇಷವಾಗಿ ಪ್ರಸ್ತಾಪಿಸಿದ್ದು, ಕಲೆಯಕುರಿತ ಶ್ರದ್ಧೆಯೇಕಲಾವಿದನನ್ನುಎತ್ತರಕ್ಕೆಕೊಂಡೊಯ್ಯುತ್ತದೆಎಂದಿದ್ದಾನೆ. ಅಂತರಂಗ ಶುದ್ಧಿಗೆ ಸಂಗೀತದೈವಿಕ ಸ್ಪರ್ಶವನ್ನು ನೀಡುತ್ತದೆ. ಈ ದಿಸೆಯಲ್ಲಿ ನಾಗರಾಜರಾವ್‌ಕಲ್ಕಟ್ಟೆ ಮತ್ತು ನಾಗಭೂಷಣ್ ಕೆ.ಎನ್.ಹೊರತರುತ್ತಿರುವ ಹೆಚ್.ಎನ್.ಮಲ್ಲೇಶರಾವ್ ಸ್ಮರಣೆಯಕಲ್ಕಟ್ಟೆ ಗಾನದೀವಿಗೆ ಸರಣಿಯು ಚಿಕ್ಕಮಗಳೂರು ಇತಿಹಾಸದಲ್ಲಿ ಸ್ಮರಣೀಯಕಾರ್ಯವಾಗಿದೆಎಂದುಅವರು ನುಡಿದರು.

ಪಶುವೈದ್ಯಇಲಾಖೆಯ ಕಳಸಾಪುರ ಗಿರೀಶ್ ಮಾತನಾಡಿ, ಗಾನಕ್ಕೆ ಮರುಳಾಗದ ದೇವರೇಇಲ್ಲಎಂದ ಮೇಲೆ ಮಾನವ ಹೃದಯಎಂದೂ ಸಂಗೀತದಿಂದ ಭಾವಪರವಶಗೊಳ್ಳುತ್ತದೆ.ಕಲ್ಕಟ್ಟೆ ಪುಸ್ತಕದ ಮನೆಯರೇಖಾ ನಾಗರಾಜರಾವ್ ನಿರ್ಮಾಣದ ಈ ಸರಣಿಯಒಂದೊಂದು ಭಕ್ತಿಗೀತೆಗಳೂ ದೇವರೂತಲೆದೂಗುವಂತಿವೆ. ಅಲ್ಲದೆ ಪ್ರತೀ ಹಾಡುಗಳು ಸಂಗೀತದದೃಷ್ಟಿಯಿಂದ ವಿಭಿನ್ನ ಪ್ರಯೋಗಗಳೂ ಆಗಿವೆಎಂದು ಹೇಳಿದರು.

ಭಾವಸಾರಕ್ಷತ್ರಿಯ ಮಂಡಳಿಯ ಕಾರ್ಯದರ್ಶಿ ಚಿದಾನಂದ್ ಮಾತನಾಡಿ, ನಮ್ಮದೇವಸ್ಥಾನವು ನಮ್ಮ ಬದುಕಿನ ಶಿಖರವಿದ್ದಂತೆ.ಒಂದುಊರಿನಲ್ಲಿದೇವಾಲಯವಿದೆಎಂದರೆಅದು ಸುಸಂಸ್ಕೃತಿಯ ಸಂಕೇತ.ಸಮುದಾಯವನ್ನುಒಂದಾಗಿಸಲುದೇವಾಲಯ, ಭಜನೆ, ಆಚರಣೆಗಳು, ಭಕ್ತಿಗೀತೆಗಳು ಮುಖ್ಯವಾಗುತ್ತವೆಎಂದರು.

ಸಾಹಿತಿರಮೇಶ್ ಬೊಂಗಾಳೆ ಆಶಯ ನುಡಿಯಾಡಿದರು.ಭಾವಸಾರಕ್ಷತ್ರಿಯ ಮಂಡಳಿಯ ಅಧ್ಯಕ್ಷ ಮಂಜುನಾಥಧಾವದ್ಕರ್‌ಅಧ್ಯಕ್ಷತೆ ವಹಿಸಿದ್ದರು. ಇದೇ ಸಂದರ್ಭದಲ್ಲಿಗಾಯಕದರ್ಶನ್ ಎ. ಹಾಗೂ ಚೈತ್ರಾದರ್ಶನ್‌ದಂಪತಿಯನ್ನು ಸನ್ಮಾನಿಸಲಾಯಿತು.

ಸಾಂಬಾರು ಮಂಡಳಿಯ ನಿವೃತ್ತಅಧಿಕಾರಿರೊನಾಲ್ಡ್, ಟೈಲರ್ಸ್ ಅಸೋಸಿಯೇಶನ್‌ನ ಅಶೋಕ್ ಶೆಟ್ಟಿ, ಮಿಲನ ಶಿವಪ್ಪ, ರಾಜಶ್ರೀ ಶಿವಾನಂದ್, ಹಿರೇಮಗಳೂರು ರಾಕೇಶ್, ಗಾಯಕದರ್ಶನ್, ಚೈತ್ರಾದರ್ಶನ್, ನಾಟಿವೈದ್ಯೆ ಶಾಂತಾ ಮಲ್ಲೇಶರಾವ್, ಪುರೋಹಿತರಾದ ನವೀನ್ ಶರ್ಮ, ಶಿವಮೊಗ್ಗ ಕಿರಣ್‌ಕುಮಾರ್, ಸರಿತಾ ವಿ.ಜೆ., ಭೂಮಿಕಾ ಉಪಸ್ಥಿತರಿದ್ದರು. ನಾಗರಾಜರಾವ್‌ಕಲ್ಕಟ್ಟೆ ನಿರೂಪಿಸಿ, ವಂದಿಸಿದರು.

## ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವುದಿಲ್ಲ– ಊಹಾಪೋಹಗಳಿಗೆ ಕಿವಿಗೊಡಬೇಡಿ : ಚಂದ್ರಭೂಪಾಲ್

**ಶಿವಮೊಗ್ಗ:** ಕರ್ನಾಟಕ ಸರ್ಕಾರದ ಮಹತ್ವದ ಐದು ಗ್ಯಾರಂಟಿ ಯೋಜನೆಗಳಾದ ಶಕ್ತಿ, ಗೃಹಜ್ಯೋತಿ, ಅನ್ನಭಾಗ್ಯ, ಗೃಹಲಕ್ಷ್ಮಿ?ಮೇ ಹಾಗೂ ಯುವನಿಧಿ ಜಾರಿಗೊಂಡಾಗಿನಿಂದ ಯಶಸ್ವಿಯಾಗಿ ಮುನ್ನಡೆಯುತ್ತಿದ್ದು ಈ ಯೋಜನೆಗಳು ಹೀಗೆಯೆ ಮುಂದುವರೆಯಲಿವೆ. ಇವುಗಳನ್ನು ನಿಲ್ಲಿಸಲಾಗುವುದೆಂಬ ಊಹಾಪೋಹಗಳಿಗೆ ಸಾರ್ವಜನಿಕರು ಕಿವಿಗೊಡಬೇಡಿ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷರಾದ ಸಿ.ಎಸ್. ಚಂದ್ರಭೂಪಾಲ ತಿಳಿಸಿದ್ದಾರೆ.

ಡಿಸೆಂಬರ್ ತಿಂಗಳ ಬಾಕಿ ಇರುವ ಗೃಹಲಕ್ಷ್ಮಿ ಹಣವನ್ನು ಮಾರ್ಚ್ 3 ರಂದು ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮೆ ಮಾಡಿದ್ದು, ಜನವರಿ ತಿಂಗಳಿನ ಗೃಹಲಕ್ಷ್ಮಿ?ಮ ಹಣ ಬಿಲ್ಲಿಂಗ್ ಆಗುತ್ತಿದೆ. ಈ ಬಾಕಿ ಹಣವನ್ನು ಕೂಡ ಶೀಘ್ರದಲ್ಲೇ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮೆ ಆಗಲಿದ್ದು, ನಂತರ ಫೆಬ್ರವರಿ ತಿಂಗಳ ಹಣ ಬಿಡುಗಡೆಯಾಗಲಿದೆ. ಆದ್ದರಿಂದ ಫಲಾನುಭವಿಗಳು ಆತಂಕಪಡುವ ಅಗತ್ಯವಿಲ್ಲ ಎಂದಿದ್ದಾರೆ.

ಅನ್ನಭಾಗ್ಯ ಯೋಜನೆಯಡಿಯಲ್ಲಿ ಪಡಿತರ ಚೀಟಿಯಲ್ಲಿರುವ ಪ್ರತಿ ಸದಸ್ಯರಿಗೆ ಮಾಸಿಕ 5 ಕೆ.ಜಿ. ಅಕ್ಕಿ ಬದಲಿಗೆ ತಲಾ ರೂ. 170 ನೀಡಲಾಗುತ್ತಿದೆ. ಈಗಾಗಲೇ ನವೆಂಬರ್ ಮತ್ತು ಡಿಸೆಂಬರ್ ತಿಂಗಳ ಹಣವನ್ನು ಕುಟುಂಬದ ಮಹಿಳಾ ಮುಖ್ಯಸ್ಥರ ಬ್ಯಾಂಕ್ ಖಾತೆಗೆ ಜಮೆಯಾಗಿದ್ದು, ಜನವರಿ ತಿಂಗಳ ಹಣ ಶೀಘ್ರದಲ್ಲೇ ಡಿಬಿಟಿ ಆಗಲಿದೆ. ಅನ್ನಭಾಗ್ಯ ಯೋಜನೆಯಡಿ ಪಡಿತರ ಚೀಟಿದಾರರಿಗೆ ಇನ್ನು ಮುಂದೆ ನಗದು ಬದಲಿಗೆ 5 ಕೆ.ಜಿ ಅಕ್ಕಿ ವಿತರಿಸಲು ರಾಜ್ಯ ಸರ್ಕಾರ ನಿರ್ಧರಿಸಿದ್ದು, ಫೆಬ್ರವರಿ ತಿಂಗಳಿಂದಲೇ ಜಾರಿಗೆ ಬಂದಿದೆ. ಮಾರ್ಚ್ ತಿಂಗಳಿನಲ್ಲಿ ಒಟ್ಟು 15 ಕೆ.ಜಿ. ಅಕ್ಕಿ ಅನ್ನಭಾಗ್ಯ ಯೋಜನೆಯ ಪ್ರತಿ ಫಲಾನುಭವಿಗಳಿಗೆ ದೊರೆಯಲಿದೆ ಎಂದು ತಿಳಿಸಿದ್ದಾರೆ. ತಾಂತ್ರಿಕ ಅನಾನುಕೂಲಗಳಿಂದ ಗೃಹಲಕ್ಷ್ಮಿ ಮತ್ತು ಅನ್ನಭಾಗ್ಯ ಯೋಜನೆಗಳ ಫಲಾನುಭವಿಗಳಿಗೆ ದೊರೆಯಬೇಕಾದ ಹಣ ಕಳೆದ ಮೂರು ತಿಂಗಳಲ್ಲಿ ವಿಳಂಬವಾಯಿತು ಎಂಬ ಕಾರಣಕ್ಕೆ ಐದು ಗ್ಯಾರಂಟಿ ಯೋಜನೆಗಳ ನಿಲುಗಡೆ ಆಗುತ್ತದೆ ಎಂಬ ಊಹಾಪೋಹಗಳು ಶುರುವಾಗಿದೆ. ಇದು ಬಡವರಿಗಾಗಿ ಮಾಡಿದ ಯೋಜನೆಗಳು ಹಾಗಾಗಿ ಯಾವುದೇ ಕಾರಣಕ್ಕೂ ಈ ಯೋಜನೆಗಳನ್ನು ನಿಲ್ಲಿಸುವುದಿಲ್ಲ. ನಿರಂತರವಾಗಿ ಮುನ್ನೆಡೆಯುತ್ತಿರುವ ಈ ಪಂಚ ಯೋಜನೆಗಳ ಲಾಭವನ್ನು ಫಲಾನುಭವಿಗಳಿಗೆ ದೊರೆಯುವಂತೆ ಮಾಡುವುದೇ ರಾಜ್ಯ ಸರ್ಕಾರದ ಗುರಿಯಾಗಿದೆ ಎಂದು ತಿಳಿಸಿದ್ದಾರೆ.

## ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸದಸ್ಯತ್ವಕ್ಕೆ ಅರ್ಜಿ ಆಹ್ವಾನ

ದಾವಣಗೆರೆ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ 2025–26ನೇ ಸಾಲಿನ ಸದಸ್ಯತ್ವಕ್ಕೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಂಘದ ಜಿಲ್ಲಾಧ್ಯಕ್ಷ ಇ.ಎಂ. ಮಂಜುನಾಥ ತಿಳಿಸಿದ್ದಾರೆ.

ಸದಸ್ಯತ್ವದ ನವೀಕರಣ ಹಾಗೂ ಅರ್ಹ ಪತ್ರಕರ್ತರು ಹೊಸ ಸದಸ್ಯತ್ವಕ್ಕೆ ಅರ್ಜಿ ಸಲ್ಲಿಸಬಹುದು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘಕ್ಕೆಪರ್ಯಾಯ ಸಂಘದಲ್ಲಿ ಸದಸ್ಯರಾದವರ ಅರ್ಜಿಯನ್ನು ತಿರಸ್ಕರಿಸಲಾಗುವುದು ಎಂದು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎ. ಫಕೃದ್ದೀನ್ ಸ್ಪಷ್ಟಪಡಿಸಿದ್ದಾರೆ.

ಅರ್ಜಿ ಪಡೆಯಲು ಮತ್ತು ಭರ್ತಿ ಮಾಡಿದ ಅರ್ಜಿಯನ್ನು ದಾವಣಗೆರೆ ಮಹಾನಗರ ಪಾಲಿಕೆ ಆವರಣದಲ್ಲಿರುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಕಛೇರಿ ಅಥವಾ ದಾವಣಗೆರೆ ಇಮೇಜ್ ಪತ್ರಿಕೆ ಕಾರ್ಯಾಲಯ, ಸಿಟಿ ಸೆಂಟ್ರಲ್ ಆಸ್ಪತ್ರೆ ಹಿಂಭಾಗ, ಪಿ.ಜೆ.ಬಡಾವಣೆ, ದಾವಣಗೆರೆ ಇಲ್ಲಿ ಬರುವ ಮಾರ್ಚ್ 5ರೊಳಗೆ ಸಲ್ಲಿಸಬೇಕು. ಎಂದು ಪ್ರಕಟಣೆ ಪ್ರಕಟಿಸಲಾಗಿತ್ತು ಆದರೆ ಕೆಲವು ಅರ್ಜಿಗಳು ಬಾರದೇ ಇರುವುದರಿಂದ ರಾಜ್ಯಸಂಘದ ಮಾರ್ಗಸೂಚಿ ಅನುಸಾರ ದಿನಾಂಕ 12.03.2025ರ ಒಳಗೆ ಅರ್ಜಿಯನ್ನು ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಬೇಕು (ಅಂತಿಮ ದಿನಾಂಕ12/03/2025 )

ಹೆಚ್ಚಿನ ಮಾಹಿತಿಗಾಗಿ ಸಂಘದ ಜಿಲ್ಲಾಧ್ಯಕ್ಷ ಇ.ಎಂ.ಮಂಜುನಾಥ (94482 77772), ಪ್ರಧಾನ ಕಾರ್ಯದರ್ಶಿ ಎ.ಫಕೃದ್ದೀನ್ ( 84949 49909), ಜಿಲ್ಲಾ ಖಜಾಂಚಿ ಎನ್.ವಿ.ಬದರಿನಾಥ್ (94487 28858) ಅವರನ್ನು ಸಂಪರ್ಕಿಸಬಹುದು.

## ಉದರರೋಗಗಳ ಬಗ್ಗೆ ಉದಾಸೀನ ಸಲ್ಲದು: ಡಾ. ಪ್ರಕಾಶ್ ಮತ್ತಿಹಳ್ಳಿ

**ದಾವಣಗೆರೆ:** ಉದರ ಅಂದರೆ ಹೊಟ್ಟೆಗೆ ಸಂಬಂಧಿಸಿದ ರೋಗಗಳ ಮುನ್ಸೂಚನೆಗಳನ್ನು ಬರೀ ಅಜೀರ್ಣ ಎಂದು ಉದಾಸೀನ ಮಾಡಬೇಡಿ ಎಂದು ಜಜಮು ವೈದ್ಯಕೀಯ ಮಹಾವಿದ್ಯಾಲಯ ಉದರ ರೋಗ ವಿಭಾಗದ ಶಸ್ತ್ರಚಿಕಿತ್ಸಾ ತಜ್ಞ ಡಾ. ಪ್ರಕಾಶ್ ಮತ್ತಿಹಳ್ಳಿ ಎಚ್ಚರಿಸಿದರು.

ಗುರುವಾರ ನಗರದ ಬಾಪೂಜಿ ಮಕ್ಕಳ ಆಸ್ಪತ್ರೆಯಲ್ಲಿ ವಿವೇಕ್ ಪೋಷಕರ ಕಾರ್ಯಾಗಾರದಡಿ ಹಮ್ಮಿಕೊಂಡಿದ್ದ 'ಉದರ ರೋಗಗಳು–ಉದಾಸೀನ ಬೇಡ' ವಿಷಯ ಕುರಿತು ಉಪನ್ಯಾಸ ನೀಡಿದರು.

ಉದರ ಶಾಸ್ತ್ರ ಎಂದರೆ ಬಾಯಿಯಿಂದ ಗುದದ್ವಾರವರೆಗಿನ ಜೀರ್ಣಾಂಗ ವ್ಯೂಹ, ಮೇದೋಜಿರಕ ಪಿತ್ತಕೋಶ(ಲಿವರ್) ಗಳನ್ನು ಒಳಗೊಂಡ ಸಂಕೀರ್ಣ ವ್ಯವಸ್ಥೆಯಾಗಿದೆ.

ಜಠರ ಮತ್ತು ಕರುಳಿನ ಸಾಮಾನ್ಯ ಸಮಸ್ಯೆಗಳು ಇವುಗಳಲ್ಲಿ ಜಠರದ ಆಮ್ಲೀಯತೆಗೆ(ಂಭಿುಜುಣಥಿ) ಸಂಬಂಧಿಸಿದ ಜಠರದುರಿತ, ಅಲ್ಸರ್ ಹುಣ್ಣು, ಪಿತ್ತಕೋಶ(ಲಿವರ್) ಸಮಸ್ಯೆಗಳು, ಸಣ್ಣ ಮತ್ತು ದಡ್ಡ ಕರುಳಿನ ಹಾಗೂ ಗುದನಾಳದ ರೋಗಗಳು ಮುಖ್ಯವಾದವುಗಳು ಎಂದು ವಿವರಿಸಿದರು.



ಆರೋಗ್ಯಕರ ಆಹಾರಗಳಾದ ತರಕಾರಿ,ಹಣ್ಣು, ಬೇಳೆಗಳಂತಹ ಕರಗುವ, ಫೈಬರ್ ಅಧಿಕವಾಗಿರುವ ಆಹಾರಗಳನ್ನು ಸೇವಿಸಬೇಕು. ತಡರಾತ್ರಿಯ ತಿಂಡಿಗಳ ಸೇವನೆ ತಪ್ಪಿಸಬೇಕು, ವಾಂತಿಯಲ್ಲಿ ರಕ್ತ, ಕಪ್ಪು ಭೇಧಿಗೆ ಅಲ್ಸರ ಹುಣ್ಣು ಮೂಲ ಕಾರಣವಾಗಿರಬಹುದು.

ದೊಡ್ಡಕರುಳಿಗೆ ಸಂಬಂಧಿಸಿದ ಕರುಳಿನ ಕಿರಿಕಿರಿ/Intestainal bowel syndrome) ದಿನದಿಂದ ದಿನಕ್ಕೆ ಜನರಲ್ಲಿ ಹೆಚ್ಚುತ್ತಿರುವ ಒಂದು ಸ್ಥಿತಿ. ಇದರಲ್ಲಿ ವ್ಯಕ್ತಿಯು ಹಲವಾರು ವಾರದಿಂದ ತಿಂಗಳುಗಳವರೆಗೆ ಹೊಟ್ಟೆನೋವು ಉಬ್ಬರ, ಗ್ಯಾಸ್, ಭೇಧಿ ಅಥವಾ ಮಲಬದ್ಧತೆಯಿಂದ ಕಂಗೆಡಬಹುದು, ಇದಕ್ಕೆ ಹೆಚ್ಚಿನ ಚಿಕಿತ್ಸೆಯ ಅವಶ್ಯಕತೆ ಇರುವುದಿಲ್ಲ. ಆದರೆ ತಜ್ಞವೈದ್ಯರೊಂದಿಗೆ ಸಮಾಲೋಚನೆಯ ಅವಶ್ಯಕತೆ ಇರುತ್ತದೆ ಎಂದರು.

> **ಎದೆಉರಿ, ವಾಂತಿ, ಕೆಮ್ಮು, ಗಂಟಲು ನೋವು, ಎದೆನೋವು, ಹೊಟ್ಟೆನೋವು ಇವು ಹೆಚ್ಚಿದ ಆಮ್ಲೀಯತೆಗೆ ಸಂಬಂಧಿಸಿದ ಮುಖ್ಯ ಸೂಚನೆಗಳಾಗಿವೆ. ಧೂಮಪಾನ, ಮದ್ಯಪಾನ, ಮಸಾಲೆ, ಕೊಬ್ಬು ಹೆಚ್ಚಾಗಿರುವ ಆಹಾರ, ಪಾನೀಯಗಳನ್ನು ತ್ಯಜಿಸುವುದು, ನೋವು ನಿವಾರಕ ಮಾತ್ರೆಗಳನ್ನು ಆದಷ್ಟು ಕಡಿಮೆ ಸೇವಿಸುವುದರಿಂದ ಇದನ್ನು ನಿಯಂತ್ರಿಸಬಹುದು ಎಂದು ಡಾ. ಪ್ರಕಾಶ್ ತಿಳಿಸಿದರು.**

ಮಲದಲ್ಲಿ ರಕ್ತ: ಇದು ಸಾಮಾನ್ಯ ಗುದನಾಳದಲ್ಲಿ ಆಗುವ ಗಾಯ(ಈಡಿಣಡಿಜ)ದಿಂದ ಮತ್ತು ಮೂಲವ್ಯಾಧಿಯಿಂದ ಕಾಣಿಸಬಹುದು.

> **ಹಲವು ಉದರ ಸಂಬಂಧಿ ರೋಗಗಳನ್ನು ನಿಯಮಿತ ತಪಾಸಣೆ, ಸುಧಾರಿಸಿದ ಜೀವನ/ಆಹಾರ ಶೈಲಿ, ಅಪಾಯಕಾರಿ ರೋಗಲಕ್ಷಣಗಳ ಬಗ್ಗೆ ನಿಗಾ ಇಡುವುದರಿಂದ ಹತೋಟಿಯಲ್ಲಿಡಬಹುದು ಎಂದು ಡಾ. ಪ್ರಕಾಶ ಮತ್ತಿಹಳ್ಳಿ ಕಿವಿಮಾತು ಹೇಳಿದರು.**

ಪಿತ್ತಕೋಶದ ವೈಫಲ್ಯ ಮತ್ತು ಕರುಳಿನ ಕ್ಯಾನ್ಸರ್ ನಲ್ಲೂ ಕೂಡ ರಕ್ತಭೇದಿ ಕಾಣಿಸಬಹುದು.ಇನ್ನು ಪಿತ್ತಕೋಶದ ಖಾಯಿಲೆಗಳಾದ, ವೈರಸ್ ಸೋಂಕಿನ ಉರಿಯೂತ, ಪಿತ್ತಕೋಶದ ಕ್ಯಾನ್ಸರ್ ಮತ್ತು ಸಿರೋಸಿಸ್ ಎಂಬ ಪಿತ್ತಕೋಶದ ವೈಫಲ್ಯದ ಕೊನೆಯ ಸ್ಥಿತಿಯಾಗಿದೆ.

ಶುದ್ಧವಾದ ನೀರು, ಆಹಾರ ಸೇವನೆಯಿಂದ ಮತ್ತು ಕ್ರಮಬದ್ಧವಾದ ರಕ್ತ (Transfusion) ನಿಂದ ವೈರಸ್(Hepatitis A,B,C,D,E) ಸೋಂಕನ್ನು ತಡೆಗಟ್ಟಬಹುದು ಎಂದು ಹೇಳಿದರು.

ಉದರ ರೋಗ ಮುನ್ಸೂಚನೆಯುಳ್ಳ ರೋಗಿಗೆ ತಜ್ಞವೈದ್ಯರಿಂದ ತಪಾಸಣೆ, ರೋಗ ಪತ್ತೆ ಮತ್ತು ಹೆಚ್ಚಿನ ಚಿಕಿತ್ಸೆಯ ಅವಶ್ಯಕತೆ ಇರುತ್ತದೆ. ಇವುಗಳಲ್ಲಿ ಹಲವು ರೋಗಗಳನ್ನು ಔಷಧಿಗಳಿಂದ ಗುಣಪಡಿಸಿದರೆ ಕೆಲವಕ್ಕೆ ಶಸ್ತ್ರಚಿಕಿತ್ಸೆಯ ಅಗತ್ಯವಿರುತ್ತದೆ. ಉದರ ರೋಗ ಪತ್ತೆಗೆ ಆಧುನಿಕ ವಿಧಾನಗಳಾದ– ಸ್ಕ್ಯಾನಿಂಗ್, ಎಂಡೋಸ್ಕೋಪಿ(ಉದರದರ್ಶಕ) ರಕ್ತಸ್ರಾವ ತಡೆಗೆ ಸ್ಕ್ಲೀರೋಥರಪಿ(ಸ್ಕ್ಲೀರೋ), ಪಿತ್ತಕೋಶ ಬದಲಾವಣೆಯಂಥ ಆಧುನಿಕ ಚಿಕಿತ್ಸೆ ಬೇಕಾಗಬಹುದು. ಉದರದ ಭಾಗಗಳ ಕ್ಯಾನ್ಸರ್ ಚಿಕಿತ್ಸೆಯನ್ನು ಶಸ್ತ್ರಚಿಕಿತ್ಸೆ ಮತ್ತು ಕೀಮೋಥೆರಪಿ ಮೂಲಕ ನೀಡಲಾಗುತ್ತದೆ ಎಂದು ಚಿಕಿತ್ಸಾ ವಿಧಾನದ ಅರಿವು ಮೂಡಿಸಿದರು.

ಕಾರ್ಯಕ್ರಮದಲ್ಲಿ ಮಕ್ಕಳ ಆಸ್ಪತ್ರೆಯ ನಿರ್ದೇಶಕರಾದ ಡಾ. ಗುರುಪ್ರಸಾದ್, ಹಿರಿಯ ಮಕ್ಕಳ ತಜ್ಞ ಡಾ. ಬಾಣಾಪುರ್ ಮಠ್, ಬಾಪೂಜಿ ಆಸ್ಪತ್ರೆ ನಿರ್ದೇಶಕರಾದ ಡಾ. ಕುಮಾರ್, ಡಾ. ಪ್ರಶಾಂತ್ ಕುಮಾರಿ, ವ್ಯವಸ್ಥಾಪಕರಾದ ಶ್ರೀ ಸಿದ್ದೇಶ್ವರ ಗುಬ್ಬಿ, ಡಾ. ರಮೇಶ್, ಡಾ. ಮೃತ್ಯುಂಜಯ, ಮಕ್ಕಳ ಪೋಷಕರು, ನರ್ಸಿಂಗ್ ವಿದ್ಯಾರ್ಥಿಗಳು ಹಾಗೂ ಆಸ್ಪತ್ರೆಯ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ಟೆನ್ನಿಸ್ ಕ್ರೀಡಾ ಚಟುವಟಿಕೆಗಳಿಗೆ ಸಂಪೂರ್ಣ ಸಹಕಾರ: ಸಚಿವ ಎಸ್.ಎಸ್ ಮಲ್ಲಿಕಾರ್ಜುನ್

**ದಾವಣಗೆರೆ/ ಬೆಂಗಳೂರು:** ಕ್ರೀಡೆಗಳಿಗೆ ಅಗತ್ಯವಾದ ನೆರವನ್ನು ನೀಡಲು ಹಾಗೂ ಕ್ರೀಡಾ ಚಟುವಟಿಕೆಗಳ ಆಯೋಜಕರಿಗೆ ಪ್ರೋತ್ಸಾಹಿಸಲು ಸದಾ ಜೊತೆಗಿರುವೆ ಎಂದು ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕಾ ಮತ್ತು ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್ ಮಲ್ಲಿಕಾರ್ಜುನ್ ಅವರು ತಿಳಿಸಿದರು.

ಬೆಂಗಳೂರಿನ ಸದಾಶಿವನಗರದಲ್ಲಿನ ತಮ್ಮ ಗೃಹ ಕಚೇರಿಯಲ್ಲಿ ನೂತನ ದಾವಣಗೆರೆ ಜಿಲ್ಲಾ ಟೆನ್ನಿಸ್ ಅಸೋಸಿಯೇಷನ್ ಪ್ರತಿನಿಧಿಗಳಿಂದ ಸನ್ಮಾನ ಸ್ವೀಕರಿಸಿ ಅನಿಸಿಕೆ ವ್ಯಕ್ತಪಡಿಸಿದರು.

ಈಗಾಗಲೇ ದಾವಣಗೆರೆಯಲ್ಲಿ ಅಂತರಾಷ್ಟ್ರೀಯ ಮಟ್ಟದ ವ್ಯವಸ್ಥಿತ ಕೋರ್ಟ್ ಒದಗಿಸಿದ್ದು ಮುಂದೆಯೂ ಸಹ ಇನ್ನು ಹೆಚ್ಚಿನ ರೀತಿಯಲ್ಲಿ ಸಹಕಾರ ನೀಡಲು ಮುಂದಾಗಿದ್ದೇವೆ ಎಂದು ತಿಳಿಸಿದ ಸಚಿವರು ಟೆನ್ನಿಸ್ ಕ್ರೀಡೆ ಸೇರಿದಂತೆ ಎಲ್ಲಾ ಕ್ರೀಡಾ ಚಟುವಟಿಕೆಗಳ ಬೆಳವಣಿಗೆಗೆ ನಮ್ಮ ಸರ್ಕಾರ ಹಾಗೂ ಕಾಂಗ್ರೆಸ್ ಪಕ್ಷವು ಬದ್ದವಾಗಿದೆ ಎಂದರು.



ಈ ಸಂದರ್ಭದಲ್ಲಿ ನೂತನ ದಾವಣಗೆರೆ ಜಿಲ್ಲಾ ಟೆನ್ನಿಸ್ ಅಸೋಸಿಯೇಷನ್ ಕಾರ್ಯದರ್ಶಿ ಅರ್ಕಿಟೆಕ್ಟ್ ನಂದಗೋಪಾಲ್ ಜಿ.ಇ, ಖಜಾಂಚಿ ರಾಘುರಾಜ್ ರಾಜನಹಳ್ಳಿ, ನಿರ್ದೇಶಕರಾದ ಶಿವಕುಮಾರ್ ಸವಣೂರು, ಶ್ರೀನಿವಾಸ್ ರಾಜನಹಳ್ಳಿ, ವಿನೋದ್ ಕುಮಾರ್ ಜೈನ್, ಮಹೇಶ್ ಶೆಟ್ಟಿ, ನಿಂಗನಗೌಡ, ವಿನಯ್ ಎಸ್.ಕೆ, ಶ್ರೀಕರ್ ಪುನೀತ್, ಹರೀಶ್ ಸಿ.ಎನ್ ಹಾಗೂ ದವನ್ ಕಾಲೇಜು ಕಾರ್ಯದರ್ಶಿ ವೀರೇಶ್ ಪಟೇಲ್, ಅಜೀವ ಸದಸ್ಯರಾದ ಸಿಂಡಿಕೇಟ್ ಸದಸ್ಯ ಪ್ರಶಾಂತ್ ಎನ್.ಸಿ, ಮತ್ತು ಉದ್ಯಮಿ ರಮೇಶ್ ಕೆ.ಎಸ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಸೊರಬ ತಾಲ್ಲೂಕು ಮಟ್ಟದ ಕ್ರೀಡಾಕೂಟ

**ಶಿವಮೊಗ್ಗ:** ನೆಹರು ಯುವ ಕೇಂದ್ರ, ಶಿವಮೊಗ್ಗ ಹಾಗೂ ಸಿರಿಶ್ರೀ ಮಹಿಳಾ ಸಂಘ, ಕದಂಬ ಯುವಕ ಸಂಘ, ಸೊರಬ ಇವರ ಸಹಯೋಗದೊಂದಿಗೆ ಸೊರಬ ತಾಲ್ಲೂಕು ಮಟ್ಟದ ಕ್ರೀಡಾಕೂಟವನ್ನು ಉಳವಿಯ ಸರ್ಕಾರಿ ಪಿ.ಯು ಕಾಲೇಜು,ಪ್ರೌಢಶಾಲಾ ಆವರಣದಲ್ಲಿ ದಿನಾಂಕ 08.03.2025 ರ ಶನಿವಾರ ಆಯೋಜಿಸಲಾಗಿದೆ.ಈ ಕ್ರೀಡಾಕೂಟದಲ್ಲಿ ಪುರುಷರಿಗೆ ಹಾಗೂ ಮಹಿಳೆಯರಿಗೆ ಪ್ರತ್ಯೇಕ ವಿಭಾಗಗಳಿದ್ದು 15 ರಿಂದ 29 ವರ್ಷದ ಒಳಗಿನವರು ಭಾಗವಹಿಸಬಹುದಾಗಿದೆ. ದೆ. ಆಸಕ್ತ ಸ್ಪರ್ಧಿಗಳು ದಿನಾಂಕ 08.03.2025 ರಂದು ಬೆಳಿಗ್ಗೆ 9 ಗಂಟೆಯ ಒಳಗೆ ಸ್ಥಳದಲ್ಲಿ ಹಾಜರಿರಬೇಕೆಂದು ನೆಹರು ಯುವ ಕೇಂದ್ರದ ಜಿಲ್ಲಾ ಯುವ ಅಧಿಕಾರಿ ಶ್ರೀ. ಉಲ್ಲಾಸ್ ಕೆ.ಟಿ.ಕೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿಧನ ಸುದ್ದಿಗಳು

### ಹಳೇಬಾತಿ ಶ್ರೀಮತಿ ಶಾಂತಮ್ಮ ನಿಧನ

**ದಾವಣಗೆರೆ** : ತಾಲ್ಲೂಕು ಹಳೇಬಾತಿ ಗ್ರಾಮದ ವಾಸಿ ದೊಡ್ಡ ಗೌಡ್ರ ದಿ. ಹನುಮಂತಪ್ಪನವರ ಧರ್ಮಪತ್ನಿ ಶ್ರೀಮತಿ ಶಾಂತಮ್ಮನವರುದಿನಾಂಕ : 06.03.2025ರ ಗುರುವಾರ ರಾತ್ರಿ 10.20 ಗಂಟೆಗೆ ನಿಧನರಾದರು. ಮೃತರಿಗೆ 70 ವರ್ಷ ವಯಸ್ಸಾಗಿತ್ತು. ಇಬ್ಬರು ಪುತ್ರರು, ಮೂವರು ಪುತ್ರಿಯರು, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿರುವ ಮೃತರ 'ಅಂತ್ಯಕ್ರಿಯೆಯನ್ನು ದಿನಾಂಕ : 07.03.2025ರ ಶುಕ್ರವಾರ ಮಧ್ಯಾಹ್ನ 12 ಗಂಟೆಗೆ ಸ್ವಂತ ಜಮೀನಿನಲ್ಲಿ ನೆರವೇರಿಸಲಾಯಿತು.

### ಬಸವನಗೌಡ ನಿಧನ

**ಸಾಸ್ವೆಹಳ್ಳಿ:** ಹೊನ್ನಾಳಿ ತಾಲೂಕು ಬೀರಗೊಂಡನಹಳ್ಳಿ ಗ್ರಾಮದ ಸಾಸ್ವೆಹಳ್ಳಿ ವಿಎಸ್‌ಎಸ್ ಎನ್ ಬ್ಯಾಂಕ್ ಮಾಜಿ ಅಧ್ಯಕ್ಷ ಗೌಡ್ರ ಸಣ್ಣಭದ್ರಪ್ಪರ ಬಸವನಗೌಡ (53) ಮಂಗಳವಾರ ನಿಧನರಾಗಿದ್ದಾರೆ. ರಾತ್ರಿ ಮೃತರಿಗೆ ಪತ್ನಿ, ಒಬ್ಬ ಪುತ್ರ, ಒಬ್ಬ ಪುತ್ರಿ ಇದ್ದಾರೆ. ಅಂತ್ಯಕ್ರಿಯೆ ಬುಧವಾರ ಸಂಜೆ ಹಿಂದೂ ರುದ್ರಭೂಮಿಯಲ್ಲಿ ನಡೆಯಿತು.

### ದ್ಯಾಮೇನಹಳ್ಳಿ ಪಾರ್ವತಮ್ಮ ನಿಧನ

**ಹಿರೇಕೋಗಲೂರು:** ದಾವಣಗೆರೆ ತಾಲೂಕಿನ ಕುಕ್ಕವಾಡ ಗ್ರಾಮದ ದ್ಯಾಮೇನಹಳ್ಳಿ ಪಾರ್ವತಮ್ಮ (86) ಗುರುವಾರ ನಿಧನರಾಗಿದ್ದಾರೆ. ಮೃತರಿಗೆ ಮೂವರು ಪುತ್ರರು, ಒಬ್ಬ ಪುತ್ರಿ ಇದ್ದಾರೆ. ಶುಕ್ರವಾರ ಮೃತರ ಜಮೀನಿನಲ್ಲಿ ಅಂತ್ಯಕ್ರಿಯೆ ನೆರವೇರಿದೆ ಎಂದು ಮೃತರ ಸಂಬಂಧಿಗಳು ತಿಳಿಸಿದ್ದಾರೆ.

## ಸಾರಿಗೆ ಅಧಿಕಾರಿಗಳ ಕರ್ತವ್ಯಲೋಪ ಆರೋಪ; ಕಾನೂನು ಕ್ರಮಕ್ಕೆ ಮನವಿ

**ದಾವಣಗೆರೆ:** ದಾವಣಗೆರೆಯ ಸಾರಿಗೆ ಅಧಿಕಾರಿ ಕರ್ತವ್ಯ ಲೋಪ ಎಸಗಿದ್ದಾರೆ ಎಂದು ಆರೋಪಿಸಿ, ಅವರ ವಿರುದ್ಧ ಸೂಕ್ತ ರೀತಿ ಕಾನೂನು ಕ್ರಮ ಕೈಗೊಳ್ಳುವಂತೆ ಕೋರಿ ಕರ್ನಾಟಕ ಚಾಲಕರ ಒಕ್ಕೂಟದಿಂದ ಉಪವಿಭಾಗಾಧಿಕಾರಿಗಳ ಮೂಲಕ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಲಾಯಿತು.: ದಾವಣಗೆರೆಯ ಸಾರಿಗೆ ಅಧಿಕಾರಿ ಕರ್ತವ್ಯ ಲೋಪ ಎಸಗಿದ್ದಾರೆ ಎಂದು ಆರೋಪಿಸಿ, ಅವರ ವಿರುದ್ಧ ಸೂಕ್ತ ರೀತಿ ಕಾನೂನು ಕ್ರಮ ಕೈಗೊಳ್ಳುವಂತೆ ಕೋರಿ ಕರ್ನಾಟಕ ಚಾಲಕರ ಒಕ್ಕೂಟದಿಂದ ಉಪವಿಭಾಗಾಧಿಕಾರಿಗಳ ಮೂಲಕ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಲಾಯಿತು.ಇದೇ ವೇಳೆ ಒಕ್ಕೂಡದ ಜಿಲ್ಲಾಧ್ಯಕ್ಷ ಪಿ.ಬಿ. ಅಂಜುಕುಮಾರ್ ಮಾತನಾಡಿ, ಈಗ್ಗೆ ಒಂದು ತಿಂಗಳಿಂದ ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಅನಧಿಕೃತ ರ್ಯಾಪಿಡೋ ಬೈಕ್ ಟ್ಯಾಕ್ಸಿಯನ್ನು ರದ್ದುಗೊಳಿಸುವಂತೆ ಕೋರಿ ಕಳೆದ ತಿಂಗಳು ಸಾರಿಗೆ ಇಲಾಖೆಗೆ ಮನವಿ ನೀಡಲಾಗಿತ್ತು. ಎರಡು ಬಾರಿ ಪತ್ರಿಕಾಗೋಷ್ಠಿ ನಡೆಸಿ ಅನಧಿಕೃತ ಬೈಕ್, ಟ್ಯಾಕ್ಸಿಗಳ ವಿರುದ್ಧ ಕಾರ್ಯಾಚರಣೆ ನಡೆಸಿ ಕಾನೂನು ರೀತಿಯಲ್ಲಿ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿ ಒತ್ತಾಯಿಸಿದ್ದರೂ ಇಂದಿಗೂ ದಾವಣಗೆರೆಯ ಸಾರಿಗೆ ಅಧಿಕಾರಿಗಳು ಅನಧಿಕೃತ ರಾಪಿಡೋ ಬೈಕ್ ಟ್ಯಾಕ್ಸಿಗಳ ವಿರುದ್ಧ ಯಾವುದೇ ರೀತಿಯ ಕಾರ್ಯಾಚರಣೆಯನ್ನಾಗಲೀ, ಕ್ರಮವನ್ನಾಗಲೀ ಕೈಗೊಂಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.ಸಾರಿಗೆ ಅಧಿಕಾರಿಗಳ ನಿರ್ಲಕ್ಷ್ಯದಿಂದ ನಗರದಲ್ಲಿ ಅವ್ಯಾಹತವಾಗಿ ಅನಧಿಕೃತ ಬೈಕ್ ಟ್ಯಾಕ್ಸಿಗಳು ಸಂಚರಿಸುತ್ತಿದ್ದು, ಇದರಿಂದ ನಮ್ಮಂತಹ ಆಟೋ ಚಾಲಕರಿಗೆ ತೊಂದರೆಯುಂಟಾಗಿದೆ. ಸದರಿ ವಿಚಾರವಾಗಿ ಸಾರಿಗೆ ಅಧಿಕಾರಿಗಳು ಕ್ರಮ ಕೈಗೊಳ್ಳದೇ ಇರುವುದರಿಂದ ಇಂದು ಮಧ್ಯಾಹ್ನ 12.30ರ ಸುಮಾರಿನಲ್ಲಿ ಅನಧಿಕೃತ ರಾಪಿಡೋ ಬೈಕ್ ಟ್ಯಾಕ್ಸಿಗಳು ಸಕ್ರಿಯವಾಗಿರುವುದನ್ನು ಸಾಕ್ಷಿ ಸಮೇತ ಸಾಬೀತುಪಡಿಸಲು ದಾವಣಗೆರೆಯ ಸಾರಿಗೆ ಇಲಾಖೆಗೆ ತೆರಳಿ ಸ್ಥಳದಲ್ಲೇ ಆನಧಿಕೃತ ರಾಪಿಡೋ ಬೈಕ್ಸ್ ಟ್ಯಾಕ್ಸಿಯನ್ನು ಸಾರಿಗೆ ಅಧಿಕಾರಿಗಳಾದ ಪ್ರಮುಥೇಶ್ ಅವರಿಗೆ ತೋರಿಸಲು ಅವರ ದೂರವಾಣಿ ಸಂಖ್ಯೆಗೆ ಕರೆ ಮಾಡಿ ಮನವಿ ಮಾಡಿದರೂ ಸ್ಪಂದಿಸದೇ ಕರ್ತವ್ಯಲೋಪ ಎಸಗಿದ್ದಾರೆ ಎಂದು ಕಿಡಿಕಾರಿದ ಅವರು, ಇವರ ವಿರುದ್ಧ ಕರ್ತವ್ಯಲೋಪದಡಿ ಕ್ರಮಕೈಗೊಳ್ಳಬೇಕು ಮತ್ತು ನಗರದ ಆಟೋ ಚಾಲಕರು ಹಾಗೂ ಕಾರು ಚಾಲಕರಿಗೆ ಮಾರಕವಾಗಿರುವ ಅನಧಿಕೃತ ರಾಪಿಡೋ ಬೈಕ್ ಟ್ಯಾಕ್ಸಿಯ ವಿರುದ್ಧ ಕಾನೂನು ರೀತಿ ಶಿಸ್ತು ಕ್ರಮಕೈಗೊಂಡು ನಮಗೆ ನ್ಯಾಯ ಕೊಡಿಸಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ರಾಜ್ಯ ಸಂಚಾಲಕರಾದ ಡಿ.ಆರ್. ಅರವಿಂದಾಕ್ಷ, ಪ್ರಧಾನ ಕಾರ್ಯಾಧ್ಯಕ್ಷರಾದ ಜಯರಾಮ್, ಶಿವಕುಮಾರ್, ಹೆಚ್. ಹರೀಶ್ ಸೇರಿದಂತೆ ಇನ್ನು ಹಲವು ಪದಾಧಿಕಾರಿಗಳು ಹಾಜರಿದ್ದರು.

# ಗಾಂಧೀಜಿಯವರ ಪರಿಕಲ್ಪನೆಯಲ್ಲಿ ಕೆಲಸ ಮಾಡಿ: ಸಂಸದೆ ಡಾ ಪ್ರಭಾಮಲ್ಲಿಕಾರ್ಜುನ್

**ಮಲೇಬೆನ್ನೂರು:** ಮಹಾತ್ಮ ಗಾಂಧೀಜಿಯವರ ಪರಿಕಲ್ಪನೆಯಲ್ಲಿ ಗ್ರಾಮಪಂಚಾಯಿತಿಗಳು ಕೆಲಸ ನಿರ್ವಹಿಸ ಬೇಕು. ಕುಡಿಯುವ ನೀರು, ಶೌಚಾಲಯ, ಗ್ರಾಮ ನೈರ್ಮಲ್ಯ ಇಂತವುಗಳ ಕಡೆ ಹೆಚ್ಚು ಗಮನ ಹರಿಸಲು ಸಂಸದೆ ಡಾ ಪ್ರಭಾಮಲ್ಲಿಕಾರ್ಜುನ್ ಕರೆ ನೀಡಿದರು.

ಸಮೀಪದ ಕುಂಬಳೂರು ಗ್ರಾಮದ ಗ್ರಾಮ ಪಂಚಾಯಿತಿಯ "ಗ್ರಾಮಸೌಧ" ಉದ್ಘಾಟನಾ ಸಮಾರಂಭ ಉದ್ದೇಶಿಸಿ ಮಾತನಾಡಿದರು

ಸರ್ಕಾರ ವಸತಿ ರಹಿತ ಗ್ರಾಮೀಣಿಗರಿಗೆ ಸೂರು ಕಲ್ಪಿಸುವ ವಸತಿ ಯೋಜನೆ ಅವಶ್ಯಕತೆ ಇದೆ ಎಂದು ಕಾರ್ಯಕ್ರಮ ಉದ್ಘಾಟಿಸಿ ಶಾಸಕ ಬಿ.ಪಿ. ಹರೀಶ್ ಮಾತನಾಡಿದರು.

ಎಲ್ಲೆಡೆ ಗ್ರಾಮ ಪಂಚಾಯತಿ ಸದಸ್ಯರು ಮನವಿ ಮಾಡುತ್ತಿದ್ದು ರಾಜ್ಯ ಹಾಗೂ ಕೇಂದ್ರ ಸರ್ಕಾರದ ಮೇಲೆ ಸಂಸದರು ಒತ್ತಡ ಹಾಕುವಂತೆ ಮನವಿ ಮಾಡಿದರು.

ಭದ್ರಾ ನಾಲೆ ನೀರಿನ ಸಮಸ್ಯೆ ಪರಿಹಾರಕ್ಕೆ ಡಿಬಿಕರೆ ಪಿಕಪ್ ಹಾಗೂ ಭೈರನಪಾದ ಯೋಜನೆಯೊಂದೆ ಕೊನೆಭಾಗದ ರೈತರ ಆಶಾಕಿರಣ. ಸರ್ಕಾರ ರೂ 150 ಕೋಟಿ ಮೀಸಲಿಟ್ಟು ಯೋಜನೆ ಪ್ರಾರಂಭ ಮಾಡಬೇಕು ಎಂದರು



ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ ಮಾತನಾಡಿ, ಅಧಿಕಾರಿಗಳು ಗ್ರಾಮೀಣ ಪ್ರದೇಶದ ಜನರ ಸಮಸ್ಯೆ ಪರಿಹರಿಸುವತ್ತ ಜನರ ಮನೆಗೆ ತೆರಳಿ ಸಮೀಕ್ಷೆ ಮಾಡಿ ಕ್ರಿಯಾ ಯೋಜನೆ ರೂಪಿಸಿ ಕೆಲಸ ಮಾಡಿ ಎಂದರು.

ಸಮುದಾಯ ಭವನ ಹಾಗೂ ಹೈ ಮಾಸ್ಟ್ ದೀಪ ಅಳವಡಿಸಲು ಒಟ್ಟು ರೂ 20 ಲಕ್ಷ ಅನುದಾನ ನೀಡಲಾಗಿದೆ. ವಸತಿ ಯೋಜನೆಯ ಅನುದಾನಕ್ಕೆ ಸರ್ಕಾರದ ಹಂತದಲ್ಲಿ ಚರ್ಚಿಸುತ್ತೇವೆ ಎಂದರು.

ಎಸ್‌ಎಸ್ ಕೇರ್ ಸಂಸ್ಥೆಯಿಂದ ಉಚಿತ ಚಿಕಿತ್ಸೆ ಯೋಜನೆ ಕುರಿತು ಮಾಹಿತಿ ನೀಡಿ, ರಾಜ್ಯ ಹೆದ್ದಾರಿ-25ನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೆ ಏರಿಸುವ ಯೋಜನೆ ಕೇಂದ್ರ ಸಚಿವ ನಿತಿನ್ ಗಡ್ಕರಿ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ತಿಳಿಸಿದರು.

ಗ್ರಾಮ ಪಂಚಾಯತಿ ಅಧ್ಯಕ್ಷೆ ಉಮಾದೇವಿ ಅಧ್ಯಕ್ಷತೆ ವಹಿಸಿದ್ದರು.

ತಾಲ್ಲೂಕು ಪಂಚಾಯತಿ ಇಒ ಸುಮಲತಾ, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ನಂದಿಗಾವಿ ಶ್ರೀನಿವಾಸ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಬಿದ್ ಅಲಿ, ಡಿಸಿಸಿ ಬ್ಯಾಂಕ್ ನಿರ್ದೇಶಕ ಹನಗವಾಡಿ ಕುಮಾರ್, ಜನಜಾಗೃತಿ ಸಮಿತಿ ಸದಸ್ಯ ಪಟೇಲ್ ಮಂಜುನಾಥ್, ಆನಂದಪ್ಪ, ಕಾಮರಾಜ್ , ತೀರ್ಥಪ್ಪ, ಏಕಾಂತಪ್ಪ ನಿಟ್ಟೂರು, ನಾಗೇಶ್, ಆದಾಪುರ ಹನುಮಂತಪ್ಪ, ಗ್ರಾಮ ಪಂಚಾಯತಿ ಸದಸ್ಯರು, ಗ್ರಾಮಸ್ಥರು, ಸಿಬ್ಬಂದಿ ಇದ್ದರು. ಪಿಡಿಒ ನರಸಿಂಹಮೂರ್ತಿ ಸ್ವಾಗತಿಸಿ, ವಂದಿಸಿದರು.

## ಶ್ರೀಮಂತ ಭಾರತ, ಬಡ ಭಾರತವನ್ನು ನಿರ್ಲಕ್ಷಿಸಿದೆ

**ಶಿವಮೊಗ್ಗ:** ರಾಷ್ಟ್ರ ನಿರ್ಮಾಣದ ಗುರುತರ ಕಾರ್ಯದಲ್ಲಿ ದೇಶದ ಪ್ರತಿಯೊಬ್ಬ ನಾಗರಿಕನಿಗೂ ನೈಸರ್ಗಿಕ ಸಂಪನ್ಮೂಲಗಳು, ಜ್ಞಾನ ಶಾಖೆಗಳ ಮುಕ್ತ ಅವಕಾಶ ಇರಬೇಕು ಎಂದು ದೆಹಲಿಯ ಪರಿಸರ ಶಿಕ್ಷಣ ಕೇಂದ್ರದ ನಿರ್ದೇಶಕ ಡಾ. ಅಶೋಕ್ ಖೋಸ್ಲಾ ಅಭಿಪ್ರಾಯಪಟ್ಟರು.ಕುವೆಂಪು ವಿಶ್ವವಿದ್ಯಾಲಯದ ಬಸವ ಸಭಾ ಭವನದಲ್ಲಿ ಸೋಮವಾರ ಆರಂಭವಾದ ಐದು ದಿವಸಗಳ ಹವಾಮಾನ ಉತ್ಸವವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಭಾರತೀಯ ಪರಂಪರೆಯಲ್ಲಿ ಸಾಮಾಜಿಕ ಅಸಮಾನತೆ, ಜಾತಿ ಆಧಾರಿತ ಹಿಂಸೆ, ಬಡವ ಶ್ರೀಮಂತರ ನಡುವಿನ ಅಂತರ ಹಾಸುಹೊಕ್ಕಾಗಿದೆ ಎಂದರು. ಒಂದೆಡೆ ಸುಮಾರು 50 ಕೋಟಿ ಶ್ರೀಮಂತ ಭಾರತೀಯರು ಅಮೆರಿಕ, ಯುರೋಪ್ ನಂತಹ ದೇಶಗಳ ಪ್ರಜೆಗಳಿಗೆ ಸರಿಸಮಾನರಾಗಿ ಜೀವನಶೈಲಿಯನ್ನು ನಡೆಸುತ್ತಿದ್ದರೆ, ಉಳಿದ 80 ಕೋಟಿ ಜನ ಬಡ ಭಾರತೀಯರು ನಿಕೃಷ್ಟವಾದ ಜೀವನ ನಡೆಸುತ್ತಿರುವುದು ದುರಂತ. ಈ ಶ್ರೀಮಂತ ಭಾರತ, ಬಡ ಭಾರತವನ್ನು ಕಂಡೂ ಕಾಣದಂತೆ ಬದುಕುತ್ತಿರುವುದು ಬಹುದೊಡ್ಡ ದುರಂತ ಎಂದರು. ದೇಶದ ಸುಮಾರು 20 ಕೋಟಿ ಜನರಿಗೆ ಆರೋಗ್ಯಕರವಾದ ಕುಡಿಯುವ ನೀರು ಸಿಗುತ್ತಿಲ್ಲ. ಬಡತನ, ಪರಿಸರ ನಾಶವು, ಪರಿಸರ ನಿರಾಶ್ರಿತರನ್ನು ಸೃಷ್ಟಿಸುತ್ತಿದೆ. ಹವಾಮಾನ ವೈಪರೀತ್ಯದಿಂದ ಪ್ರತಿವರ್ಷ ದೇಶದಲ್ಲಿ 10000 ಚದರ ಕಿಲೋ ಮೀಟರ್ ನಷ್ಟು ಮರುಭೂಮಿ ಸೃಷ್ಟಿಯಾಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು. ನವ ಉದಾರೀಕರಣದ ಆರ್ಥಿಕ ನೀತಿ ಪರಿಸರ, ಜೀವವೈವಿಧ್ಯತೆಯನ್ನು ಕಡಗಣಿಸಿ ಕೇವಲ ಜಿಡಿಪಿಯಂತಹ ಶುಷ್ಕ ಮಾನದಂಡಗಳಿಗೆ ಮಾನ್ಯತೆ ನೀಡುತ್ತಿರುವುದರಿಂದ ಬಡವ ಶ್ರೀಮಂತರ ನಡುವಿನ ಅಂತರ ಹೆಚ್ಚುತ್ತಲೇ ಇದೆ. ಈ ಹಿನ್ನೆಲೆಯಲ್ಲಿ ಭವಿಷ್ಯತ್ತಿನ ಸುಸ್ಥಿರ ಆರ್ಥಿಕತೆ, ಆರೋಗ್ಯಕರ ಮತ್ತು ಸಮಗ್ರ ಅಭಿವೃದ್ಧಿ ನೀತಿಯನ್ನು ಅಳವಡಿಸಿಕೊಳ್ಳಬೇಕಿದೆ ಎಂದು ಸಲಹೆ ನೀಡಿ-ದರು. ಕುಲಪತಿ ಪ್ರೊ. ಶರತ್ ಅನಂತಮೂರ್ತಿ ಮಾತನಾಡಿ, ಅಭಿವೃದ್ಧಿಯ ಪರಿಕಲ್ಪನೆ ಪರಿಸರ, ಅರಣ್ಯ, ಜೀವವೈವಿಧ್ಯತೆಯಂತಹ ಸುಸ್ಥಿರ ಅಂಶಗಳನ್ನು ಪರಿಗಣಿಸಬೇಕಿದೆ ಎಂದರು. ಕುಲಸಚಿವ ಎ. ಎಲ್. ಮಂಜುನಾಥ್, ಅಜೀಂ ಪ್ರೇಮ್ ಜಿ ವಿವಿಯ ಎಸ್. ವಿ. ಮಂಜುನಾಥ್, ಪ್ರೊ. ಜೆ. ನಾರಾಯಣ, ಡಾ. ಯೋಗೇಂದ್ರ, ಪ್ರೊ. ಬಿ. ತಿಪ್ಪೇಸ್ವಾಮಿ, ಪ್ರೊ. ವಿಜಯಕುಮಾರ, ಸುಮಾರು 2000 ಶಾಲಾ ವಿದ್ಯಾರ್ಥಿಗಳು ಇದ್ದರು. ಐದು ದಿವಸಗಳ ಕಾಲ ನಡೆಯುವ ಉತ್ಸವದಲ್ಲಿ ಭಾರತದ ವೈವಿಧ್ಯಮಯ ಪರ್ವತಶ್ರೇಣಿಯ ಕುರಿತ ವಸ್ತುಪ್ರದರ್ಶನ, ಸಾಂಸ್ಕೃತಿಕ ಕಾರ್ಯಕ್ರಮಗಳು, ಪಡಿಸರ ನಡಿಗೆ, ಸಾಕ್ಷ್ಯಚಿತ್ರ ಪ್ರದರ್ಶನ ಜರುಗಲಿವೆ.

## ಅಕ್ರಮವಾಗಿ ಕಟ್ಟಡ ನಿರ್ಮಿಸಿಕೊಂಡಿರುವವರ ವಿರುದ್ಧ ಕ್ರಮ ಕೈಗೊಳ್ಳಲು ಆಗ್ರಹ

**ಭದ್ರಾವತಿ:** ನಗರಸಭೆ ವ್ಯಾಪ್ತಿಯ ಜನ್ನಾಪುರ, ಫಿಲ್ಟರ್ ಶೆಡ್, ಸರ್ವೆ ನಂ. 7ರಲ್ಲಿ ಕಾನೂನು ಬಾಹಿರವಾಗಿ ನಿರ್ಮಿಸಿರುವ ಕಟ್ಟಡದ ಜಾಗ-ಕ್ಕೆ ವಿಐಎಸ್‌ಎಲ್ ನಗರಾಡಳಿತ ವತಿಯಿಂದ ಸರ್ವೆ ನಡೆಸಿ ಜಾಗದ ಬಗ್ಗೆ ಸ್ಪಷ್ಟ ಮಾಹಿತಿ ನೀಡಿ ಅಕ್ರಮವಾಗಿ ಕಟ್ಟಡ ನಿರ್ಮಾಣ ಮಾಡಿರುವವರ ವಿರುದ್ಧ ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ಆಗ್ರಹಿಸಿ ಸೋಮವಾರ ಧರಣಿ ಸತ್ಯಾಗ್ರಹ ನಡೆಸಲಾಯಿತು. ಫಿಲ್ಟರ್‌ಶೆಡ್ ನಾಗರಿಕರ ಹಿತರಕ್ಷಣಾ ಸಮಿತಿ ನೇತೃತ್ವದಲ್ಲಿ ಧರಣಿ ಸತ್ಯಾಗ್ರಹ ನಡೆಸಿದ ನಿವಾಸಿಗಳು ಫಿಲ್ಟರ್‌ಶೆಡ್‌ನಲ್ಲಿ 30*80 ಅಳತೆಯಲ್ಲಿ ಕಾನೂನು ಬಾಹಿರವಾಗಿ ಎರಡು ಅಂತಸ್ತಿನ ಕಟ್ಟಡ ನಿರ್ಮಾಣವಾಗಿದ್ದು, ಈ ಜಾಗಕ್ಕೆ ಸಂಬಂಧಪಟ್ಟಂತೆ ಪಹಣಿಯಲ್ಲಿ ವಿಐಎಸ್‌ಎಲ್ ಮತ್ತು ಗೋಮಾಳ ಜಾಗ ಎಂದು ನಮೂದಾಗಿರುತ್ತದೆ. ಈ ವಿಚಾರ-ಕ್ಕೆ ಸಂಬಂಧಪಟ್ಟಂತೆ ತಾಲ್ಲೂಕು ಆಡಳಿತ ಮತ್ತು ವಿಐಎಸ್‌ಎಲ್ ನಗರಾಡಳಿತ ವತಿಯಿಂದ ಸ್ಥಳ ಪರಿಶೀಲಿಸಿ ಫೆ.28 ರಂದು ಜಂಟಿ ಸರ್ವೆ ನಡೆಸುವ ಸಂದರ್ಭದಲ್ಲಿ ಸ್ಥಳಕ್ಕೆ ಆಗಮಿಸಿದ ವಿಐಎಸ್‌ಎಲ್ ಕಾರ್ಖಾನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿವಿಲ್ ಇಂಜಿನಿಯರ್ ನಂದನ್‌ರವರು ಕಟ್ಟಡ ನಿರ್ಮಾಣವಾಗಿರುವ ಜಾಗ ವಿಐಎಸ್‌ಎಲ್ ಸೇರಿದ್ದು ಎಂದು ಮೌಖಿಕವಾಗಿ ನಮಗೆ ತಿಳಿಸಿರುತ್ತಾರೆಂದು ಆರೋಪಿಸಿದರು. ವಿಐಎಸ್‌ಎಲ್ ನಗರಾಡಳಿತ ಕಛೇರಿಯವರು ತಮ್ಮ ವ್ಯಾಪ್ತಿಗೊಳಪಡುವ ಜಾಗಗಳಲ್ಲಿ ವ್ಯಾಪಾರಿಗಳಿಗೆ, ಬಡ ನಾಗರಿಕರಿಗೆ ಸಣ್ಣಪುಟ್ಟ ವ್ಯಾಪಾರ ಮಾಡುವುದಕ್ಕೂ ಕೂಡ ಅವಕಾಶ ಮಾಡಿಕೊಡುವುದಿಲ್ಲ. ಆದ-ರೆ ಇಷ್ಟು ದೊಡ್ಡ ಕಟ್ಟಡ ನಿರ್ಮಾಣ ಮಾಡಿ ಮುಗಿಯುವ ಹಂತಕ್ಕೆ ಬಂದರೂ ಕಟ್ಟಡ ನಿರ್ಮಾಣ ಮಾಡಿರುವವರ ವಿರುದ್ಧ ಯಾವುದೇ ಕ್ರಮ ತೆಗೆದುಕೊಳ್ಳದೆ ಇರುವುದನ್ನು ಗಮನಿಸಿದಾಗ ನಗರಾಡಳಿತ ಇಲಾಖೆ ಮತ್ತು ನಂದನ್‌ರವರು ಕಾನೂನು ಬಾಹಿರವಾಗಿ ಕಟ್ಟಡ ನಿರ್ಮಾಣ ಮಾಡಿರುವವರ ಜೊತೆ ಶಾಮೀಲಾಗಿದ್ದಾರೆಂದು ಸಾರ್ವಜನಿಕ ವಲಯದಲ್ಲಿ ಚರ್ಚೆಯಾಗುತ್ತಿದೆ. ಈ ಹಿನ್ನಲೆಯಲ್ಲಿ ಕಟ್ಟಡ ನಿರ್ಮಾಣವಾಗಿರುವ ಜಾಗದ ಸರ್ವೆ ನಡೆಸಿ ಜಾಗದ ಬಗ್ಗೆ ತಮ್ಮಲ್ಲಿರುವ ದಾಖಲೆಗಳ ಮಾಹಿತಿಯನ್ನು ಲಿಖಿತವಾಗಿ ನೀಡಬೇಕೆಂದು ಒತ್ತಾಯಿಸಿದರು. ಅಲ್ಲದೆ ಕಾನೂನುಬಾಹಿರವಾಗಿ ಕಟ್ಟಡ ನಿರ್ಮಾಣ ಮಾಡಿರುವವರ ವಿರುದ್ಧ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಬೇಕೆಂದು ಆಗ್ರಹಿಸಿದರು. ವಿಐಎಸ್‌ಎಲ್ ನಗರಾಡಳಿತಾಧಿಕಾರಿ ನವೀನ್ ರಾಹುಲ್‌ಗೆ ಫಿಲ್ಟರ್‌ಶೆಡ್ ನಾಗರಿಕರ ಹಿತರಕ್ಷಣಾ ಸಮಿತಿ ವತಿಯಿಂದ ಮನವಿ ಸಲ್ಲಿಸಲಾಯಿತು. ಧರಣಿ ಸತ್ಯಾಗ್ರಹದಲ್ಲಿ ನಿವಾಸಿಗಳಾದ ಸಾಮಾಜಿಕ ಹೋರಾಟಗಾರ ಶಶಿಕುಮಾರ್ ಗೌಡ, ನಗರಸಭೆ ಸದಸ್ಯೆ ಕೆ.ಆರ್ ಸವಿತಾ, ಮುಖಂಡ ಉಮೇಶ್, ಇಂದ್ರಮ್ಮ, ದಿವ್ಯಶ್ರೀ, ಮುದ್ದಮ್ಮ, ಲಕ್ಷ್ಮಮ್ಮ, ಸಣ್ಣಕ್ಕ, ಅನುಸೂಯ, ಸಂಧ್ಯಾ, ಮುನಿಯಮ್ಮ, ಮಾಲಕ್ಕ, ಯೋಗೇಶ್, ಗೋಪಾಲರಾವ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ವರ್ಗಾವಣೆ ಮಾಡಲಿ




**ಜಗಳೂರು:** ಜಗಳೂರು ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಜಗಳೂರು ತಾಲೂಕು ಗ್ರಾಮ ಪಂಚಾಯತಿ ಗ್ರಂಥಾಲಯ ಹಾಗೂ ಅರಿವು ಕೇಂದ್ರದ ಮೇಲ್ವಿಚಾರಕರ ಸಭೆಯನ್ನು ನಡೆಸಲಾಯಿತು.ಸಭೆಯಲ್ಲಿ ಜಿಲ್ಲಾಧ್ಯಕ್ಷ ಪಲ್ಲಾಗಟ್ಟೆ ನಾಗಪ್ಪ ಮಾತನಾಡಿ ಕಾನೂನಾತ್ಮಕವಾದ ಹೋರಾಟದ ಬಗ್ಗೆ ಹರಿಯರ್ಸ್ ಪಡೆಯುವ ಬಗ್ಗೆ ಮತ್ತು ಮರಳಿ ಮಾತೃ ಇಲಾಖೆಯಾದ ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ವರ್ಗಾವಣೆ ಮಾಡುವ ಬೇಕು . ಗ್ರಾಮ ಪಂಚಾಯತಿಯವರು ಸಮಯಕ್ಕೆ ಸರಿಯಾಗಿ ಪತ್ರಿಕೆಯ ಹಣವನ್ನು ನೀಡಬೇಕು. ಇದರ ಬಗ್ಗೆ ಕುಲಂಕುಶವಾಗಿ ಇಲಾಖೆ ಚರ್ಚೆ ಮಾಡಬೇಕು ಎಂದು ಹೇಳಿದರು.ತಾಲೂಕ ಅಧ್ಯಕ್ಷರಾದ ಗುತ್ತಿದುರ್ಗ ನೇತ್ರಾವತಿ ಹೋಬಳಿ ಮಟ್ಟದಲ್ಲಿ ಗ್ರಂಥಾಲಯ ಕಟ್ಟಡಗಳು ಶಿಥಿಲಗೊಂಡಿವೆ. ಗ್ರಂಥಾಲಯಕ್ಕೆ ಮೂಲ ಸೌಕರ್ಯ ಇಲ್ಲ. ಕುರ್ಚಿ ಟೇಬಲ್ ಗಳನ್ನು ನೀಡಬೇಕು ಎಂದು ಹೇಳಿದರು. ನಂತರ ಜಗಳೂರು ತಾಲೂಕು ಗ್ರಂಥಾಲಯ ಮೇಲ್ವಿಚಾರಕರಿಗೆ ಸದಿಲ್ವಾರ್ ಶುಚಿಗಾರರ ಭತ್ಯೆಯನ್ನು ಕೊಡುವ ಬಗ್ಗೆ ತಾಲೂಕು ಪಂಚಾಯತ್ ಇಓ ಕೆಂಚಪ್ಪ ಇವರ ಅನುಪಸ್ಥಿತಿಯಲ್ಲಿ ಎಡಿ ಮರಳುಸಿದ್ದಪ್ಪ ಅವರಿಗೆ ಮನವಿ ಸಲ್ಲಿಸಲಾಯಿತು.

ಮನವಿ ಸಲ್ಲಿಸದ ಮೇಲೆ ಜಿಲ್ಲಾ ಅಧ್ಯಕ್ಷರಾದ ಜಿ ನಾಗಪ್ಪ ಪಲ್ಲಾಗಟ್ಟಿ ಮಾತನಾಡಿ ಜಗಳೂರು ತಾಲೂಕ್ ಎಲ್ಲಾ ಗ್ರಾಮ ಪಂಚಾಯತಿ ಗ್ರಂಥಾಲಯದ ಮೇಲ್ವಿಚಾರಕರು ಆರ್ ಡಿ ಪಿ ಆರ್ ಇಲಾಖೆಯ ನಿರ್ದೇಶಕರಿಗೂ ಆರ್ ಡಿ ಪಿ ಆರ್ ಮಂತ್ರಿಗಳಾದ ಪ್ರಿಯಾಂಕ ಖರ್ಗೆವರಿಗೂ ಮರಳಿ ಮಾತೃ ಇಲಾಖೆಗೆ ಹೋಗುವ ಬಗ್ಗೆ ಪತ್ರ ಚಳುವಳಿಯನ್ನು ಪತ್ರದ ಮೂಲಕ ಬರೆದು ಕಳಿಸಬೇಕೆಂದು ಕರೆ ನೀಡಬೇಕು ಎಂದರು.ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ರಂಗಯ್ಯ ಜಿಲ್ಲಾ ಕಮಿಟಿಯ ಸದಸ್ಯರಾದ ಹಾಲಪ್ಪ ಜಿಲ್ಲಾ ಸಂಘದ ಗೌರವಾಧ್ಯಕ್ಷರಾದ ಕೃಷ್ಣಪ್ಪ ಸೇರಿದಂತೆ ಸದಸ್ಯರು ಹಾಜರಿದ್ದರು.

## ಉಕ್ಕಡಗಾತ್ರಿ ಗಮನ ಸೆಳೆದ ಕುಸ್ತಿ ಪಂದ್ಯಾವಳಿ



**ಮಲೇಬೆನ್ನೂರು:** ಸಮೀಪದ ಉಕ್ಕಡಗಾತ್ರಿ ಅಜ್ಜಯ್ಯನ ಮಹೋತ್ಸವ ಅಂಗವಾಗಿ ಎಂದಿನಂತೆ ಜವಳ, ಹರಕೆ, ತುಲಾಭಾರ ಜೊತೆಗೆ ಕುಸ್ತಿ ಪಂದ್ಯಾವಳಿ ಗಮನ ಸೆಳೆಯಿತು. ಸಂಪ್ರದಾಯದಂತೆ ಕುಸ್ತಿ ಪಂದ್ಯಾವಳಿ ರಾಜ್ಯ ಮತ್ತು ಹೊರ ರಾಜ್ಯಗಳಿಂದ ಕುಸ್ತಿ ಪಟುಗಳು ಜಾತ್ರಾ ಮಹೋತ್ಸವಕ್ಕೆ ಬಂದಿಳಿಯುತ್ತಾರೆ. ಇಂದು ಸಹ ಕುಸ್ತಿ ಪಟುಗಳು ಗಮನ ಸೆಳೆದರು. ಮಂಗಳವಾರ ಕೊನೆಯ ಸುತ್ತಿನ ಕುಸ್ತಿ ಪಂದ್ಯಾವಳಿ ಇರುತ್ತದೆ.ಜಾತ್ರಾ ಮಹೋತ್ಸವದ ಅಂಗವಾಗಿ ಅಜ್ಜಯ್ಯನಿಗೆ ಅಭಿಷೇಕ, ವಿಶೇಷ ಪೂಜೆ, ಪೂಜಾಲಂಕಾರ ಮಾಡಲಾಗಿತ್ತು.ಎಸ್ ಎಸ್ ಕೇರ್ ಟ್ರಸ್ಟ್ ದಾವಣಗೆರೆ ,ಜೆ ಜೆ ಎಂ ವೈದ್ಯಕೀಯ ಮಹಾವಿದ್ಯಾಲಯ, ಬಾಪೂಜಿ ಆಸ್ಪತ್ರೆ ಹಾಗೂ ಕಾಲೇಜ್ ಆಫ್ ಡೆಂಟಲ್ ಸೈನ್ಸ , ಶ್ರೀ ಕರಿಬಸವೇಶ್ವರ ಗದ್ದಿಗೆ ಟ್ರಸ್ಟ್ ಇವರುಗಳ ಸಂಯುಕ್ತ ಆಶ್ರಯದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಇರುತ್ತದೆ. ಗ್ರಾಮಸ್ಥರು, ಭಕ್ತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಟ್ರಸ್ಟ್ ಕಮೀಟಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫುಟ್‌ಪಾತ್ ರಸ್ತೆ ದುರಸ್ತಿ: ವಿರೋಧ

**ಜಗಳೂರು:** ರಸ್ತೆ ಹಗಲಿಕರಣ ಮಾಡದೇ ಬರೀ ಫುಟ್ ಬಾತ್ ದುರಸ್ತಿ ಮಾಡುವ ಕೆಲಸಕ್ಕೆ ಲೋಕೋಪಾಯೋಗಿ ಇಲಾಖೆ ಕೈಹಾಕಿದ್ದು ಸಾರ್ವಜನಿಕರಿಂದ ತೀವ್ರ ವಿರೋಧ ವ್ಯಕ್ತವಾಗಿದೆ.ಕಿಷ್ಕಿಂದೆ ಯಂತಿರುವ ಪಟ್ಟಣಜ ಮುಖ್ಯ ರಸ್ತೆ ಹಗಲಿಕರಣ ಮಾಡಬೇಕು ಎಂಬ ಕೂಡು ಹಲವಾರು ದಶಕಗಳಿಂದ ಕೇಳಿ ಬರುತ್ತಿದೆ ಆದರೆ ಅದು ಇದುವರೆಗು ಕಾರ್ಯರೂಪಕ್ಕೆ ಬಂದಿಲ್ಲ, ಈ ರಸ್ತೆಯು ರಾಜ್ಯ ಹೆದ್ದಾರಿಯಾಗಿದ್ದು ಪ್ರತಿನಿತ್ಯ ಸಾವಿರಾರು ಲಾರಿ, ಬಸ್ , ವಾಹನಗಳು ಸಂಚಾರ ಮಾಡುತ್ತಿವೆ ರಸ್ತೆ ಕಿರಿದಾಗಿರುವುದರಿಂದ ಅಪಾಘತಗಳು ಸಂಭವಿಸಿ ಜೀವಗಳನ್ನು ಬಲಿತೆಗೆದು ಕೊಂಡಿದೆ. ಹಾಲಿ ಶಾಸಕ ಬಿ. ದೇವೇಂದ್ರ ಪ್ಪ ದಿಟ್ಟ ನಿರ್ಧಾರ ತೆಗೆದು ಕೊಂಡು ರಸ್ತೆ ಹಗಲಿಕರಣಕ್ಕೆ ಮುಂದಾಗಿ ಎರಡು ಮೂರು ಭಾರಿ ಸರ್ವೆ ಕಾರ್ಯ ಮಾಡಿ ಗುರುತು ಸಹ ಮಾಡಲಾಗಿತ್ತು ಕೆಲವು ನ್ಯಾಯಾಲಯದ ಮೊರೆ ಹೊಗಿದ್ದರು ನ್ಯಾಯಾಲಯವು ಈ ವಿಚಾರದಲ್ಲಿ ಕಾನೂನು ನಿಯಾಮವಳಿಯನ್ನು ಪಾಲಿಸುವಂತೆ ನ್ಯಾಯಾಲಯವು ಸೂಚಿಸಿದೆ .

## ಇಂಗ್ಲಿಷ್ ವ್ಯಾಮೋಹದಿಂದಲೇ ಕನ್ನಡಕ್ಕೆ ಕುತ್ತು

**ಶಿವಮೊಗ್ಗ:** ಕರ್ನಾಟಕದಲ್ಲಿ ಇಂಗ್ಲಿಷ್ ವ್ಯಾಮೋಹದಿಂದಲೇ ಕನ್ನಡಕ್ಕೆ ಕುತ್ತು ಬಂದಿದೆಯೇ ಹೊರತು ಶಾಲೆಗಳಲ್ಲಿ ಹಿಂದಿ ಭಾಷೆ ಅಳವಡಿಕೆಯಿಂದಲ್ಲ ಎಂದು ಮಾಜಿ ಸಭಾಪತಿ ಡಿ.ಎಚ್.ಶಂಕರಮೂರ್ತಿ ಹೇಳಿದರು.

ಕರ್ನಾಟಕ ಸಂಘದಲ್ಲಿ ರಾಷ್ಟ್ರ ಕವಿ ಡಾ.ಜಿ.ಎಸ್.ಶಿವರುದ್ರಪ್ಪ ಪ್ರತಿಷ್ಠಾನವು ಡಾ.ಜಿ.ಎಸ್.ಎಸ್.ಅವರ ಜನ್ಮ ದಿನದ ಪ್ರಯುಕ್ತ ಆಯೋಜಿಸಿದ್ದ ಕಾವ್ಯ ಸೌರಭ ಹಾಗೂ ಜಿಎಸ್.ಎಸ್.ಪುರಸ್ಕಾರ ಕಾರ್ಯಕ್ರಮದಲ್ಲಿ ಈ ಬಾರಿ ಜಿ.ಎಸ್.ಎಎಸ್ ಪ್ರಶಸ್ತಿಗೆ ಭಾಜನರಾದ ಖ್ಯಾತ ಗಾಯಕ ಗರ್ತಿಕೆರೆ ರಾಘಣ್ಣ ಅವರನ್ನು ಸನ್ಮಾನಿಸಿ ಮಾತನಾಡುತ್ತಿದ್ದರು.

ಸರ್ಕಾರದ ಭಾಷಾ ನೀತಿಗಳಿಂದಾಗಿ ರಾಜ್ಯದ ಗಡಿಗಳಲ್ಲಿ ಕನ್ನಡ ಇದೆಯೋ ಇಲ್ಲವೋ ಎಂಬ ಅನುಮಾನ ಬರುವ ಪರಿಸ್ಥಿತಿ ನಿರ್ಮಾಣವಾಗಿದೆ. ಈಗಿನ ಮಕ್ಕಳಲ್ಲಿ 100ಕ್ಕೆ 95ರಷ್ಟು ಮಕ್ಕಳಿಗೆ ಕನ್ನಡ ಓದಲು ಬರೆಯಲು ಬರದ ಸ್ಥಿತಿ ಎದುರಾಗಿದೆ. ನಾವು ಕನ್ನಡ ಭಾಷೆ, ಸಂಸ್ಕೃತಿಗಳ ಬಗ್ಗೆ ಮಾತನಾಡುತ್ತಲೇ ಬಂದಿದ್ದೇವೆ. ನಮ್ಮ ತಾಯ್ನಾಡಿಗೆ ತೊಂದರೆ ಉಂಟು ಮಾಡುವವರು ಯಾರು ಎಂಬ ಪ್ರಶ್ನೆಗೆ ಉತ್ತರವಿಲ್ಲ ಎಂದು ಬೇಸರ ವ್ಯಕ್ತಪಡಿಸಿದು.

ನಮ್ಮ ಮಾತ್ರ ಭಾಷೆ ಮೇಲೆ ಇಂಗ್ಲೀಷಿನಿಂದ ದಾಳಿಯಾಗುತ್ತಿದೆ. ತಮಿಳುನಾಡಿನಲ್ಲೂ 5ರಿಂದ 10ನೇ ತರಗತಿ ಮಕ್ಕಳಿಗೆ ತಮಿಳು ಭಾಷೆಯಲ್ಲಿ ಓದಲು ಬರೆಯಲು ಬರುವುದಿಲ್ಲ. ಅದಕ್ಕೆ ಇಂಗ್ಲೀಷೇ ಕಾರಣ. ಆದರೂ ಹಿಂದಿ ಹೇರಿಕೆಗೆ ಬಿಡೆವು ಎಂದು ಬೊಬ್ಬೆ ಇಡುತ್ತಿದ್ದಾರೆ. ನಮ್ಮ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೂ ಹಿಂದಿ ಭಾಷೆ ಹೇರಿಕೆ ಬಿಡುವುದಿಲ್ಲ ಎನ್ನುತ್ತಿದ್ದಾರೆ. ಹಾಗಾದರೆ ರಾಜ್ಯದಲ್ಲಿ ಎಷ್ಟು ಶಾಲೆಗಳಲ್ಲಿ ಹಿಂದಿ ಭಾಷೆ ಇದೆ ಹೇಳಲಿ ಎಂದು ಪ್ರಶ್ನಿಸಿದರು.ಗರ್ತಿಕೆರೆ ರಾಘಣ್ಣ ಅವರಂಥಹ



ಹಾಡುಗಾರರು, ಕವಿಗಳು, ಸಾಹಿತಿಗಳಿಂದ ಕನ್ನಡ ಉಳಿದುಕೊಂಡಿದೆ. ಕನ್ನಡದ ಭಾಷಾ ಸೊಗಡನ್ನು ಆಸ್ವಾದಿಸುವ ವಾತಾವರಣ ನಿರ್ಮಾಣವಾಗಬೇಕು. ಕನ್ನಡ ಭಾಷೆ ಬಗ್ಗೆ ತಿರಸ್ಕಾರದ ಕುಇತು ಗಾಢವಾದ ಚಿಂತನೆ ಆಗಬೇಕು ಎಂದು ಅವರು ಆಶಿಸಿದರು.ಸನ್ಮಾನ ಸ್ವೀಕರಿಸಿ ಮಾತನಾಡಿದ ಗರ್ತಿಕೆರೆ ರಾಘಣ್ಣ, ಕನ್ನಡದ ಶ್ರೇಷ್ಠ ಕವಿ ಡಾ.ಜಿ.ಎಸ್.ಶಿವರುದ್ರಪ್ಪ ಅವರಿಗೆ ದೀರ್ಘ ಪ್ರಣಾಮ ಎಂದರಲ್ಲದೆ ಜಿಎಸ್.ಎಸ್ ಕವನಗಳೇ ನನಗೆ ಸಮಾಜದಲ್ಲಿ ಹೆಗ್ಗುರುತನ್ನು ನೀಡಲು ಸಹಕಾರಿಯಾಯಿತು. ಅಂಥಹ ಮಹನೀರಿಂದಲೇ ಕನ್ನಡ ನಾಡು, ನುಡಿ, ಸಂಸ್ಕೃತಿ ಉಳಿದುಕೊಂಡಿದೆ ಎಂದರು. ತಮ್ಮ ಹಾಡುಗಾರಿಕೆಯನ್ನು ಗುರುತಿಸಿ ಪುರಸ್ಕರಿಸಿದ್ದಕ್ಕೆ ಕೃತಜ್ಞತೆ ಸಲ್ಲಿಸಿದರು.

ವಿನಯ ಶಿವಮೊಗ್ಗ ಅಭಿನಂದನಾ ನುಡಿಗಳನ್ನಾಡಿದರು. ಕೆ.ಎಸ್.ಈಶ್ವರಪ್ಪ ಪ್ರಾಸ್ತಾವಿಕ ನುಡಿಗಳನ್ನಾಡಿದರು. ವೇದಿಕೆಯಲ್ಲಿ ಪ್ರತಿಷ್ಠಾನದ ಅಧ್ಯಕ್ಷ ಪ್ರೊ.ಕಿರಣ ದೇಸಾಯಿ, ಕರ್ನಾಟಕ ಸಂಘದ ಅಧ್ಯಕ್ಷ ಪ್ರೊ.ಎಚ್.ಆರ್.ಶಂಕರನಾರಾಯಣ ಶಾಸ್ತ್ರಿ, ಉಪನ್ಯಾಸಕಿ ಜ್ಯೋತಿಕುಮಾರಿ ಇದ್ದರು.

## ನಾನು ಸಾಮಾನ್ಯರಲ್ಲಿ ಸಾಮಾನ್ಯನಾಗಿ ಕೆಲಸ ಮಾಡಿದ್ದೇನೆ



**ಹೊನ್ನಾಳಿ:** ನಾನು ಸಾಮಾನ್ಯರಲ್ಲಿ ಸಾಮಾನ್ಯನಾಗಿ ಎಲ್ಲಾ ವರ್ಗದ ಸಾಮನ್ಯ ಜನತೆಯ ನಡುವೆ ಜೀವನ ಸಾಗಿಸಿ ಹೋರಾಟ ಮಾಡಿದ್ದರ ಪ್ರತಿಫಲ ನನ್ನನ್ನು ಅವಳಿ ತಾಲೂಕಿನ ಜನತೆ ಮೂರು ಬಾರಿ ಶಾಸಕನಾಗಿ ಆಯ್ಕೆ ಮಾಡಿದ್ದಾರೆ, ಪಕ್ಷ ಸಹ ನನ್ನನ್ನು ಸಚಿವನಾಗಿ,ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಯಾಗಿ ಹಾಗೂ ವಿವಿಧ ನಿಗಮಗಳ ಅಧ್ಯಕ್ಷನಾಗಿಯೂ ಹುದ್ದೆ ನೀಡಿದೆ,ಇದಕಿಂತ ಸೌಭಾಗ್ಯ ಬೇರೆ ಏನಿದೆ ಎಂದ ಅವರು ಈ ಎಲ್ಲಾ ಅಧಿಕಾರ ಸಿಕಿದ್ದು ನಿಮ್ಮಿಂದ ಎಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಹೇಳಿದರು.

ಹೊನ್ನಾಳಿ ಪಟ್ಟಣದಲ್ಲಿ ತಾಲೂಕು ಬಿಜೆಪಿ ಮುಖಂಡರು ಹಾಗೂ ಅಭಿಮಾನಿಗಳು ಆಯೋಜಿಸಿದ್ದ ತಮ್ಮ ಹುಟ್ಟು ಹಬ್ಬದ ಸಂದರ್ಭದಲ್ಲಿ ಅವರು ಮಾತನಾಡಿದರು.

ನಾನು ಶಾಸಕನಾಗುವ ಮೊದಲು ಅನೇಕ ಹೋರಾಟ,ಸರ್ಕಾರದ ವಿರುದ್ಧ ಪ್ರತಿಭಟನೆ ಹಾಗೂ ಪಕ್ಷದ ಸಂಘಟನೆ ಮಾಡಿದ್ದ ಪ್ರತಿಫಲ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ನನಗೆ ಮೊದಲಿನ ಸಲ ಟಿಕೆಟ್ ಘೋಷಣೆ ಮಾಡಿದರು,ಯುವಕರು ನನ್ನ ಪರವಾಗಿ ನೇರವಾಗಿ ಚುನಾವಣೆ ಮಾಡಿದರೆ, ಹಿರಿಯರು ತೆರೆಯ ಹಿಂದೆ ನನ್ನ ಪರವಾಗಿ ಚುನಾವಣೆಯಲ್ಲಿ ಸಹಕಾರ ನೀಡಿದ್ದರಿಂದ ನಾನು ಗೆದ್ದೆ ಎಂದರು.ಅಲ್ಲಿಂದ ನಾನು ಜನರ ಸಮಸ್ಯೆಗಳನ್ನು ಇಟ್ಟು-ಕೊಂಡು ನಮ್ಮ ಪಕ್ಷದಲ್ಲಿ ಹಾಗೂ ವಿಪಕ್ಷ ಅಧಿಕಾರದಲ್ಲಿದ್ದಾಗಲೂ ಕ್ಷೇದ್ರಕ್ಕೆ ಅನುದಾನ ತಂದು ಅಭಿವೃದ್ಧಿ ಮಾಡಿದ್ದೇನೆ,ಬಿ.ಎಸ್. ಯಡಿಯೂರಪ್ಪ ಅವರ ಅಧಿಕಾರವದಿಯಲ್ಲಿ 4,500 ಕೋಟಿ ಅನುದಾನ ತಂದು ಅವಳಿ ತಾಲೂಕಿನ ನೀರಾವರಿ, ಆರೋಗ್ಯ,ಶಿಕ್ಷಣ,ಚತುಷ್ಪಥ ರಸ್ತೆ ಗ್ರಾಮೀಣ ರಸ್ತೆ,ಕೆರೆಗೆ ನೀರು ತುಂಬಿಸುವ ಮಹತ್ವದ ಯೋಜನೆಗಳನ್ನು ಕ್ಷೇತ್ರಕ್ಕೆ ತಂದು ಅಭಿವೃದ್ಧಿ ಮಾಡಿದ್ದೇನೆ ಎಂದು ಕ್ಷೇತ್ರದ ಅಭಿವೃದ್ಧಿ ಮಾಡಿದ್ದ ಬಗೆ ವಿವರಿಸಿದರು.2018 ರ ಚುನಾಣೆಯಲ್ಲಿ ವೀರಶೈವ ಲಿಂಗಾಯಿತ,ಹಾಲುಮತ,ಪರಿಶಿಷ್ಟ ಹಾಗೂ ಪರಿಶಿಷ್ಟ ಪಂಗ ಸೇರಿದಮತೆ ಎಲ್ಲಾ ವರ್ಗವರು ಬಿಜೆಪಿಗೆ ಮತ ನೀಡಿದ್ದರು, ಆ ಅವಧಿಯಲ್ಲಿ ಮಾಜಿ ಮುಖ್ಯಮಂತ್ರಿಗಳನ್ನು ಮುಖ್ಯಮಂತ್ರಿ ಹುದ್ದೆಯಿಂದ ಕೆಳಗೆ ಇಳಿಸಿದ್ದರ ಪರಿಣಾಮ ಕಳೆದ ಸಾರ್ವತ್ರಿಕ ಚುನಾವಣೆಯಲ್ಲಿ ವೀರಶೈವ ಲಿಂಗಾಯಿತ ಮತ ಬರಲಿಲ್ಲ,ಆದ್ದರಿಂದ ಮುಂದಿನ ಚುನಾವಣೆಯಲ್ಲಿ ವೀರಶೈವ ಲಿಂಗಾಯಿತರ ಮತಗಳು ಚದುರಿ ಹೋಗಬಾರದೆಂದು ವೀರಶೈವ ಮಹಾ ಸಂಗಮ ಹೆಸರಿನಲ್ಲಿ ಸಂಘಟನೆ ಮಾಡುತ್ತಿದ್ದೇವೆ ಹೊರತು ಬೇರೆ ಉದ್ದೇಶ ಇಲ್ಲ ಎಂದು ಸ್ಪಷ್ಟಪಡಿಸಿದರು.

ಮುಂದಿನ ಚುನಾವಣೆಯಲ್ಲಿ ನನಗೆ ಟಿಕೆಟ್ ಸಿಗಲ್ಲ ಎಂದು ಕೆಲವರು ಅಪಪ್ರಚಾರ ಮಾಡುತ್ತಿದ್ದಾರೆ,ನಾನೇ ರಾಜ್ಯದ ಹತ್ತಾರು ಕ್ಷೇತ್ರಗಳ ಅರ್ಭರ್ಥಿಗಳ ಬಿಜೆಪಿ ಟಿಕೆಟ್ ಕೊಡಿಸುವ ಶಕ್ತಿಯನ್ನು ಕ್ಷೇತ್ರದ ಜನತೆ ನೀಡಿದ್ದಾರೆ ಎಂದು ಟಾಂಗ್ ನೀಡಿದರು.ಬಿಜೆಪಿ ಜಿಲ್ಲಾಧ್ಯಕ್ಷ ರಾಜಶೇಖರನಾಗಪ್ಪ ಮಾತನಾಡಿ, ಸ್ನೇಹಕ್ಕೂ ಸಿದ್ದ ಸಮರಕ್ಕೂ ಬದ್ದ ಎಂಬಂತೆ ಮಾಜಿ ಸಚಿವ ಎಂಪಿ.ರೇಣುಕಾಚಾರ್ಯ ಒಂದು ಬಾರಿ ಅವರು ಯಾರನ್ನಾದರೂ ನಂಬಿದರೆ ಅವರನ್ನು ಉನ್ನತ ಸ್ಥಾನಕ್ಕೆ ಕೊಂಡೊಯ್ಯುತ್ತಾರೆ,ಅಂತಹ ವಿಶಾಲ ಮನೋಭಾವದ ಗುಣ ಅವರಲ್ಲಿದೆ,ಹಾಗೆಯೇ ಕರೋನ ಆಸಂರ್ಬದಲ್ಲಿ ತಮ್ಮ ಪ್ರಾಣದ ಹಂಗನ್ನು ತೊರೆದು ಕರೋನಾ ಸಂತ್ರಸ್ಥರ ಸೇವೆ ಮಾಡಿದ ಇಂತಹ ಬದ್ದತೆ ಇರೋ ವ್ಯಕ್ತಿಯನ್ನು ಕ್ಷೇತ್ರದ ಜನತೆ ಸೋಲಿಸಿದ್ದು ವಿಷಾಧನಿಯ ಎಂದರು.ದಾವಣಗೆರೆ ಮಹಾನಗರ ಪಾಲಿಕೆಯ ಮಾಜಿ ಪೌರರಾದ ಅಜೆಯ್ ಮಾತನಾಡಿ, ವಿಧಾನಸೌಧದಲ್ಲಿ ಎಂತಹ ತುರ್ತು ಸಭೆಗಳು ನಡೆಯುತ್ತಿದ್ದರೂ ಕ್ಷೇತ್ರದಲ್ಲಿ ಯಾರಾದರೂ ದೂರಾವಾಣಿ ಕರೆ ಮಾಡಿದರೆ ಸಾಕು ತಕ್ಷಣ ಅವರ ಕೆರಯನ್ನು ಸ್ವೀಕರಿಸಿ ಮಾತನಾಡುತ್ತಿದ್ದರು, ಅಂತಹ ಬದ್ದತೆ ನಮ್ಮ ಮಾಜಿ ಸಚಿವರದು,ಕೇವಲ ಅಧಿಕಾರ ಸಿಕ್ಕರೆ ಸಾಕು ಕ್ಷೇತ್ರದ ಜನತೆಯನ್ನು ಮರೆಯುವ ಇಂದಿನ ದಿನಗಳಲ್ಲಿ ಇಂತಹ ಜನಪ್ರತಿನಿಧಿಗಳು ಇರುವುದು ನಮ್ಮಂತಹವರಿಗೆ ಆದರ್ಶ ಎಂದರು.

ಮಾಯಕೊಂಡ ಮಾಜಿ ಶಾಸಕ ಬಸವರಾಜನಾಯ್ಕ್‌ಚನ್ನಗಿರಿಯ ಮಾಡಳ್ ಮಲ್ಲಿಕಾರ್ಜುನ್,ಹರಿಹರದ ಚಂದ್ರುಶೇಖರ್ ಪೂಜಾರ್, ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಣ್ಣಕ್ಕಿ ಬಸವನಗೌಡ ಮಾತನಾಡಿದರು.

ಮುಖಂಡರಾದ ಸತೀಶ್,ಧನಂಜೆಯ ಕಡ್ಲೆಬಾಳ್,ಅನಿಲ್ ನಾಯ್ಕ್,ಬಿಜೆಪಿ ತಾಲೂಕು ಅಧ್ಯಕ್ಷ ಅರಕೆರೆ ನಾಗರಾಜ್, ನೆಲಹೊನ್ನೆ ಮಂಜುನಾಥ್,ಮಾಜಿ ಅಧ್ಯಕ್ಷ ಜೆ.ಕೆ.ಸುರೇಶ್, ಕೆ.ಪಿ.ಕುಭೇಂದ್ರಪ್ಪ,ದೊಡ್ಡೇರಿ ರಾಜಣ್ಣ,ಗಿರೀಶ್, ಸಿ. ಆರ್.ಶಿವಾನಂದ್,ಶಿವು ಹುಡೇದ್,ರಮೇಶ್‌ಗೌಡ,ಮಂಜು ಇಂಚರ,ಮಹೇಶ್ ಹುಡೇದ್ ಸುರೇಂದ್ರನಾಯ್ಕ ಹಾಗೂ ಇತರರು ಇದ್ದರು.


## ಗ್ರಾಮ ಪಂಚಾಯಿತಿ ಕಾರ್ಯಾಲಯ ಗುತ್ತಿದುರ್ಗ

ಕ್ರ.ಸಂ.ಗ್ರಾ.ಪಂ.ಗು/ಇ/ಪ್ರೋ/1/2024-25 ದಿನಾಂಕ : 05-03-2025

**ಇ-ಪ್ರಕ್ಯೂರ್ ಮೆಂಟ್ ಮೂಲಕ ಟೆಂಡರ್ ಪ್ರಕಟಣೆ**

ಗುತ್ತಿದುರ್ಗ ಗ್ರಾಮ ಪಂಚಾಯಿತಿಯಲ್ಲಿ ಟೆಂಡರ್‌ನಲ್ಲಿ ಷರತ್ತುಗಳ ಪ್ರಕಾರ 2024-25ನೇ ಸಾಲಿನ ಗುತ್ತಿದುರ್ಗ ಗ್ರಾಮ ಪಂಚಾಯಿತಿಯ 15ನೇ ಹಣಕಾಸು ಯೋಜನೆಯಡಿ ಗುತ್ತಿದುರ್ಗ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಅಗತ್ಯ ಕುಡಿಯುವ ನೀರಿನ ಸಾಮಗ್ರಿ ಖರೀದಿ/ಕು.ನೀರಿನ ಮೊ.ಪಂಪ್.ದುರಸ್ಥಿಗಾಗಿ ಒಟ್ಟು ಅಂದಾಜು ಮೊತ್ತ: 7,97,740.00 ಲಕ್ಷ ಗಳಿಗೆ ಕೆ.ಟಿ.ಪಿ.ಪಿ ನಿಯಮಾನುಸಾರ ಇ-ಪ್ರಕೂರ್ ಮೆಂಟ್ ಮೂಲಕ ಟೆಂಡರ್‌ಗಾಗಿ ಅರ್ಹ ಟೆಂಡರ್‌ದಾರರು/ಸಂಸ್ಥೆಗಳು ಭರ್ತಿ ಮಾಡಿದ ಟೆಂಡರ್‌ಗಳನ್ನು ಈ ಕೆಳಕಂಡಂತೆ ಆಹ್ವಾನಿಸಲಾಗಿದ್ದು (ಟೆಂಡರ್ ಸಂಸ್ಥೆ ಸಂಖ್ಯೆ RDPR/2024-25/IND8263, RDPR/2024-25/SE2243 , RDPR/2024-25/IND8264,RDPR/2024-25/SE1716,RDPR/2024-25/IND8259,RDPR/2024-25/IND8260)ಸದರಿ ಟೆಂಡರ್ ಗೆ ಸಂಬಂದಿಸಿದ ದಾಖಲೆಗಳನ್ನು ಇ-ಪ್ರಕ್ಯೂರ್ ಮೆಂಟ್ ವೆಬ್ ಸೈಟ್ ವೆಬ್ ಸೈಟ್ (wwwktpp.karnatka.gov.in) ಇಂದ ದಿನಾಂಕ: 15-03-2025 ರಿಂದ 15-03-2025 ಸಾಯಂಕಾಲ 5.30 ಗಂಟೆಯೊಳಗೆ ಡೌನ್ ಲೋಡ್ ಮಾಡಿಕೊಂಡು ದಿನಾಂಕ; 15-03-2025 ಸಂಜೆ 5:30 ಗಂಟೆಯ ವರೆಗೆ ಇ-ಟೆಂಡರ್‌ನ್ನು ಸಲ್ಲಿಸಬಹುದು ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಗುತ್ತಿದುರ್ಗ ಗ್ರಾಮ ಪಂಚಾಯಿತಿ ಕಛೇರಿಯನ್ನು ಸಂಪರ್ಕಿಸಬಹುದಾಗಿದೆ.

**ಟೆಂಡರ್ ವೇಳಾಪಟ್ಟಿ**

| | | |
|---|---|---|
| 1 | ಖಾಲಿ ಟೆಂಡರ್ ಅರ್ಜಿಗಳನ್ನು (ಅನುಬಂಧ-1ನ್ನು ಮತ್ತು ಅನುಬಂಧ-2ನ್ನು)ಇ-ಪ್ರಕ್ಯೂರ್‌ಮೆಂಟ್ ಮೂಲಕ ಡೌನ್ ಲೋಡ್ ಮಾಡಿಕೊಳ್ಳುವ ದಿನಾಂಕ ಮತ್ತು ಸಮಯ | ದಿನಾಂಕ:15-03-2025 ರಿಂದ 15-03-2025 ಸಾಯಂಕಾಲ 5-30 ಗಂಟೆಯೊಳಗೆ |
| 2 | ಇ-ಪೋರ್ಟನಲ್ಲಿ ಟೆಂಡರ್ ನ್ನು ಇಂಧೀಕರಿಸಲು ಕೊನೆಯ ದಿನಾಂಕ | ದಿನಾಂಕ: 15-03-2025 ರಿಂದ ಸಾಯಂಕಾಲ 5-30 ಗಂಟೆಯೊಳಗೆ |
| 3 | ಇ-ಪೋರ್ಟನಲ್ಲಿ ದಾಖಲೆಗಳ/ ತಾಂತ್ರಿಕ ಬೆಡ್ ಗಳನ್ನು ತೆರೆಯುವ ದಿನಾಂಕ ಮತ್ತು ಸಮಯ | ದಿನಾಂಕ:17-03-2025 ರಿಂದ ಸಾಯಂಕಾಲ 11-00 ಗಂಟೆಯ ನಂತರ |
| 4 | ಇ-ಪೋರ್ಟನಲ್ಲಿ ದಾಖಲಾತಿಗಳ/ ಆರ್ಥಿಕ ಬೆಡ್‌ಗಳನ್ನು ತೆರೆಯುವ ದಿನಾಂಕ ಮತ್ತು ಸಮಯ | ದಿನಾಂಕ: 18-03-2025 ರಿಂದ ಸಾಯಂಕಾಲ 11-00 ಗಂಟೆಯ ನಂತರ |

ಹೆಚ್ಚಿನ ಮಾಹಿತಿಗಾಗಿ ಅಧಿಕೃತ ಪೋರ್ಟಲ್wwwktpp.karnatka.gov.in ಸಂಪರ್ಕಿಸಬಹುದಾಗಿದೆ

ಸಹಿ/-
ಅಧ್ಯಕ್ಷರು
ಗ್ರಾಮ ಪಂಚಾಯಿತಿ,
ಗುತ್ತಿದುರ್ಗ

ಸಹಿ/-
ಪಂಚಾಯಿತಿ ಅಭಿವೃದ್ಧಿ ಅಧಿಕಾರಿ
ಗ್ರಾಮ ಪಂಚಾಯಿತಿ ,
ಗುತ್ತಿದುರ್ಗ

# ಕೇಂದ್ರ ಸರ್ಕಾರ ರಾಜ್ಯಗಳನ್ನು ತಮ್ಮ ಅಧೀನದ ಮಾಂಡಲಿಕರ ರೀತಿ ನಡೆಸಿಕೊಳ್ಳುತ್ತಿದೆ



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾಧ್ಯಮ ಪ್ರಕಟಣೆ

■ ರಾಜ್ಯಗಳಿಗೆ ನೀಡುವ ತೆರಿಗೆ ಪಾಲನ್ನು ಶೇಕಡಾ 41ರಿಂದ 40ಕ್ಕೆ ಇಳಿಸಲು ಶಿಫಾರಸು ಮಾಡುವಂತೆ ಹಣಕಾಸು ಆಯೋಗಕ್ಕೆ ಕೇಂದ್ರದ ಎನ್‌ಡಿಎ ಸರ್ಕಾರ ಸಿದ್ಧತೆ ನಡೆಸಿರುವುದು ಒಕ್ಕೂಟ ವಿರೋಧಿ ನಡೆ
■ ಗ್ಯಾರಂಟಿಗಳ ಮೂಲಕ ಕನ್ನಡಿಗರ ಮನಗೆದ್ದಿರುವ ಕಾಂಗ್ರೆಸ್ ಸರ್ಕಾರದ ಹೆಸರು ಕೆಡಿಸುವ ಪ್ರಯತ್ನವಿದು
■ ಕೇಂದ್ರದ ಅನ್ಯಾಯಗಳ ವಿರುದ್ಧದ ಮನವಿ – ಮಾತುಕತೆ ವಿಫಲವಾದರೆ ಬೀದಿಗಿಳಿದು ಹೋರಾಡಲು ನಾವು ಸಿದ್ಧ – ಸಿದ್ದರಾಮಯ್ಯ ಆಕ್ರೋಶ

**ಬೆಂಗಳೂರು:** ರಾಜ್ಯಕ್ಕೆ ನ್ಯಾಯಬದ್ಧವಾಗಿ ನೀಡಬೇಕಾಗಿರುವ ತೆರಿಗೆ ಪಾಲನ್ನು ಇನ್ನಷ್ಟು ಕಡಿತಗೊಳಿಸಲು ಕೇಂದ್ರ ಸರ್ಕಾರ ಮಾಡುತ್ತಿರುವ ಪ್ರಯತ್ನ ಕರ್ನಾಟಕ ವಿರೋಧಿ ಮಾತ್ರವಲ್ಲ ಒಕ್ಕೂಟ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಸಾರುವ ಸಂವಿಧಾನಕ್ಕೆ ಕೂಡಾ ವಿರುದ್ಧವಾಗಿದೆ.

ರಾಜ್ಯದ ತೆರಿಗೆ ಪಾಲನ್ನು ಶೇಕಡಾ 41ರಿಂದ 40ಕ್ಕೆ ಇಳಿಸಲು ಶಿಫಾರಸು ಮಾಡುವಂತೆ ಹಣಕಾಸು ಆಯೋಗಕ್ಕೆ ಕೇಂದ್ರದ ಎನ್‌ಡಿಎ ಸರ್ಕಾರ ಸಿದ್ಧತೆ ನಡೆಸಿದೆ ಎಂದು ವರದಿಯಾಗಿದೆ. ನರೇಂದ್ರ ಮೋದಿ ಅವರು ಪ್ರಧಾನಿಯಾದ ದಿನದಿಂದ ಕೇಂದ್ರ ಸರ್ಕಾರದ ನೀತಿ–ನಿರ್ಧಾರಗಳನ್ನು ಗಮನಿಸುತ್ತಾ ಬಂದರೆ ನಿರಂತರವಾಗಿ ರಾಜ್ಯಗಳ ಸಂವಿಧಾನಬದ್ಧ ಅಧಿಕಾರಗಳನ್ನು ಮೊಟಕುಗೊಳಿಸುತ್ತಾ ಅವುಗಳನ್ನು ದುರ್ಬಲಗೊಳಿಸುತ್ತಾ ಬಂದಿರುವುದನ್ನು ಕಾಣಬಹುದು. ರಾಜ್ಯಗಳು ಸಂಗ್ರಹಿಸಿ ಕೇಂದ್ರ ಸರ್ಕಾರಕ್ಕೆ ನೀಡುವ ತೆರಿಗೆಯಲ್ಲಿ ನ್ಯಾಯಬದ್ಧ ಪಾಲು ರಾಜ್ಯಗಳಿಗೆ ಹಂಚಿಕೆಯಾಗುವಂತೆ ನೋಡಿಕೊಳ್ಳಬೇಕಾಗಿರುವ ಜವಾಬ್ದಾರಿಯನ್ನು ಹೊಂದಿರುವ ಕೇಂದ್ರ ಹಣಕಾಸು ಆಯೋಗ ರಾಜ್ಯಗಳ ಹಕ್ಕುಗಳನ್ನು ದಮನಿಸಲು ಹೊರಟ ಕೇಂದ್ರ ಸರ್ಕಾರದ ಕೈಗಳ ಆಯುಧವಾಗಿರುವುದು ದುರಂತವೇ ಸರಿ. ರಾಜ್ಯಗಳು ಕೇಂದ್ರ ಸರ್ಕಾರದ ಮರ್ಜಿ ಕಾಯುವಂತಹ ಪರವಾಲಂಬಿ ಸ್ಥಿತಿಗೆ ನೂಕುವುದು ಈ ಹುನ್ನಾರದ ದುರುದ್ದೇಶವಾಗಿರುವಂತೆ ಕಾಣುತ್ತಿದೆ. ಇದನ್ನ ಸಹಿಸಲು ಸಾಧ್ಯ ಇಲ್ಲ.

ಅಧಿಕಾರದ ವಿಕೇಂದ್ರೀಕರಣ ಪ್ರಜಾಪ್ರಭುತ್ವ, ಅಧಿಕಾರದ ಕೇಂದ್ರಿಕರಣ ಸರ್ವಾಧಿಕಾರ. ದೇಶದಲ್ಲಿ ಪ್ರಜಾಪ್ರಭುತ್ವ ಸ್ಥಾಪನೆಯಾಗಿ ಎಂಟು ದಶಕಗಳು ಪೂರ್ಣಗೊಳ್ಳುತ್ತಿರುವ ಇಂದಿನ ಸ್ಥಿತಿಯಲ್ಲಿ ಪ್ರಜಾಪ್ರಭುತ್ವವನ್ನು ಇನ್ನಷ್ಟು ವಿಕಾಸಗೊಳಿಸಿ ಅಧಿಕಾರದ ವಿಕೇಂದ್ರಿಕರಣ ಮಾಡಬೇಕಾದ ಕಾಲದಲ್ಲಿ ಕೇಂದ್ರ ಸರ್ಕಾರ ರಾಜ್ಯಗಳನ್ನು ತಮ್ಮ ಅಧೀನದ ಮಾಂಡಲಿಕರ ರೀತಿ ನಡೆಸಿಕೊಳ್ಳುತ್ತಿರುವುದು ವಿಷಾದನೀಯ.

ಪ್ರತಿ ವರ್ಷ ಕನ್ನಡಿಗರಿಂದ ಸಂಗ್ರಹಿಸಲಾದ ಅಂದಾಜು ನಾಲ್ಕು ಲಕ್ಷ ಕೋಟಿ ರೂಪಾಯಿಗಳನ್ನು ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಸಲ್ಲಿಸುತ್ತದೆ. ಅದರಲ್ಲಿ ರಾಜ್ಯಕ್ಕೆ ವಾಪಸು ಬರುವುದು ರೂಪಾಯಿಗೆ 15 ಪೈಸೆ ಮಾತ್ರ. ಹದಿನೈದನೇ ಹಣಕಾಸು ಆಯೋಗ ತೆರಿಗೆ ಹಂಚಿಕೆಯ ಪ್ರಮಾಣವನ್ನು ಶೇಕಡಾ 4.713ರಿಂದ ಶೇಕಡಾ 3.64ಕ್ಕೆ ಇಳಿಸಿದ್ದ ಕಾರಣದಿಂದಾಗಿ ಕರ್ನಾಟಕ ಕಳೆದ ಐದು ವರ್ಷಗಳಲ್ಲಿ 68,775 ಕೋಟಿ ರೂಪಾಯಿಯನ್ನು ಕಳೆದುಕೊಂಡಿದೆ.

15ನೇ ಹಣಕಾಸು ಆಯೋಗದ ಅವಧಿ ಮುಂದಿನ ವರ್ಷ ಪೂರ್ಣಗೊಳ್ಳಲಿದ್ದರೂ ಇಲ್ಲಿಯ ವರೆಗೆ ಆಯೋಗವೇ ಶಿಫಾರಸು ಮಾಡಿರುವ ವಿಶೇಷ ಅನುದಾನ ರೂ.5495 ಕೋಟಿ ಮತ್ತು ರಾಜ್ಯ ಕೇಂದ್ರಿತ ರೂ.6000 ಕೋಟಿ ಮೊತ್ತದ ವಿಶೇಷ ಅನುದಾನವನ್ನು ಬಿಡುಗಡೆ ಮಾಡಿಲ್ಲ.

ಕೇಂದ್ರ ಹಣಕಾಸು ಆಯೋಗ ತಾನು ಶಿಫಾರಸು ಮಾಡಿದ್ದಕ್ಕಿಂತ ಕಡಿಮೆ ಮೊತ್ತದ ಹಣವನ್ನು ರಾಜ್ಯ ಸರ್ಕಾರಕ್ಕೆ ನೀಡುತ್ತಾ ಬಂದಿದೆ. 2021–22, 2022–23 ಮತ್ತು 2023–24ರ ಹಣಕಾಸು ವರ್ಷದಲ್ಲಿ ನಗರ ಸ್ಥಳೀಯ ಸಂಸ್ಥೆಗಳಿಗೆ 1,311 ಕೋಟಿ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳಿಗೆ 775 ಕೋಟಿ ಕಡಿಮೆ ಅನುದಾನ ನೀಡಲಾಗಿದೆ. 2022–23 ಮತ್ತು 2023–24ರ ಹಣಕಾಸು ವರ್ಷದಲ್ಲಿ, ಆರೋಗ್ಯ ಅನುದಾನದಲ್ಲಿ ರೂ.826 ಕೋಟಿ, ಎಸ್ ಡಿ ಆರ್ ಎಫ್ ಅಡಿಯಲ್ಲಿ ರೂ.340 ಕೋಟಿ ಹಣವನ್ನು ಕಡಿತ ಮಾಡಲಾಗಿದೆ. ಈ ಒಟ್ಟು ಬಾಕಿ ರೂ.3,300 ಕೋಟಿ ರೂಪಾಯಿ ಮತ್ತು 2024–25 ಮತ್ತು 2025–26ರ ಅವಧಿಯಲ್ಲಿ ಆಯೋಗ ಶಿಫಾರಸು ಮಾಡಿರುವ ವಿಶೇಷ ಅನುದಾನವನ್ನು ತಕ್ಷಣ ಬಿಡುಗಡೆ ಮಾಡ ಬೇಕು.

ಕೇಂದ್ರ ಸರ್ಕಾರ ರಾಜ್ಯಗಳಲ್ಲಿ ವಸೂಲು ಮಾಡುತ್ತಿರುವ ಸೆಸ್ ಮತ್ತು ಸರ್ಚಾರ್ಜ್‌ಗಳಲ್ಲಿ ರಾಜ್ಯಗಳಿಗೆ ಪಾಲು ನೀಡಲಾಗುತ್ತಿಲ್ಲ. ಸೆಸ್ ಮತ್ತು ಸರ್ಚಾರ್ಜ್ ಅನ್ನು ತೆರಿಗೆ ನಿಧಿಯಿಂದ ಹೊರಗಿಟ್ಟಿರುವ ಕಾರಣ 2017–18ರಿಂದ 2024–25ರ ಅವಧಿಯಲ್ಲಿ ಕರ್ನಾಟಕ 53,359 ಕೋಟಿ ರೂಪಾಯಿ ಕಳೆದುಕೊಂಡಿದೆ. 2010–11ರಲ್ಲಿ ಒಟ್ಟು ತೆರಿಗೆಯ ಶೇಕಡಾ 8.1ರಷ್ಟಿದ್ದ ಸೆಸ್ ಮತ್ತು ಸರ್ಚಾರ್ಜ್‌ನ ಪ್ರಮಾಣ 2024–25ರಲ್ಲಿ ಶೇಕಡಾ 14ಕ್ಕೆ ಏರಿಕೆಯಾಗಿದೆ. ಇದರಿಂದಾಗಿ ಕರ್ನಾಟಕಕ್ಕೆ ಬರುವ ತೆರಿಗೆ ಪಾಲಿನಲ್ಲಿ ಕಡಿತ ಉಂಟಾಗಿದೆ. ಇದರ ಜೊತೆಯಲ್ಲಿ ಕೇಂದ್ರದ ಸಹಾಯ ಧನ ಕೂಡಾ ವರ್ಷದಿಂದ ವರ್ಷಕ್ಕೆ ಕಡಿಮೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ತಕ್ಷಣದಿಂದಲೆ ಸೆಸ್ ಮತ್ತು ಸರ್ಚಾರ್ಜ್ ಅನ್ನು ರದ್ದುಗೊಳಿಸಬೇಕು ಇಲ್ಲವೆ ಅದನ್ನು ಒಟ್ಟು ತೆರಿಗೆಯ ನಿಧಿಗೆ ಸೇರಿಸಿ ಅದನ್ನು ರಾಜ್ಯಗಳಿಗೆ ಹಂಚಿಕೆ ಮಾಡಬೇಕು.

ಜಿಎಸ್ ಟಿ ಅನುಷ್ಠಾನದಿಂದಾಗಿ ರಾಜ್ಯ ಸರ್ಕಾರಗಳಿಗೆ ಆಗುವ ನಷ್ಟಕ್ಕೆ ಪರಿಹಾರ ನೀಡಲು ಜಿಎಸ್ ಟಿ ಪರಿಹಾರ ಸೆಸ್ ಜಾರಿಗೊಳಿಸಲಾಗಿತ್ತು. 2022ರ ಜುಲೈ ತಿಂಗಳಲ್ಲಿಯೇ ಪರಿಹಾರ ನೀಡುವುದನ್ನು ನಿಲ್ಲಿಸಿದರೂ 2026ರ ವರೆಗೆ ಸೆಸ್ ಸಂಗ್ರಹವನ್ನು ಮುಂದುವರಿಸಲಾಗಿದೆ. ಈ ಸೆಸ್ ಬದಲಿಗೆ ಹೆಚ್ಚುವರಿ ರಾಜ್ಯ ಸರಕು ಮತ್ತು ಸೇವಾ ತೆರಿಗೆ (ಎಸ್ ಜಿಎಸ್ ಟಿ) ಸಂಗ್ರಹಕ್ಕೆ ರಾಜ್ಯ ಸರ್ಕಾರಕ್ಕೆ ಅವಕಾಶ ನೀಡಬೇಕು. 1985ರಿಂದ ಸೇವಾ ತೆರಿಗೆಯನ್ನು ಪರಿಷ್ಕರಿಸಿಲ್ಲ, ಈ ದೀರ್ಘಾವಧಿಯಲ್ಲಿ ನಡೆದಿರುವ ಆರ್ಥಿಕ ಬೆಳವಣಿಗೆಯನ್ನು ಗಮನದಲ್ಲಿಟ್ಟುಕೊಂಡು ಸೇವಾ ತೆರಿಗೆಯ ಗರಿಷ್ಠ ಮಿತಿಯನ್ನು ಹೆಚ್ಚಿಸಲು ಸಂವಿಧಾನಕ್ಕೆ ತಿದ್ದುಪಡಿ ಮಾಡಬೇಕು. ರಾಜ್ಯದಲ್ಲಿ ಸಂಗ್ರಹವಾಗುವ ತೆರಿಗೆಯಲ್ಲಿ ಕನಿಷ್ಠ ಅರ್ಧದಷ್ಟನ್ನಾದರೂ ರಾಜ್ಯಕ್ಕೆ ನೀಡಬೇಕು. ಸಂವಿಧಾನಕ್ಕೆ ತಿದ್ದುಪಡಿ ಮಾಡಿ ತೆರಿಗೆಯೇತರ ಆದಾಯವನ್ನು ಕೂಡಾ ತೆರಿಗೆ ನಿಧಿಗೆ ಸೇರಿಸಬೇಕು.

ಗ್ಯಾರಂಟಿ ಯೋಜನೆಗಳಂತಹ ಜನಪ್ರಿಯ ಕಾರ್ಯಕ್ರಗಳ ಮೂಲಕ ಕನ್ನಡಿಗರ ಮನಸ್ಸು ಗೆದ್ದಿರುವ ಕಾಂಗ್ರೆಸ್ ಸರ್ಕಾರಕ್ಕೆ ಹೇಗಾದರೂ ಮಾಡಿ ಅಪಖ್ಯಾತಿ ತರಬೇಕೆಂದು ಕೇಂದ್ರ ಸರ್ಕಾರ ನಿರ್ಧರಿಸಿದಂತಿದೆ. ಇದಕ್ಕಾಗಿ ದುರುದ್ದೇಶದಿಂದ ನ್ಯಾಯಬದ್ಧವಾಗಿ ನೀಡಬೇಕಾಗಿರುವ ತೆರಿಗೆ ಪಾಲು ಮತ್ತಿತರ ಅನುದಾನ ನೀಡದೆ ರಾಜ್ಯದ ಖಜಾನೆಯನ್ನು ಬರಿದುಮಾಡಲು ಹೊರಟಿದೆ. ಇಂತಹ ದಮನಕಾರಿ ನೀತಿಗಳನ್ನು ಎದುರಿಸುವ ಶಕ್ತಿ ಮತ್ತು ಧೈರ್ಯ ರಾಜ್ಯ ಸರ್ಕಾರಕ್ಕಿದೆ. ಈ ಅನ್ಯಾಯವನ್ನು ರಾಜ್ಯದ ಜನತೆಯೂ ಅರ್ಥಮಾಡಿಕೊಂಡಿದ್ದಾರೆ ಎಂದು ನಾನು ನಂಬಿದ್ದೇನೆ.

ರಾಜ್ಯಕ್ಕೆ ಆಗುತ್ತಿರುವ ಅನ್ಯಾಯವನ್ನು ಪರಿಹರಿಸಲು ಮನವಿ – ಮಾತುಕತೆ ಮೂಲಕ ನಡೆಸುತ್ತಾ ಬಂದ ಪ್ರಯತ್ನ ವಿಫಲವಾದಲ್ಲಿ ಬೀದಿಗಿಳಿದು ಜನರ ಜೊತೆ ಸೇರಿ ಹೋರಾಟ ನಡೆಸುವುದು ಅನಿವಾರ್ಯವಾಗಬಹುದು.

## ವಿಷಬೀಜ ಬಿತ್ತಿ ತಮ್ಮ ರಾಜಕೀಯ ಬೇಳೆಕಾಳು ಬೇಯಿಸಿಕೊಳ್ಳುವವರ ಬಗ್ಗೆ ಜಾಗೃತರಾಗಿರಬೇಕು

**ಚಿಕ್ಕಮಗಳೂರು:** ಬಸವತತ್ವದ ಬಗ್ಗೆ ಮಾತನಾಡುತ್ತೇವೆ. ಬಸವಣ್ಣನವರನ್ನು ಕೊಂಡಾಡುತ್ತೇವೆ. ಆದರೆ ನಮ್ಮ ನುಡಿ–ನಡೆ ಆ ದಿಕ್ಕಿನಲ್ಲಿ ಸಾಗುತ್ತಿದೆಯೇ ಎಂದು ಚಿಂತನೆ ಮಾಡಬೇಕಿದೆ. ವೀರಶೈವ ಲಿಂಗಾಯತ ಸಮಾಜ ಎಂದರೆ ಆಲದ ಮರದಂತೆ. ಎಲ್ಲ ಸಮಾಜಗಳಿಗೂ ನಮ್ಮ ಸಮಾಜ ನೆರಳಿದ್ದಂತೆ. ಸಮಾಜವನ್ನು ಒಡೆದಾಳುವ ನೀತಿಯನ್ನು ಇಂದಿನ ಕಾಲಘಟ್ಟದಲ್ಲಿ ಕಾಣುತ್ತಿವೆ. ಸಮಾಜ ಸಮಾಜಗಳ ಮಧ್ಯೆ ವಿಷ ಬೀಜ ಬಿತ್ತಿ ತಮ್ಮ ರಾಜಕೀಯ ಬೇಳೆಕಾಳು ಬೇಯಿಸಿಕೊಳ್ಳುವವರ ಬಗ್ಗೆ ಜಾಗೃತರಾಗಿರಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದರು.ನಗರದ ಹೊರವಲಯದ ದೊಡ್ಡಕುರುಬರಹಳ್ಳಿಯ ಶ್ರೀಬಸವತತ್ವ ಪೀಠದಿಂದ ಶುಕ್ರವಾರ ಸಂಜೆ ಆಯೋಜಿಸಲಾಗಿದ್ದ ಬಸವತತ್ವ ಸಮಾವೇಶದಲ್ಲಿ ದಾಕ್ಷಾಯಣಿ ಜಯದೇವಪ್ಪ ಅವರ ದಾಕ್ಷಾಯಣಿ ವಚನಗಳು ಎಂಬ ಕೃತಿ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಬಸವಣ್ಣ ಅವರನ್ನು ವಿಶ್ವಗುರು ಎಂದು ಹೆಮ್ಮೆಯಿಂದ ಹೇಳಿಕೊಳ್ಳುತ್ತೇವೆ. ಅವರು ಸಾಮಾಜಿಕ ಕ್ರಾಂತಿಯ ಸಂದೇಶ ನೀಡಿದ್ದಾರೆ. ಅವರ ಸ್ಥಾನವನ್ನು ತುಂಬಲು ಯಾರಿಂದಲೂ ಸಾಧ್ಯವಿಲ್ಲ. ಅತ್ಯಂತ ಸರಳವಾಗಿ ಜನಸಾಮಾನ್ಯರ ಮಸಸ್ಸಿಗೆ, ಹೃದಯಕ್ಕೆ ತಟ್ಟುವ ರೀತಿಯಲ್ಲಿ ಮಾನವ ಧರ್ಮದ ಶ್ರೇಷ್ಠತೆ ಬಗ್ಗೆ ತಿಳಿಸಿಕೊಟ್ಟಿರುವವರು ಬಸವಣ್ಣನವರು. ಮನುಷ್ಯ ಕುಲವೆಲ್ಲಾ ಒಂದೇ ಕುಟುಂಬ ಎಂದು ತಿಳಿಸಿಕೊಟ್ಟು ಹೋದ ಮಹಾತ್ಮರು ಎಂದು ಬಣ್ಣಿಸಿದರು.ಸಮಾವೇಶದಲ್ಲಿ ಆಶೀರ್ವಚನ ನೀಡಿದ ಸಿಂಧಿಗೆರೆಯ ಶ್ರೀ ಕರಡಿಗವಿ ಮಠದ ಶ್ರೀಶಿವಶಂಕರ ಶಿವಯೋಗಿ ಸ್ವಾಮೀಜಿ, ಬಸವ ತತ್ವಗಳನ್ನು ಮೈಗೂಡಿಸಿಕೊಂಡು ಸುತ್ತಮುತ್ತಲಿನ ಭಕ್ತರ ಮನಸ್ಸನ್ನು ಗೆದ್ದಿದ್ದ ಲಿಂಗೈಕ್ಯ ಶ್ರೀ ಜಯಚಂದ್ರಶೇಖರ ಸ್ವಾಮೀಜಿಗಳು ಲಿಂಗೈಕ್ಯರಾದ ನಂತರ ಅವರ ಮಠಕ್ಕೆ ಉತ್ತರಾಧಿಕಾರಿಯಾಗಿ ಬಂದ ಡಾ. ಶ್ರೀ ಬಸವಮರಳಸಿದ್ಧ ಸ್ವಾಮೀಜಿಗಳು ಬಸವತತ್ವ ಆಚರಣೆ ಹಾಗೂ ಪ್ರಸಾರದಲ್ಲಿ ಸಿದ್ಧಹಸ್ತರು. ಇವರು ಶ್ರೀ ಮಠಕ್ಕೆ ಉತ್ತರಾಧಿಕಾರಿಗಳಾಗಿ ಬಂದಿರುವುದೇ ಭಕ್ತರ ಸುದೈವ ಎಂದರು.ಈ ಸಂದರ್ಭದಲ್ಲಿ ಉದ್ಯಮಿ ಶಾಲಿನಿ ನಾಲ್ವಾಡ್, ಹಿರಿಯ ಸಂಶೋಧಕ ವೀರಣ್ಣ ರಾಜು ದಂಪತಿ, ಕಾರ್ಗಿಲ್ ಯೋಧ ಕ್ಯಾಪ್ಟನ್ ನವೀನ್ ನಾಗಪ್ಪ ದಂಪತಿಯನ್ನು ಸನ್ಮಾನಿಸಲಾಯಿತು. ಬಸವತತ್ವ ಪೀಠದ ಡಾ.ಶ್ರೀ ಬಸವಮರುಳಸಿದ್ಧ ಸ್ವಾಮೀಜಿ ಅಧ್ಯಕ್ಷತೆ ವಹಿಸಿದ್ದರು. ಯಳನಾಡು ಮಠದ ಶ್ರೀ ಜ್ಞಾನ ಪ್ರಭು ಸಿದ್ದರಾಮ ಸ್ವಾಮೀಜಿ, ಶ್ರೀಶಂಕರ ದೇವರ ಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಸಂಸದ ಕೋಟ ಶ್ರೀನಿವಾಸ ಪೂಜಾರಿ,ಶಾಸಕ ಎಚ್.ಡಿ.ತಮ್ಮಯ್ಯ, ಮಾಜಿ ಶಾಸಕ ಬೆಳ್ಳಿ ಪ್ರಕಾಶ್, ವಿಧಾನ ಪರಿಷತ್ ಮಾಜಿ ಸದಸ್ಯ ಎಸ್. ರುದ್ರೇಗೌಡ, ಬಿಜೆಪಿ ಜಿಲ್ಲಾಧ್ಯಕ್ಷ ಎಂ.ಆರ್. ದೇವರಾಜ ಶೆಟ್ಟಿ, ಬಿಜೆಪಿ ರೈತ ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಎಚ್.ಸಿ.ಕಲ್ಮರುಡಪ್ಪ, ನಗರಸಭೆ ಅಧ್ಯಕ್ಷೆ ಸುಜಾತಾ ಶಿವಕುಮಾರ್, ಸಿಡಿಎ ಅಧ್ಯಕ್ಷ ನಯಾಜ್ ಅಹಮದ್, ಪ್ರಮುಖರಾದ ಕೋಟೆ ರಂಗನಾಥ್, ದೀಪಕ್ ದೊಡ್ಡಯ್ಯ ಮತ್ತಿತರರಿದ್ದರು.

## ವಿಜಯೇಂದ್ರ ಕಾರಿಗೆ ಡಿಕ್ಕಿ

**ಚಿಕ್ಕಮಗಳೂರು:** ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಪ್ರಯಾಣಿಸುತ್ತಿದ್ದ ಕಾರಿನ ಹಿಂ ಬದಿಯಲ್ಲಿ ಚಲಿಸುತ್ತಿದ್ದ ಮತ್ತೊಂದು ಕಾರಿಗೆ ಲಾರಿ ಗುದ್ದಿದ ಘಟನೆ ತಾಲೂಕಿನ ಲಕ್ಯಾ ಕ್ರಾಸ್ ಬಳಿ ನಡೆದಿದೆ.ಅಪಘಾತದಲ್ಲಿ ಕಾರು ಚಾಲಕ ಪ್ರಾಣಾಪಾಯದಿಂದ ಪಾರಾಗಿದ್ದಾನೆ. ಚಿಕ್ಕಮಗಳೂರು ನಗರದಲ್ಲಿ ಬಸವತತ್ವ ಪೀಠದಲ್ಲಿ ಆಯೋಜಿಸಿದ್ದ ಬಸವತತ್ವ ಸಮಾವೇಶದಲ್ಲಿ ಪಾಲ್ಗೊಂಡು ಶಿವಮೊಗ್ಗಕ್ಕೆ ತೆರಳುವ ವೇಳೆ ಘಟನೆ ಸಂಭವಿಸಿದೆ.ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಬೇರೊಂದು ಕಾರಿನಲ್ಲಿ ಪ್ರಯಾಣಿಸುತ್ತಿದ್ದರು. ಅವರ ಕಾರಿನ ಹಿಂಬದಿಯಲ್ಲಿ ಚಲಿಸುತ್ತಿದ್ದ ಕಾರಿಗೆ ಲಾರಿ ಡಿಕ್ಕಿ ಹೊಡೆದಿದ್ದು, ಲಾರಿ ಗುದಿದ್ದ ರಭಸಕ್ಕೆ ಕಾರಿನ ಮುಂಭಾಗ ಜಖಂಗೊಂಡಿದೆ.ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದು ಲಾರಿ ಚಾಲಕನನ್ನು ಪೊಲೀಸರು ವಿಚಾರಣೆಗೆ ಒಳಪಡಿಸಿದ್ದಾರೆ.

## ಕಾಡಾನೆ ಪ್ರತ್ಯಕ್ಷ

**ಬಾಳೆಹೊನ್ನೂರು:** ವಿರಾಜಪೇಟೆ ಬೈಂದೂರು ರಾಜ್ಯ ಹೆದ್ದಾರಿಯ ಎಲೆಕಲ್ಲಿನ ಕಾಡಿನಲ್ಲಿ ಕಾಡಾನೆಯೊಂದು ರಸ್ತೆ ದಾಟಿ ಬನ್ನೂರು ಗ್ರಾಮಕ್ಕೆ ಹೋಗುತ್ತಿದ್ದು ಪ್ರಯಾಣಿಕರ ಕ್ಯಾಮರಾದಲ್ಲಿ ಸೆರೆಸಿಕ್ಕಿದೆ. ಆನೆ ಬರುತ್ತಿದ್ದರೂ ಲೆಕ್ಕಿಸದೆ ವಾಹನ ಚಾಲಕರು ವಾಹನವನ್ನು ಚಾಲನೆ ಮಾಡುತ್ತಿದ್ದಾರೆ. ಕೆಲವೆ ಸೆಕೆಂಡ್ ಅಂತರದಲ್ಲಿ ರಸ್ತೆಯನ್ನು ದಾಟಿದೆ. ಕಳೆದ 3 ದಿನಗಳ ಹಿಂದೆ ಸರ್ಗಳ್ಳಿ ಹಾಗೂ ಕುಂಜುವಳ್ಳಿಯಲ್ಲಿ ಕಾಡಾನೆಯೊಂದು ಅಡಿಕೆ ತೋಟಕ್ಕೆ ದಾಳಿ ಇಟ್ಟು 100ಕ್ಕೂ ಹೆಚ್ಚು ಅಡಿಕೆ ಮರವನ್ನು ನಾಶಪಡಿಸಿದೆ. ಆಡುವಳ್ಳಿ ಸಮೀಪ ಮರಿ ಆನೆಯೊಂದಿಗೆ 4 ಆನೆಗಳಿದ್ದು ರಸ್ತೆಯಲ್ಲೆ ಸಂಚರಿಸುತ್ತಿದ್ದು ಜನರಲ್ಲಿ ಆತಂಕ ಮೂಡಿಸಿದೆ. ಮಲೆನಾಡು ಭಾಗದಲ್ಲಿ ಕಾಡಾನೆ, ಕಾಡುಕೋಣಗಳ ಹಾವಳಿ ಹೆಚ್ಚಾಗಿದ್ದು ಕಾರ್ಮಿಕರು ಕೆಲಸಕ್ಕೆ ಹೋಗಲು

## ಇತಿಹಾಸವಿರುವ ಮಠಗಳನ್ನು ಹಾಳು ಮಾಡಿದ ಸ್ವಾಮಿಗಳನ್ನು ನಾವು ಕಾಣುತ್ತೇವೆ–ಕಾಗಿನೆಲೆ ಶ್ರೀಗಳು



**ಹೊಸದುರ್ಗ:** ಈ ನಾಡಿನಲ್ಲಿ ಸಾಕಷ್ಟು ಪೀಠಗಳು, ಜಗದ್ಗುರುಗಳು, ಸ್ವಾಮಿಗಳು ಇದ್ದಾರೆ ಹಾಗೆಯೇ ಇತಿಹಾಸ ವಿರುವ ಮಠಗಳು, ಇತಿಹಾಸ ಸೃಷ್ಟಿ ಮಾಡಿರುವ ಮಠಗಳು ಇತಿಹಾಸವಿರುವ ಮಠಗಳನ್ನು ಹಾಳು ಮಾಡಿದ ಸ್ವಾಮಿಗಳನ್ನು ನಾವು ಕಾಣುತ್ತೇವೆ. ಅನೇಕ ಮಠಗಳಲ್ಲಿ ಸ್ವಾಮಿಗಳು ಮಠದಿಂದ ಘಟವನ್ನು ಬೆಳೆಸಿಕೊಂಡರೆ ಶಾಂತವೀರ ಸ್ವಾಮೀಜಿ ಘಟದಿಂದ ಮಠವನ್ನು ಕಟ್ಟುತ್ತಿದ್ದಾರೆ ಎಂದು ಕಾಗಿನೆಲೆ ಕನಕಗುರು ಪೀಠದ ನಿರಂಜನಾನಂದಪುರಿ ಸ್ವಾಮೀಜಿ ಅಭಿಪ್ರಾಯಿಸಿದರು. ಪಟ್ಟಣದ ಕುಂಚಗಿರಿಯ ಕುಂಚಿಟಿಗ ಮಠದಲ್ಲಿ ಶುಕ್ರವಾರ ಆಯೋಜಿಸಲಾಗಿದ್ದ ಸಂಗಮೇಶ್ವರ ಜಯಂತಿ, ಡಾ:ಶ್ರೀ ಶಾಂತವೀರಸ್ವಾಮೀಜಿಯವರ 45ನೇ ವರ್ಷದ ಹುಟ್ಟುಹಬ್ಬದ ಆಚರಣೆ, 28ನೇ ವರ್ಷದ ಶ್ರೀಗಳ ದೀಕ್ಷಾ ಮಹೋತ್ಸವ ಹಾಗೂ 24ನೇ ವರ್ಷದ ಪಟ್ಟಾಧಿಕಾರ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಶಾಂತವೀರ ಸ್ವಾಮೀಜಿಗಳು ಯಾವುದೇ ಮಠಪರಂಪರೆಯಿಲ್ಲದೆ ದೀಕ್ಷೆಯನ್ನು ಪಡೆದುಕೊಂಡು ತನ್ನ ಜೀವನದಲ್ಲಿ ಏನನ್ನಾದರೂ ಸಾಧನೆ ಮಾಡಬೇಕೆಂಬ ಹಟದಿಂದ ಸಮಾಜವನ್ನು ಸಂಘಟಿಸುವ ಮೂಲಕ ಅತಿ ಕಡಿಮೆ ಅವಧಿಯಲ್ಲಿ ಸಮಾಜದ ಜನರನ್ನು ಜಾಗೃತರನ್ನಾಗಿಸುವ ಕೆಲಸ ಮಾಡುತ್ತಿದ್ದಾರೆ ಎಂದ ಶ್ರೀಗಳು ನಮ್ಮ ಸ್ವಾಮೀಜಿಗಳ ಒಕ್ಕೂಟದಲ್ಲಿಯೂ ಸರ್ಕಾರದ ಸಂಸದೀಯ ಮಂಡಳಿಯಂತೆ ಒಕ್ಕೂಟ ಮಾಡಿಕೊಂಡು ಹಿಂದುಳಿದ ಸಮುದಾಯಗಳ ಹೇಳಿಗೆಗೆ ಶ್ರಮಿಸಲಾಗುತ್ತಿದೆ ಎಂದರು.

ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಕುಂಚಿಟಿಗ ಮಠದ ಡಾ ಶಾಂತವೀರ ಸ್ವಾಮೀಜಿ ತಮ್ಮಲ್ಲಿ ಅನೇಕ ಸಮಸ್ಯೆಗಳಿದ್ದರೂ ಬೇರೆಬ್ಬರನ್ನು ಟೀಕಿಸುವ, ಹೀಯಾಳಿಸುವ, ಬೇರೆಯವರ ತಪ್ಪುಗಳನ್ನು ಹುಡುಕುವ ಮನೋಪ್ರವೃತ್ತಿ ಇಂದಿನ ಜನರ ಫ್ಯಾಷನ್ ಆಗಿದೆ ಯಾರೂ ಜಾತಿಗೆ ಅರ್ಜಿ ಹಾಕಿ ಹುಟ್ಟುವುದಿಲ್ಲ ಹಿಂದುಳಿದ ನಾವೇಲ್ಲಾ ಸ್ವಾಮಿಗಳು ಒಂದೇ ಎನ್ನುವ ಮನೋಭಾವನೆಯಲ್ಲಿದ್ದೇವೆ ಅದೇ ರೀತಿ ಎಲ್ಲಾ ಜನರೂ ನಮ್ಮಂತೆ ಇದ್ದರೆ ಈ ಭೂಮಿಯ ಮೇಲೆ ಯಾವುದೇ ಜಾತಿ ಸಂಘರ್ಷ ಆಗಲು ಸಾಧ್ಯವಿಲ್ಲ ಎಂದರು. ಬಿಜೆಪಿ ಮುಖಂಡ ಎಸ್ ಲಿಂಗಮೂರ್ತಿ ಮಾತನಾಡಿ ಸ್ವಾಮಿಗಳು ಎಲ್ಲವನ್ನು ಜನರಿಗೆ ಕೊಡಲು ಸಾಧ್ಯವಿಲ್ಲ ಆದರೆ ನಾವು ಬದುಕಲು ಒಂದು ಸ್ಫೂರ್ತಿಯನ್ನು, ಬದುಕಿಗೆ ಒಂದು ದಾರಿ ,ಗುರಿಯನ್ನು ಸ್ವಾಮಿಗಳು ನೀಡುತ್ತಾರೆ. ಈ ನಿಟ್ಟಿನಲ್ಲಿ ನಮ್ಮ ಪ್ರಜಾಪ್ರಭುತ್ವದ ರಾಜಕಾರಣದಲ್ಲಿ ಸ್ವಾಮಿಜಿಗಳ ಧಾರ್ಮಿಕ ಸಂಸತ್ ಅನ್ನು ನಡೆಸಬೇಕಾದ ಅನಿವಾರ್ಯತೆ ಬರಬಹುದು ಎಂದರು. ಕಾರ್ಯಕ್ರಮದಲ್ಲಿ ಚಿತ್ರದುರ್ಗದ ಮಾದಾರ ಚನ್ನಯ್ಯ ಶರಣರು, ಬೋವಿ ಗುರು ಪೀಠದ ಶ್ರೀಗಳು, ರಾಜನಹಳ್ಳಿಯ ವಾಲ್ಮೀಕಿ ಗುರು ಪೀಠದ ಶ್ರೀಗಳು , ಯಾದವ ಗುರು ಪೀಠದ ಶ್ರೀ ಯಾದವಾನಂದ ಸ್ವಾಮೀಜಿ, ಮಡಿವಾಳ ಗುರುಪೀಠದ ಬಸವ ಮಾಚಿದೇವ ಸ್ವಾಮೀಜಿ, ವನಕಲ್ಲು ಮಠದ ಡಾ:ಶ್ರೀ ರಮಾನಂದ ಸ್ವಾಮೀಜಿ, ಹಡಪದ ಅಪ್ಪಣ್ಣ ಸೇರಿದಂತೆ ವಿವಿಧ ಭಾಗಗಳಿಂದ ಆಗಮಿಸಿದ್ದ ಹಲವಾರು ಸ್ವಾಮೀಜಿಗಳು, ಮುಖಂಡರಾದ ಲಗ್ಗರೆ ನಾರಾಯಣಸ್ವಾಮಿ, ಮರುಳೀಧರ ಹಾಲಪ್ಪ ಮಠಶಿವು ಮತ್ತು ಡಾ.ಹಾಲಪ್ಪ ಮಾಜಿ ಶಾಸಕ ಟಿ.ಎಚ್ ಬಸವರಾಜಪ್ಪ ತಾಲೂಕು ಕುಂಚಿಟಿಗ ಸಮಾಜದ ಅಧ್ಯಕ್ಷ ಕಲ್ಕೆರೆಶೇಖರಪ್ಪ ಸೇರಿದಂತೆ ಸಮಾಜದ ಗಣ್ಯರು ಭಕ್ತರು ಭಾಗವಹಿಸಿದ್ದರು.

## ಮಾನಸಿಕ ಸದೃಢತೆಗೆ ಕ್ರೀಡೆ ಸಹಕಾರಿ

**ಶಿವಮೊಗ್ಗ:** ಕ್ರೀಡೆ ಮಾನಸಿಕವಾಗಿ ಸದೃಢರಾಗಲು ಸಹಕಾರಿ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಜಗದೀಶ್ ಹೇಳಿದರು.

ಥ್ರೋಬಾಲ್ ಸಂಸ್ಥೆಯ ವತಿಯಿಂದ ಆಯೋಜಿಸಿದ್ದ ಬಿಎಸ್‌ವೈ ಕಪ್ ಥ್ರೋಬಾಲ್ ಪಂದ್ಯಾವಳಿಯ ಸಮಾರೋಪ ಸಮಾರಂಭದಲ್ಲಿ ವಿಜೇತ ತಂಡಗಳಿಗೆ ಬಹುಮಾನ ವಿತರಿಸಿ ಮಾತನಾಡಿದರು.ಕ್ರೀಡೆಯಲ್ಲಿ ಸೋಲು ಗೆಲುವು ಮುಖ್ಯವಲ್ಲ, ಕ್ರೀಡೆಯಲ್ಲಿ ಭಾಗವಹಿಸುವುದು ಮುಖ್ಯ. ಸೋತಾಗ ಕುಗ್ಗದೇ, ಗೆದ್ದಾಗ ಹಿಗ್ಗದೇ ಎರಡನ್ನೂ ಸಮಾನವಾಗಿ ಸ್ವೀಕರಿಸಿ ಎಂದು ಕ್ರೀಡಾಪಟುಗಳಿಗೆ ಕಿವಿಮಾತು ಹೇಳಿದರು.

ಇದೇ ಸಂದರ್ಭದಲ್ಲಿ ರಾಜ್ಯ ವಾಲಿಬಾಲ್ ಸಂಸ್ಥೆಯ ಖಜಾಂಚಿ ಕೆ.ಎಸ್. ಶಶಿ ಮಾತನಾಡಿ, ಸತತವಾಗಿ ನಾಲ್ಕು ವರ್ಷಗಳಿಂದ ಬಿ.ಎಸ್.ಯಡಿಯೂರಪ್ಪ ಜನ್ಮದಿನದ ಪ್ರಯುಕ್ತ ಥ್ರೋಬಾಲ್ ಪಂದ್ಯಾವಳಿಯನ್ನು ಆಯೋಜಿಸುತ್ತಾ ಬರುತ್ತಿದ್ದು, ಕಳೆದ ಬಾರಿಗಿಂತ ಈ ಬಾರಿ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಭಾಗವಹಿಸಿರುವುದು ಸಂತಸದ ಸಂಗತಿ ಎಂದರು.

ಅಂತಿಮ ಪಂದ್ಯದಲ್ಲಿ ಮಹಿಳೆಯರ ಜೆಎನ್‌ಎನ್‌ಇ ಕಾಲೇಜಿನ ಮಹಿಳೆಯರು ಮತ್ತು ಶಿವಮೊಗ್ಗದ ನಿಸರ್ಗ ಮಹಿಳಾ ತಂಡದ ಪಂದ್ಯಾವಳಿ ಅತ್ಯಂತ ರೋಚಕವಾಗಿತ್ತು ಎಂದು ತಿಳಿಸಿದರು.ಮಹಿಳಾ ವಿಭಾಗದಲ್ಲಿ ಪ್ರಥಮ ಸ್ಥಾನ ಜೆಎನ್‌ಎನ್‌ಇ ಕಾಲೇಜು, ದ್ವಿತೀಯ ಸ್ಥಾನ ನಿಸರ್ಗ ಮಹಿಳಾ ತಂಡ ಪಡೆದುಕೊಂಡರೇ ತೃತೀಯ ಸ್ಥಾನ ಶಿವಮೊಗ್ಗ ಫ್ರೇಂಡ್ಸ್ ಗ್ರೂಪ್, ಚತುರ್ಥ ಸ್ಥಾನ ಸೃಷ್ಟಿ ಮಹಿಳಾ ತಂಡ ಯಲವಟ್ಟಿ, ಪುರುಷರ ವಿಭಾಗದಲ್ಲಿ ಶಿವಮೊಗ್ಗ ಸಹ್ಯಾದ್ರಿ ತಂಡ ಪ್ರಥಮ



ಸ್ಥಾನ, ದ್ವಿತೀಯ ಸ್ಥಾನ ಹೊಸನಗರ ತಂಡ, ತೃತೀಯ ನವುಲೆ ಬಾಯ್ಸ್, ಚತುರ್ಥ ಸ್ಥಾನ ಪೆಸಿಟ್ ಕಾಲೇಜು ಬಾಲಕರು ಪಡೆದುಕೊಂಡರು. ನಗದು, ಟ್ರೋಫಿಯನ್ನು ವಿತರಿಸಿ ಗೌರವಿಸಲಾಯಿತು.ಈ ಸಂದರ್ಭದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ರೇಖ್ಯಾನಾಯ್ಕ್, ದೈಹಿಕ ಶಿಕ್ಷಣ ತಾಲ್ಲೂಕು ಅಧಿಕಾರಿಗಳಾದ ನಿರಂಜನಮೂರ್ತಿ, ಪತ್ರಕರ್ತ ಗಾ.ರಾ.ಶ್ರೀನಿವಾಸ್, ಜಯನಗರ ಪಿಎಸ್‌ಐ ಕೋಮಲ, ಬಿಜೆಪಿಯ ಹಿಂದುಳಿದ ವರ್ಗಗಳ ಮೋರ್ಚಾದ ಉಪಾಧ್ಯಕ್ಷ ವಿಕಾಸ್, ಫುಟ್ಬಾಲ್ ಜಿಲ್ಲಾ ಸಂಸ್ಥೆಯ ಅಧ್ಯಕ್ಷ ಶ್ರೀನಾಥ್, ಪತ್ರಕರ್ತ ರಾಕೇಶ್ ಸೋಮಿನಕೊಪ್ಪ, ಅನುದಾನ ರಹಿತ ಶಾಲಾ ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ರಾ.ಹ.ತಿಮ್ಮೇನಹಳ್ಳಿ, ಥ್ರೋಬಾಲ್ ಸಂಸ್ಥೆಯ ಕಾರ್ಯದರ್ಶಿ ಕೆ.ಜಿ. ಮಠಪತಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಹಣ ದುರುಪಯೋಗ: ಕ್ರಿಮಿನಲ್ ಮೊಕ್ಕದಮೆ ದಾಖಲಿಸಿ

**ಹೊನ್ನಾಳಿ:** ತಾಲೂಕಿನ ಕುಂದುರು ಗ್ರಾ.ಪಂ.ನಲ್ಲಿ ಪಂಚಾಯಿತಿಯಲ್ಲಿ 2022–23 ರಿಂದ 2024–25 ನೇ ಸಾಲಿನವರೆಗೆ 15 ನೇ ಹಣಕಾಸು ಯೋಜನೆಡಿಯಲ್ಲಿ ಮೀಸಲಿರಿಸಿದ ನಿರ್ಬಂದಿತ ಅನುದಾನ ಕುರಿತು ವಿಶೇಷ ಲೆಕ್ಕ ಪರಿಶೋಧನಾ ವರದಿಯಲ್ಲಿ ನ್ಯೂನತೆ ಹಾಗೂ ಹಣ ದುರುಪಯೋಗ ಕಂಡು ಬಂದ ಹಿನ್ನಲೆಯಲ್ಲಿ ಪ್ರಸ್ತುತ ಅವಧಿಯ ಪಂಚಾಯಿತಿಯ ಅಧ್ಯಕ್ಷರು,ಉಪಾಧ್ಯಕ್ಷರು, ಗ್ರಾ.ಪಂ. ಸದಸ್ಯರು ಸೇರಿದಂತೆ ಪಿಡಿಒಗಳ ವಿರುದ್ಧ ಕರ್ನಾಟಕ ಗ್ರಾಮ ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43ಎ,48(4) ಹಾಗೂ 48(5) ರನ್ವಯ ಸದಸ್ಯತ್ವ ಅನರ್ಹಗೊಳಿಸುವುದು ಮತ್ತು ಸದರಿ ಅಧಿನಿಯಮದ ಪ್ರಕಾರ ಕ್ರಿಮಿನಲ್ ಮೊಕದ್ದಮೆಯನ್ನು ದಾಖಲಿಸಬೇಕು ಎಂದು ಸಾಮಾಜಿಕ ಕಾರ್ಯಕರ್ತ ಪ್ರಸನ್ನಕುಮಾರ್ ತಾ.ಪಂ. ಇಒ ಅವರಿಗೆ ಮನವಿಯಲ್ಲಿ ತಿಳಿಸಿದ್ದಾರೆ.ಈ ಅವಧಿಯ 28 ಗ್ರಾ.ಪಅಂ. ಸದಸ್ಯರಿಗೆ 2021ರ ಮಾರ್ಚ್‌ನಲ್ಲಿ ಐದು ದಿನಗಳ ಕಾಲ ಗ್ರಾ.ಪಂ. ಸದಸ್ಯರ ಕಾರ್ಯ,ಹೊಣೆಗಾರಿಕೆ ಹಾಗೂ ಕರ್ತವ್ಯಗಳು, ನಾಯಕತ್ವ, ಹಾಗೂ ಮಹಿಳೆ ಮತ್ತು ಮಕ್ಕಳ ಅಭಿವೃದ್ಧಿಯಲಲಿ ಗ್ರಾಮ ಪಂಚಾಯಿತಿಯ ಪಾತ್ರ,ಹಾಘೂ ಯೋಜನೆಗಳ ತಯಾರಿ, ಆಧ್ಯತೆ ನೀಡಬೇಕಾದ ಎಲ್ಲಾ ಅಂಶಗಳ ಬಗೆ ಗ್ರಾ.ಪಂ. ಸದಸ್ಯರಿಗೆ ತರಬೇತಿ ನೀಡಿದ್ದರೂ ಸಹ,ಯಾವುದನ್ನು ಗಣನೆಗೆ ತೆಗೆದುಕೊಳ್ಳದೆ 15 ನೇ ಹಣಕಾಸು ಯೋಜನೆಯಡಿಯಲ್ಲಿ ಬಿಡುಗಡೆಯಾದ ಅನುದಾನ ದುರುಪಯೋಗ ಮಾಡಿಕೊಂಡಿದ್ದಾರೆ ಆದ್ದರಿಂದ ಈ ಎಲ್ಲಾ ಸದಸ್ಯರು ಹಾಗೂ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಬೇಕು ಎಂದು ಮನವಿಯಲ್ಲಿ ತಿಳಿಸಿದ್ದಾರೆ.

## ಪ್ಯಾನ್ ಇಂಡಿಯಾ ಸಿನಿಮಾ: ಎಚ್ಚರಿಕೆ ಅಗತ್ಯ

ಕನ್ನಡ ಚಿತ್ರರಂಗದಲ್ಲಿ ಪ್ಯಾನ್ ಇಂಡಿಯಾ ಟ್ರೆಂಡ್ ನಡೆಯುತ್ತಿದೆ. ಒಂದೆರಡು ಕನ್ನಡ ಸಿನಿಮಾಗಳನ್ನು ಹೊರತುಪಡಿಸಿ ಬಹುತೇಕ ಎಲ್ಲರೂ ಈಗ ಪ್ಯಾನ್ ಇಂಡಿಯಾ ಜಪ ಮಾಡುತ್ತಿದ್ದಾರೆ. ಸಿನಿಮಾವನ್ನು ದೊಡ್ಡದಾಗಿ ಕಟ್ಟಿಕೊಡಲು ಮುಂದಾಗುತ್ತಿದ್ದಾರೆ. ಈ ಬೆಳವಣಿಗೆಗೆ ಖುಷಿಪಡ ಬೇಕೋ ಅಥವಾ ಭವಿಷ್ಯದ ಕುರಿತು ಭಯಪಡಬೇಕೋ ಗೊತ್ತಿಲ್ಲ.ಏಕೆಂದರೆ ಅತಿಯಾದರೆ ಅಮೃತವೂ ವಿಷ, ಪ್ಯಾನ್ ಇಂಡಿಯಾ ಸಿನಿಮಾ ಮಾಡುತ್ತೇವೆ ಎಂದು ಹೇಳಿಕೊಳ್ಳುವುದು ಸುಲಭ. ಆದರೆ, ಅದರ ಹಿಂದಿನ ಶ್ರಮ, ಸಿನಿಮಾವನ್ನು ಕಟ್ಟಿಕೊಡಲು ಬೇಕಾದ ಪೂರ್ವತಯಾರಿ ಇದೆಯೆಲ್ಲಾ ಅದು ಸುಲಭದ ಮಾತಲ್ಲ. ಆದರೆ, ಇತ್ತೀಚೆಗೆ ಸಿನಿಮಾ ರಂಗದ ಬಹುತೇಕರು ಪ್ಯಾನ್ ಇಂಡಿಯಾ ಎಂದು ಹೊರಡುತ್ತಿದ್ದಾರೆ. ಒಂದು ಪ್ಯಾನ್ ಇಂಡಿಯಾ ಸಿನಿಮಾ ಕಟ್ಟಿಕೊಡುವಾಗ ಸಿನಿಮಾದ ಗುಣಮಟ್ಟ ಹಾಗೂ ನೀವು ಹೇಳ ಹೊರಟಿರುವ ಕಥೆ ತುಂಬಾ ದೊಡ್ಡ ಪಾತ್ರ ವಹಿಸುತ್ತದೆ. ಏಕೆಂದರೆ ನೀವು ಕೇವಲ ಯಾವುದೋ ಒಂದು ಪ್ರಾದೇಶಿಕ ವರ್ಗದ ಜನರನ್ನು ಗಮನದಲ್ಲಿಟ್ಟುಕೊಂಡು ಸಿನಿಮಾ ಮಾಡುತ್ತಿಲ್ಲ. ಬದಲಾಗಿ ಇಡೀ ದೇಶದ ಜನರು ಆ ಸಿನಿಮಾದ ಮೇಲೆ ನಿರೀಕ್ಷೆ ಇಟ್ಟಿರುತ್ತಾರೆ. ಈ ನಿಟ್ಟಿನಲ್ಲಿ ಪ್ಯಾನ್ ಇಂಡಿಯಾ ಕ್ರೇಜ್‌ಗೆ ಬಿದ್ದು ಸಿನಿಮಾ ಮಾಡುವವರು ಎಚ್ಚರಿಕೆಯ ಹೆಜ್ಜೆ ಇಡಬೇಕಾಗುತ್ತದೆ.ಎಲ್ಲವನ್ನು ದೊಡ್ಡದಾಗಿ, ಅದ್ದೂರಿಯಾಗಿ, ಪರಭಾಷಾ ಕಲಾವಿದರನ್ನು ಹಾಕಿ ಸಿನಿಮಾ ಮಾಡಿದರೆ ಅದು ಪ್ಯಾನ್ ಇಂಡಿಯಾ ಆಗುತ್ತದೆ ಎಂಬ ಭ್ರಮೆಯಿಂದ ಮೊದಲು ನಮ್ಮ ಸಿನಿಮಾ ಮಂದಿ ಹೊರಬರಬೇಕಿದೆ. ಪ್ಯಾನ್ ಇಂಡಿಯಾ ಸಿನಿಮಾದ ಗೆಲುವು ನಿಂತಿರೋದು ಸಿನಿಮಾದ ಮೇಕಿಂಗ್ ಗಿಂತ ಹೆಚ್ಚಾಗಿ ಕಂಟೆಂಟ್ ಮೇಲೆ. ಅದಕ್ಕೆ ಸ್ಪಷ್ಟ ಉದಾಹರಣೆಯಾಗಿ ನಮ್ಮ ಕಣ್ಣ ಮುಂದಿರೋದು 'ಕಾಂತಾರ'. ಹಾಗೆ ನೋಡಿದರೆ 'ಕಾಂತಾರ' ಕೇವಲ ಕನ್ನಡಕ್ಕಾಗಿ ಮಾಡಿದ ಚಿತ್ರ. ಆದರೆ ಬಿಡುಗಡೆಯಾದ ನಂತರ ಆ ಸಿನಿಮಾ ವಿಶ್ವಮಟ್ಟದಲ್ಲಿ ಸದ್ದು ಮಾಡಿತು. ಹಾಗಂತ ಈಗ ಮತ್ತೆ ಅದೇ ತರಹದ ಕಂಟೆಂಟ್ ಅನ್ನು ಪ್ಯಾನ್ ಇಂಡಿಯಾದಲ್ಲಿ ಮಾಡುತ್ತೇನೆ ಎಂದು ಹೊರಟರೆ ಕೈ ಸುಟ್ಟುಕೊಳ್ಳಬೇಕಾದಿತು.ಇವತ್ತು ಪ್ರೇಕ್ಷಕನ ಅಭಿರುಚಿ ಬದಲಾಗಿದೆ. ಮನಸ್ಥಿತಿಯೂ ಹೊಸದನ್ನು ಬಯಸುತ್ತಿದೆ. ಈಗಿನ ಪ್ರೇಕ್ಷಕರಿಗೂ 'ಸಿನಿ ಶಿಕ್ಷಣ' ಚೆನ್ನಾಗಿಯೇ ಇದೆ. ಅದರ ಪರಿಣಾಮವಾಗಿಯೇ ಇವತ್ತು ಕಂಟೆಂಟ್ ಸಿನಿಮಾಗಳು ದೊಡ್ಡಮಟ್ಟದಲ್ಲಿ ಗೆಲ್ಲುತ್ತಿವೆ. ಇದು ಕೇವಲ ಕನ್ನಡಕ್ಕಷ್ಟೇ ಸೀಮಿತವಾಗಿಲ್ಲ ಎಲ್ಲಾ ಭಾಷೆಗಳಿಗೂ ಇದು ಅನ್ವಯಿಸುತ್ತಿದೆ. ಹೀಗಿರುವಾಗ ಕನ್ನಡ ಚಿತ್ರರಂಗ ಪ್ಯಾನ್ ಇಂಡಿಯಾ ಕ್ರೇಜ್‌ನಲ್ಲಿ ಕಳೆದುಹೋಗುವ ಮುನ್ನ ಎಚ್ಚೆತ್ತುಕೊಳ್ಳಬೇಕಿದೆ. ಸದ್ಯ ಕನ್ನಡದಿಂದ ಅನೇಕ ಸಿನಿಮಾಗಳು ಪ್ಯಾನ್ ಇಂಡಿಯಾ ರಿಲೀಸ್‌ಗೆ ರೆಡಿಯಾಗಿವೆ. ಸಿನಿಮಾಗಳಿಗೆ ಈ ನಿಟ್ಟಿನಲ್ಲಿ ಎಚ್ಚರದ ಹೆಜ್ಜೆ ಅಗತ್ಯ.

–ರಕ್ಷಿತಾ ಎಂ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗ, ಕುವೆಂಪು ವಿವಿ

## ಶಾಸಕರ ಕ್ಷೇತ್ರಾಭಿವೃದ್ಧಿ ಹಾಗೂ ಬೆಂಗಳೂರು ಅಭಿವೃದ್ಧಿಗೆ ಬಜೆಟ್ನಲ್ಲಿ 100ಕೋಟಿ ಅನುದಾನಕ್ಕೆ ಮನವಿ ಸಲ್ಲಿಕೆ

**ಬೆಂಗಳೂರು:** ನಗರದ ಬಿಜೆಪಿ ಶಾಸಕರು ಹಾಗೂ ಸಂಸದರ ನಿಯೋಗ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕಾವೇರಿ ನಿವಾಸದಲ್ಲಿ ಇಂದು ಭೇಟಿ ಮಾಡಿ ಮನವಿ ಸಲ್ಲಿಸಿತು .ಈ ಬಾರಿಯ ಬಜೆಟ್ ನಲ್ಲಿ ಬಿಜೆಪಿ ಶಾಸಕರುಗಳ ಕ್ಷೇತ್ರಕ್ಕೆ , ಮೂಲಭೂತ ಸೌಕರ್ಯ ಅಭಿವೃದ್ಧಿಗೆ ಹೆಚ್ಚಿನ ಅನುದಾನ ಒದಗಿಸಲು ಮನವಿ ಮಾಡಿದರು.ರಾಜ್ಯದ ಒಟ್ಟಾರೆ ಆಯವ್ಯಯಕ್ಕೆ ಬೆಂಗಳೂರು ನಗರದಿಂದಲೇ ಹೆಚ್ಚಿನ ಆದಾಯ ಬರುತ್ತಿರುವುದರಿಂದ ಬೆಂಗಳೂರು ಬಿಜೆಪಿ ಶಾಸಕರುಗಳ ಕ್ಷೇತ್ರಗಳನ್ನು ಗಮನದಲ್ಲಿರಿಸಿಕೊಂಡು ಹೆಚ್ಚಿನ ಅನುದಾನ ಒದಗಿಸಿ ಎಂದು ಕೋರಿಕೆ ಸಲ್ಲಿಸಿದರು.ರಸ್ತೆ, ಉದ್ಯಾನ ಸೇರಿದಂತೆ ಮೂಲಭೂತ ಸೌಕರ್ಯ ಅಭಿವೃದ್ಧಿಗೆ ಅನುದಾನ ಕೋರಿದರು. ಒಟ್ಟಾರೆ ಶಾಸಕರ ಕ್ಷೇತ್ರಾಭಿವೃದ್ಧಿ ಹಾಗೂ ಬೆಂಗಳೂರು ಅಭಿವೃದ್ಧಿಗೆ ಬಜೆಟ್ನಲ್ಲಿ 100ಕೋಟಿ ಅನುದಾನಕ್ಕೆ ಒತ್ತಾಯಿಸಿದರು.ಮೆಟ್ರೋ ದರ ಮತ್ತಷ್ಟು ಇಳಿಸುವ ಕೋರಿಕೆಗೆ ಮುಖ್ಯಮಂತ್ರಿಗಳು ಪ್ರತಿಕ್ರಿಯಿಸಿ, ಈಗಾಗಲೇ ಅವೈಜ್ಞಾನಿಕ ದರ ಏರಿಕೆಯನ್ನು ಹಿಂತೆಗೆದುಕೊಳ್ಳುವಂತೆ ಕೇಂದ್ರಕ್ಕೆ, ಮೆಟ್ರೋಗೆ ಪತ್ರ ಬರೆಯಲಾಗಿದೆ. ಸಾರ್ವಜನಿಕರಿಗೆ ಹೊರೆಯಾಗದಂತೆ ಮೆಟ್ರೋ ದರ ಇಳಿಸುವ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿ ನಿಯಮಾನುಸಾರ ಕ್ರಮ ಕೈಗೊಳ್ಳುವಂತೆ ಒತ್ತಾಯಿಸುವುದಾಗಿ ತಿಳಿಸಿದರು .ವಿಧಾನಸಭೆಯ ವಿರೋಧ ಪಕ್ಷದ ನಾಯಕರಾದ ಆರ್ ಅಶೋಕ್, ರಾಜ್ಯಾಧ್ಯಕ್ಷರಾದ ವಿಜಯೇಂದ್ರ ಸೇರಿದಂತೆ ನಿಯೋಗದಲ್ಲಿ ಬಿಜೆಪಿ ಪಕ್ಷದ ಶಾಸಕರು ಸಂಸದರು ಇದ್ದರು.

# ಮಹಿಳಾ ದಿನಾಚರಣೆ ಸಾಧನೆಯ ಸುಗಂಧ, ಪ್ರೇರಣೆಯ ಬೆಳಕು

## ಇಂದು ಮಹಿಳಾ ದಿನಾಚರಣೆ ಪ್ರಯುಕ್ತ ಎಲ್ಲಾ ಮಹಿಳೆಯರಿಗೆ ಶುಭಾಷಯಗಳು

ಪ್ರತಿಯೊಂದು ಮಹಿಳೆ ತನ್ನ ಜೀವನದಲ್ಲಿ ವಿವಿಧ ಹಂತಗಳನ್ನು ದಾಟುತ್ತಾ, ಆತ್ಮವಿಶ್ವಾಸ, ಪ್ರೇರಣೆ ಹಾಗೂ ಶಕ್ತಿ ಹೊಂದುವ ಪ್ರತಿರೂಪವಾಗಿರುತ್ತಾರೆ. ವಿಶ್ವ ಮಹಿಳಾ ದಿನವನ್ನು ಪ್ರತಿ ವರ್ಷ ಮಾರ್ಚ್ 8 ರಂದು ಆಚರಿಸಲಾಗುತ್ತದೆ, ಇದು ಮಹಿಳೆಯರ ಹಕ್ಕುಗಳು, ಸಾಧನೆಗಳು ಮತ್ತು ಅವರ ಜಗತ್ತಿನ ಮೇಲೆ ಬೀರಿದ ಪ್ರಭಾವವನ್ನು ಗೌರವಿಸುವ ಒಂದು ಅದ್ಭುತ ಅವಕಾಶ.



ಮಹಿಳೆಯರ ಬದುಕು ಕೇವಲ ಕುಟುಂಬದ ಕೇಂದ್ರದಲ್ಲಿಯೇ ಸೀಮಿತವಾಗಿಲ್ಲ; ಅವರು ಸಾಮಾಜಿಕ, ಶೈಕ್ಷಣಿಕ, ರಾಜಕೀಯ, ಆರ್ಥಿಕ ಮತ್ತು ವೈಜ್ಞಾನಿಕ ಕ್ಷೇತ್ರಗಳಲ್ಲೂ ಮಹತ್ತರ ಪಾತ್ರ ವಹಿಸುತ್ತಿದ್ದಾರೆ. ಅಮ್ಮನಾಗಿ, ಪತ್ನಿಯಾಗಿ, ಮಗುವಾಗಿ, ಸಂಸ್ಥಾಪಕಿಯಾಗಿ, ನಾಯಕಿಯಾಗಿ, ವೈಜ್ಞಾನಿಕರಾಗಿ, ಕ್ರೀಡಾಪಟುವಾಗಿ ಎಲ್ಲಾ ಪಾತ್ರಗಳಲ್ಲೂ ಮಹಿಳೆಯರು ತಮ್ಮ ಅದ್ಭುತ ಸಾಮರ್ಥ್ಯವನ್ನು ತೋರಿಸುತ್ತಿದ್ದಾರೆ. ಈಗ ಮಹಿಳೆಯರು ತಮ್ಮ ಇಚ್ಛಾಶಕ್ತಿಯೊಂದಿಗೆ ಮತ್ತು ಶಿಕ್ಷಣದ ಹಾದಿಯ ಮೂಲಕ ಜೀವನವನ್ನು ರೂಪಿಸಿಕೊಳ್ಳುತ್ತಿದ್ದಾರೆ. ಇಂದು ಕಲ್ಪನಾ ಚಾವ್ಲಾ, ಮೇರೀ ಕೋಮ್, ಸುಧಾ ಮೂರ್ತಿ, ಕಿರಣ್ ಮಜುಂದಾರ್ ಶಾ, ಫಾಲ್ಗುಣಿ ನಾಯರ್ ಮುಂತಾದ ಅನೇಕ ಮಹಿಳೆಯರು ತಮ್ಮ ಕ್ಷೇತ್ರಗಳಲ್ಲಿ ಅಪೂರ್ವ ಸಾಧನೆ ಮಾಡುತ್ತಿದ್ದಾರೆ.

ಮಹಿಳಾ ದಿನಾಚರಣೆ ?

ಇತಿಹಾಸ ಮತ್ತು ಹಿನ್ನೆಲೆ ಮಹಿಳಾ ದಿನಾಚರಣೆ (International Women's Day - IWD) ಪ್ರತಿ ವರ್ಷ ಮಾರ್ಚ್ 8 ರಂದು ಆಚರಿಸಲಾಗುತ್ತದೆ. ಇದು ಮಹಿಳೆಯರ ಹಕ್ಕುಗಳು, ಸಶಕ್ತೀಕರಣ, ಸಾಧನೆಗಳು ಮತ್ತು ಲಿಂಗ ಸಮಾನತೆಯ ಪ್ರಗತಿ ಕುರಿತು ಜಾಗೃತಿಯನ್ನು ಮೂಡಿಸುವ ಮಹತ್ವದ ದಿನ.

ಮಹಿಳಾ ದಿನಾಚರಣೆಯ ಇತಿಹಾಸ

ಮಹಿಳಾ ದಿನಾಚರಣೆಯ ಮೂಲವು 1900ರ ದಶಕದ ಪ್ರಾರಂಭದಲ್ಲಿ ಕೈಗೆತ್ತಿಕೊಳ್ಳಲಾದ ಮಹಿಳಾ ಹಕ್ಕುಗಳ ಹೋರಾಟಕ್ಕೆ ಸರಿಹೊಂದಿದೆ. ಈ ದಿನವನ್ನು ಆಚರಿಸಲು ಪ್ರೇರಣೆ ನೀಡಿದ ಪ್ರಮುಖ ಘಟನೆಗಳು ಹೀಗಿವೆ:

1. 1908 ಮಹಿಳಾ ಹಕ್ಕುಗಳ ಹೋರಾಟ: ಅಮೇರಿಕಾದ ನ್ಯೂಯಾರ್ಕ್ ನಗರದಲ್ಲಿ ಸಾವಿರಾರು ಮಹಿಳಾ ಕಾರ್ಮಿಕರು ಕಡಿಮೆ ಕೆಲಸದ ಘಂಟೆಗಳು, ಉತ್ತಮ ಸಂಬಳ ಮತ್ತು ಮತದಾನದ ಹಕ್ಕುಕ್ಕಾಗಿ ಪ್ರತಿಭಟನೆ ನಡೆಸಿದರು.
2. 1909 ಮೊದಲ ಮಹಿಳಾ ದಿನಾಚರಣೆ: ಫೆಬ್ರವರಿ 28, 1909 ರಂದು ಅಮೆರಿಕಾದ ಸೋಶಲಿಸ್ಟ್ ಪಾರ್ಟಿ ದೇಶದಾದ್ಯಂತ ಮಹಿಳಾ ದಿನವನ್ನು ಆಚರಿಸಿತು.
3. 1910 ಅಂತಾರಾಷ್ಟ್ರೀಯ ಹೋರಾಟ: ಡೆನ್ಮಾರ್ಕ್‌ನ ಕೊಪನ್‌ಹೇಗನ್ ನಲ್ಲಿ ನಡೆದ ಸೋಶಲಿಸ್ಟ್ ವುಮೆನ್ಸ್ ಕಾನ್ಫರೆನ್ಸ್ ನಲ್ಲಿ ಜರ್ಮನಿಯ ಕ್ಲಾರಾ ಜೆಟ್ಕಿನ್ ಅವರು ಪ್ರಪಂಚದಾದ್ಯಂತ ಮಹಿಳಾ ದಿನ ಆಚರಿಸುವ ಸಲಹೆ ನೀಡಿದರು.
4. 1911 ಪ್ರಥಮ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ: ಮೊದಲ ಬಾರಿ ಆಸ್ಟ್ರಿಯಾ, ಡೆನ್ಮಾರ್ಕ್, ಜರ್ಮನಿ ಮತ್ತು ಸ್ವಿಟ್ಜರ್ಲೆಂಡ್ ದೇಶಗಳಲ್ಲಿ ಮಹಿಳಾ ದಿನವನ್ನು ಮಾರ್ಚ್ 19ರಂದು ಆಚರಿಸಲಾಯಿತು.
5. 1913 ಮಾರ್ಚ್ 8ಕ್ಕೆ ದಿನಾಂಕ ಬದಲಾವಣೆ: 1913ರಿಂದ ಮಾರ್ಚ್ 8ನೇ ತಾರೀಖನ್ನು ಅಧಿಕೃತವಾಗಿ ಮಹಿಳಾ ದಿನಾಚರಣೆಗೆ ಮೀಸಲಾಗಿಸಲಾಯಿತು.
6. 1975 ವಿಶ್ವ ಮಹಿಳಾ ವರ್ಷ: ಓಔ1975ನೇ ವರ್ಷವನ್ನು "ಅಂತರಾಷ್ಟ್ರೀಯ ಮಹಿಳಾ ವರ್ಷ" ಎಂದು ಘೋಷಿಸಿ, ಮಹಿಳಾ ದಿನವನ್ನು ಅಧಿಕೃತವಾಗಿ ಅಂಗೀಕರಿಸಿತು
7. 2011 100ನೇ ವಾರ್ಷಿಕೋತ್ಸವ: 2011ರಲ್ಲಿ ಮಹಿಳಾ ದಿನಾಚರಣೆ ಶತಮಾನೋತ್ಸವವನ್ನು ಪೂರೈಸಿತು.

ಮಹಿಳಾ ದಿನಾಚರಣೆಯ ಉದ್ದೇಶ

ಮಹಿಳಾ ದಿನವನ್ನು ಆಚರಿಸುವ ಪ್ರಮುಖ ಉದ್ದೇಶಗಳು:

ಮಹಿಳಾ ಸಮಾನತೆ ಮತ್ತು ಹಕ್ಕುಗಳನ್ನು ಬಲಪಡಿಸುವುದು.

ಮಹಿಳೆಯರ ಸಾಧನೆಗಳನ್ನು ಗುರುತಿಸಿ, ಗೌರವ ನೀಡುವುದು.

ಅವರ ಸಮಸ್ಯೆಗಳನ್ನು ಅರಿತು, ಪರಿಹಾರ ಒದಗಿಸುವ ನಿಟ್ಟಿನಲ್ಲಿ ಕೆಲಸ ಮಾಡುವುದು.

? ಮಹಿಳಾ ಶಕ್ತಿ ಮತ್ತು ಸ್ವಾವಲಂಬನೆಯ ಕುರಿತು ಜಾಗೃತಿಯನ್ನು ಹರಡುವುದು.

ಮಹಿಳಾ ದಿನಾಚರಣೆ ಇಂದಿನ ಪ್ರಸ್ತುತತೆ

ಇಂದಿನ ಹೊತ್ತಿನಲ್ಲಿ, ಮಹಿಳೆಯರು ಶಿಕ್ಷಣ, ಉದ್ಯಮ, ರಾಜಕೀಯ, ಕ್ರೀಡೆ, ವಿಜ್ಞಾನ, ತಂತ್ರಜ್ಞಾನ, ಸೇವಾ ಕ್ಷೇತ್ರ ಮತ್ತು ಉದ್ಯಮಶೀಲತೆ ಎಲ್ಲೆಲ್ಲಿಯೂ ತಮ್ಮ ಸಾಮರ್ಥ್ಯವನ್ನು ತೋರಿಸುತ್ತಿದ್ದಾರೆ. ಮಹಿಳಾ ದಿನವು "Gender Equality ಲಿಂಗ ಸಮಾನತೆ", "ಃಡಿಜಚಿಞ ಣಜ ಃಚಿ ಲಿಂಗತಾತ್ವಿಕ ಭೇದಭಾವವನ್ನು ಕಳಚುವುದು", "DigitALL: Innovation and technology for gender equality" ಮುಂತಾದ ವಿಶೇಷ ಥೀಮ್‌ಗಳೊಂದಿಗೆ ಪ್ರತಿವರ್ಷ ಜಾಗೃತಿಯನ್ನು ಮೂಡಿಸುತ್ತದೆ.

ಮಹಿಳೆಯರು ಬದುಕಿನ ಉತ್ಸಾಹ ಮಹಿಳೆಯರು ತಮ್ಮ ಕುಟುಂಬ, ಸಮಾಜ ಮತ್ತು ದೇಶದ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತಾರೆ. ಅವರಲ್ಲಿರುವ ಹೃದಯಸ್ಪರ್ಶಿ ಭಾವನೆ, ತ್ಯಾಗ, ಶ್ರಮ ಹಾಗೂ ಪ್ರೀತಿ ಅವರ ಬದುಕಿನ ಹಾದಿಯನ್ನು ಮಾದರಿಯಾಗಿ ಮಾಡುತ್ತದೆ. ಶಿಕ್ಷಣ, ಉದ್ಯೋಗ, ರಾಜಕೀಯ, ಕಲೆ, ಕ್ರೀಡೆ, ವಿಜ್ಞಾನ ಹೀಗೆ ಎಲ್ಲಾ ಕ್ಷೇತ್ರಗಳಲ್ಲೂ ಮಹಿಳೆಯರು ತಮ್ಮ ಪ್ರತಿಭೆಯನ್ನು ತೋರಿಸುತ್ತಿದ್ದಾರೆ. ಅನೇಕ ಮಹಿಳೆಯರು ಸಂಕಷ್ಟಗಳನ್ನು ಎದುರಿಸುತ್ತಾ, ಸಾಧನೆಗೆ ಹೊಸ ಪರಿಮಾಣ ನೀಡಿದ ಉದಾಹರಣೆಗಳಿವೆ. ಐದು ದಶಕಗಳ ಹಿಂದೆಯೂ ಮಹಿಳೆಯರು ಮನೆಯಲ್ಲಿ ಸೀಮಿತವಾಗಿದ್ದರೆ, ಇಂದು ಅವರು ಅಂತರಿಕ್ಷ ಯಾತ್ರೆ, ವ್ಯವಹಾರ ನಿರ್ವಹಣೆ, ಕಾನೂನು, ತಂತ್ರಜ್ಞಾನ, ಆಡಳಿತ ಮತ್ತು ರಾಜಕೀಯದಲ್ಲಿ ವ್ಂಂಂ ಚ್ ೂ ಣ್ ಂ್ ಂ ಲ್ಲಿ ದ್ದಾ ರ್.

ಸಾಧನೆಗಳ ಬೆಳಕು

1. ಶಿಕ್ಷಣ ಮತ್ತು ಸಶಕ್ತೀಕರಣ: ಜಗತ್ತಿನ ಅನೇಕ ದೇಶಗಳಲ್ಲಿ ಈಗ ಮಹಿಳಿಯರಿಗೆ ಶಿಕ್ಷಣ ಹಕ್ಕುಗಳನ್ನು ಒದಗಿಸಲಾಗುತ್ತಿದೆ, ಇದರಿಂದ ಮಹಿಳೆಯರು ಸಮಾಜದ ಮುಖ್ಯಧಾರೆಯಲ್ಲಿರಲು ಸಾಧ್ಯವಾಗಿದೆ. ಭಾರತದಲ್ಲಿ ಸವಿತ್ರಿಬಾಯಿ ಫುಲೆ, ಇಂದಿರಾ ಗಾಂಧಿ, ಕಲ್ಪನಾ ಚಾವ್ಲಾ, ಮೇರೀ ಕೋಮ್ ಮುಂತಾದವರು ಮಹಿಳಾ ಶಿಕ್ಷಣ ಮತ್ತು ಸಶಕ್ತೀಕರಣದಲ್ಲಿ ಶ್ರೇಷ್ಠ ಸಾಧನೆ ಮಾಡಿದ್ದಾರೆ.
2. ಉದ್ಯೋಗ ಹಾಗೂ ಉದ್ಯಮಶೀಲತೆ: ಈಗ ಮಹಿಳೆಯರು ಉದ್ಯೋಗ ಮಾತ್ರವಲ್ಲದೆ, ಸ್ವಂತ ಉದ್ಯಮಗಳನ್ನು ನಿರ್ಮಿಸಿ ಉದ್ಯಮಶೀಲತೆ ತೋರಿಸುತ್ತಿದ್ದಾರೆ. ಫಾಲ್ಗುಣಿ ನಾಯರ್ (ನೈಕಾ), ಕಿರಣ್ ಮಜುಂದಾರ್ ಶಾ (ಬಯೋಕಾನ್), ವಂದನಾ ಲೂತರ (ಪೇಪರ್ ಶೈರಿ) ಮುಂತಾದವರು ಉದ್ಯಮ ವಲಯದಲ್ಲಿ ತಮ್ಮ ಅಚ್ಚಳಿಯದ ಗುರುತು ಮೂಡಿಸಿದ್ದಾರೆ.
3. ಕ್ರೀಡೆ ಮತ್ತು ಸಾಹಸ: ಕ್ರೀಡಾ ಕ್ಷೇತ್ರದಲ್ಲಿ ಮಹಿಳೆಯರು ಹೊಸ ದಾಖಲೆಗಳನ್ನು ನಿರ್ಮಿಸಿದ್ದಾರೆ. ಸೈನಾ ನೆಹ್ವಾಲ್, ಮೇರೀ ಕೋಮ್, ಪಿ.ವಿ. ಸಿಂಧು, ಮಿಥಾಲಿ ರಾಜ್ ಮುಂತಾದವರು ಅಂತರಾಷ್ಟ್ರೀಯ ಮಟ್ಟದಲ್ಲಿ ಭಾರತದ ಹೆಮ್ಮೆ ಹೆಚ್ಚಿಸಿದ್ದಾರೆ.
4. ಸಮಾಜಸೇವೆ ಮತ್ತು ಪ್ರಭಾವ: ಮಹಿಳೆಯರು ಕೇವಲ ತಮ್ಮ ವ್ಯಕ್ತಿಗತ ಜೀವನದಲ್ಲಷ್ಟೇ ಅಲ್ಲದೆ, ಸಮಾಜಸೇವೆಯಲ್ಲಿ ಕೂಡ ದೊಡ್ಡ ಕೊಡುಗೆ ನೀಡುತ್ತಿದ್ದಾರೆ. ಮದರ್ ತೆರೆಸಾ, ಸುಧಾ ಮೂರ್ತಿ ಮುಂತಾದವರು ತಮ್ಮ ಸಮಾಜಮುಖಿ ಕಾರ್ಯಗಳಿಂದ ಲಕ್ಷಾಂತರ ಜನರಿಗೆ ಪ್ರೇರಣೆ ನೀಡಿದ್ದಾರೆ.

ಸಮಾಜದ ಹೊಣೆಗಾರಿಕೆ

ಮಹಿಳಾ ಸಮಾನತೆ ಮತ್ತು ಗೌರವ ಮಹಿಳೆಯರನ್ನು ಗೌರವಿಸುವ, ಅವರ ಆತ್ಮವಿಶ್ವಾಸ ಹೆಚ್ಚಿಸುವ, ಅವರಿಗೆ ಸಮಾನ ಅವಕಾಶ ಒದಗಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ಮಹಿಳಾ ಸುರಕ್ಷತೆ, ಸಂವೇದನಾಶೀಲತೆ ಮತ್ತು ಗೌರವ ಹೊಂದಿದ ಸಮಾಜವನ್ನು ನಿರ್ಮಿಸುವುದು ಅನಿವಾರ್ಯ.

ನಮ್ಮ ಕರ್ತವ್ಯ ಮಹಿಳಾ ಶಕ್ತಿಗೆ ಸಾಥ್ ಈ ಮಹಿಳಾ ದಿನಾಚರಣೆ ದಿನದಂದು ನಾವು ನಮ್ಮ ಜೀವನದಲ್ಲಿ ಶಕ್ತಿ, ಪ್ರೇರಣೆ, ಪ್ರೀತಿಯ ಬೆಳಕು ತುಂಬುವ ಮಹಿಳೆಯರಿಗೆ ಕೃತಜ್ಞತೆ ಸಲ್ಲಿಸೋಣ. ಅವರ ಸಾಧನೆಗಳನ್ನು ಗೌರವಿಸೋಣ ಮತ್ತು ಹೊಸ ತಲೆಮಾರಿನ ಮಹಿಳೆಯರಿಗೆ ಇನ್ನಷ್ಟು ಉತ್ಸಾಹ, ಶಿಕ್ಷಣ ಮತ್ತು ಅವಕಾಶಗಳನ್ನು ಒದಗಿಸುವ ಮೂಲಕ ಅವರನ್ನು ಸಶಕ್ತಗೊಳಿಸೋಣ.

" ಮಹಿಳೆಯರ ಪ್ರಗತಿ ರಾಷ್ಟ್ರದ ಪ್ರಗತಿ!"

***ಡಾ. ವೆಂಕಟೇಶ ಬಾಬು ಎಸ್**
**ಸಹ ಪ್ರಾಧ್ಯಾಪಕರು ದಾವಣಗೆರೆ***

# ನಗರದ ವಿವಿಧೆಡೆಗೆ ನಗರ ಸಾರಿಗೆ ಸೌಲಭ್ಯ

**ದಾವಣಗೆರೆ:** ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರ ಸೂಚನೆಯಂತೆ ಮಾರ್ಚ್ 3 ರಿಂದ ಬೆಳಗ್ಗೆ 7 ರಿಂದ ಸಂಜೆ 4.30 ರವರೆಗೆ ನಗರ ವ್ಯಾಪ್ತಿಯ ರೈಲ್ವೆ ಸ್ಟೇಷನ್, ಗುಂಡಿ ಸರ್ಕಲ್, ಲಕ್ಷ್ಮೀ ಫ್ಲೋರ್ಮಿಲ್, ಶಾರದಾಮಂದಿರ, ಎಸ್.ಎಸ್.ಬಡಾವಣೆ, ಕುಂದವಾಡಕೆರೆ ಮುಖಾಂತರ ಬಾಲಾಜಿ ವೃತ್ತ, ಸಂಗೊಳ್ಳಿ ರಾಯಣ್ಣ ವೃತ್ತ, ಅಕ್ತರ್‌ರಜ್ಜಾ ವೃತ್ತದವರೆಗೆ ನಗರ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ ಎಂದು ದಾವಣಗೆರೆ ಕೆ.ಎಸ್.ಆರ್.ಟಿ.ಸಿ ವಿಭಾಗೀಯ ನಿಯಂತ್ರಣಾಧಿಕಾರಿ ಸಿದ್ದೇಶ್ವರ್ ಎನ್. ಹೆಬ್ಬಾಳ್ ತಿಳಿಸಿದ್ದಾರೆ.

# ಸಾರ್ವಜನಿಕರು, ಕೋಳಿ ಫಾರಂ ಹಾಗೂ ಕೋಳಿ ಅಥವಾ ಮೊಟ್ಟೆ ಮಾರಾಟಗಾರರಿಗೆ ರೋಗ ಹರಡದಂತೆ ಎಚ್ಚರವಹಿಸಿ

**ದಾವಣಗೆರೆ:** ಸಾರ್ವಜನಿಕರು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುವ ಅವೈಜ್ಞಾನಿಕ ಮಾಹಿತಿಗೆ ಕಿವಿಗೊಡಬೇಡಿ. ಕೋಳಿ ಮಾಂಸ ಮತ್ತು ಮೊಟ್ಟೆಯನ್ನು ಚೆನ್ನಾಗಿ ಬೇಯಿಸಿ ಸೇವಿಸುವುದರಿಂದ ಈ ರೋಗ ಬರುವುದಿಲ್ಲ, ಆದ್ದರಿಂದ ಸಾರ್ವಜನಿಕರು ಆತಂಕಪಡುವ ಅವಶ್ಯಕತೆ ಇಲ್ಲ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ತಿಳಿಸಿದ್ದಾರೆ.

ಕೋಳಿ ಫಾರಂ ಹಾಗೂ ಮಾಂಸದ ಕೋಳಿ ಅಥವಾ ಮೊಟ್ಟೆ ಕೋಳಿ ಫಾರಂ, ಹಾಗೂ ಅಂಗಡಿ ಸುತ್ತಮುತ್ತ ಕಚ್ಚಾವಸ್ತುಗಳನ್ನು ಇಟ್ಟುಕೊಳ್ಳದೇ ಸುತ್ತಮುತ್ತಲೂ ಸೋಂಕು ನಿವಾರಕಗಳೊಂದಿಗೆ ಸ್ವಚ್ಚವಾಗಿಟ್ಟುಕೊಳ್ಳಬೇಕು.

ತ್ಯಾಜ್ಯವನ್ನು ಆಗಿಂದಾಗ್ಗೆ ವೈಜ್ಞಾನಿಕವಾಗಿ ವಿಲೇವಾರಿ ಮಾಡುವುದರೊಂದಿಗೆ ಕೋಳಿ ಫಾರಂಗಳಲ್ಲಿ ಕೆಲಸ ಮಾಡುತ್ತಿರುವವರ ಆರೋಗ್ಯದ ಬಗ್ಗೆ ನಿಗಾವಹಿಸಿ, ಬಟ್ಟೆ, ಶೂ, ಕೈ ಕಾಲುಗಳಿಗೆ ನಂಜುನಾಶಕ ದ್ರಾವಣವನ್ನು ಕಡ್ಡಾಯವಾಗಿ ಬಳಸಬೇಕು. ಅಷ್ಟೇ ಅಲ್ಲದೇ ಫಾರಂಗಳಲ್ಲಿ ಕೆಲಸ ಮಾಡುವ ಕಾರ್ಮಿಕರು ಹಾಗೂ ಸಿಬ್ಬಂದಿಗಳು ಕಡ್ಡಾಯವಾಗಿ ಪಿಪಿಇ ಕಿಟ್‌ಗಳನ್ನು ಧರಿಸುವಂತೆ ಕ್ರಮವಹಿಸಬೇಕು. ಕೋಳಿ ಶೀತಜ್ವರ ಕಂಡುಬಂದ ಜಿಲ್ಲೆಗಳಿಂದ ಯಾವುದೆ ಕೋಳಿ, ಕೋಳಿ ಉತ್ಪನ್ನಗಳನ್ನು ಖರೀದಸಬಾರದು ಎಂದರು.

ಹಾಗೆಯೇ ಅಡಕೆ ಬೆಳೆಗಾರರು ಸದ್ಯಕ್ಕೆ ಬಳ್ಳಾರಿ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಿಂದ ಕೋಳಿ ಗೊಬ್ಬರವನ್ನು ಖರೀದಿಸಿ ಸಾಗಾಣೆ ಮಾಡಬಾರದು. ಕೋಳಿ ಫಾರಂ, ಇತರೆ ಪಕ್ಷಿಗಳು ಹಾಗೂ ಕೋಳಿ ಉತ್ಪನ್ನಗಳೊಂದಿಗೆ ಸಂಪರ್ಕದಲ್ಲಿರುವವರು ಮಾಸ್ಕ್ ಮತ್ತು ಗ್ಲೌಸ್‌ಗಳನ್ನು ಉಪಯೋಗಿಸಬೇಕು. ಆರೋಗ್ಯವಂತ ಕೋಳಿ, ಶಂಕಾಸ್ಪದವಾಗಿ ಮರಣ ಹೊಂದಿದ ಪಕ್ಷಿಗಳು ಗಮನಕ್ಕೆ ಬಂದ ತಕ್ಷಣ ಇಲಾಖೆಯ ಸಹಾಯವಾಣಿಗೆ ಮಾಹಿತಿ ನೀಡಬೇಕು ಎಂದು ಜಿಲ್ಲಾಧಿಕಾರಿಯವರು ತಿಳಿಸಿದ್ದಾರೆ.

# ಕೊಳಚೆ ಪ್ರದೇಶದ ಗ್ರಂಥಾಲಯ ಸ್ಥಳಾಂತರ

**ದಾವಣಗೆರೆ :** ಜಿಲ್ಲಾ ಕೇಂದ್ರ ಗ್ರಂಥಾಲಯ, ನಗರ ವ್ಯಾಪ್ತಿಯ 19 ನೇ ವಾರ್ಡ್‌ನ ಶೇಖರಪ್ಪ ನಗರದಲ್ಲಿ ಕೊಳಚೆ ಪ್ರದೇಶದ ಗ್ರಂಥಾಲಯವನ್ನು ಮಹಾನಗರಪಾಲಿಕೆ ವತಿಯಿಂದ 14 ನೇ ವಾರ್ಡ್‌ನ ಉದ್ಯಾನವದ ಆವರಣದ ಗ್ರಂಥಾಲಯಕ್ಕಾಗಿ ನಿರ್ಮಿಸಿರುವ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದೆ.

ಕೊಳಚೆ ಪ್ರದೇಶದ ಗ್ರಂಥಾಲಯವನ್ನು ತಾತ್ಕಾಲಿಕವಾಗಿ ವಾರ್ಡ್.ಸಂ 19 ರಿಂದ 14 ಕ್ಕೆ ಸ್ಥಳಾಂತರಿಸಲಾಗುವುದು. ಇದರ ಬಗ್ಗೆ ಸಾರ್ವಜನಿಕ ಓದುಗರು ಯಾವುದೇ ಆಕ್ಷೇಪಣೆಗಳು ಇದ್ದಲ್ಲಿ 7 ದಿನಗಳೊಳಗೆ ಮುಖ್ಯ ಗ್ರಂಥಾಲಯಾಧಿಕಾರಿ, ಜಿಲ್ಲಾ ಕೇಂದ್ರ ಗ್ರಂಥಾಲಯ, ಎಸ್.ನಿಜಲಿಂಗಪ್ಪ ಬಡಾವಣೆ ಕಚೇರಿಗೆ ನಿಖರ ವಿಳಾಸದೊಂದಿಗೆ ಲಿಖಿತವಾಗಿ ಆಕ್ಷೇಪಣೆ ಸಲ್ಲಿಸಬಹುದೆಂದು ಮುಖ್ಯ ಗ್ರಂಥಾಲಯಾಧಿಕಾರಿ ತಿಳಿಸಿದ್ದಾರೆ.

# ಕೋಳಿಶೀತಜ್ವರದಿಂದ ಕೋಳಿ, ಪಕ್ಷಿಗಳು ಮರಣಹೊಂದಿದಲ್ಲಿ ಸಹಾಯವಾಣಿಗೆ ಕರೆ ಮಾಡಿ

**ದಾವಣಗೆರೆ :** ರಾಜ್ಯದಲ್ಲಿ ಇತ್ತೀಚೆಗೆ ಕೋಳಿ ಶೀತ ಜ್ವರ ಕಾಣಿಸಿಕೊಂಡಿರುವ ಹಿನ್ನೆಲೆಯಲ್ಲಿ, ಈ ರೋಗವನ್ನು ತಡೆಗಟ್ಟುವ ಮತ್ತು ನಿಯಂತ್ರಿಸುವ ಸಲುವಾಗಿ ಸಾರ್ವಜನಿಕರು ಈ ರೋಗಕ್ಕೆ ಸಂಬಂಧಿಸಿದಂತೆ, ಯಾವುದೇ ಮಾಹಿತಿ ಕಂಡುಬಂದರೆ ಅಂದರೆ, ಶಂಕಾಸ್ಪದವಾಗಿ ಸತ್ತ ಹಿತ್ತಲ ಕೋಳಿಗಳು, ವನ್ಯ ಪಕ್ಷಿಗಳ ಮಾಹಿತಿಯನ್ನು ಕೂಡಲೇ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ದೂ.ಸಂಖ್ಯೆ 9916860163 ಗೆ ಕರೆಮಾಡಿ ಮಾಹಿತಿ ನೀಡುವಂತೆ ಇಲಾಖೆಯ ಉಪನಿರ್ದೇಶಕರಾದ ಡಾ; ಮಹೇಶ್ ತಿಳಿಸಿದ್ದಾರೆ.

# ಅಂತಿಮ ಆಯ್ಕೆ ಪ್ರಕಟ

**ದಾವಣಗೆರೆ :** ಗ್ರಾಮ ಪಂಚಾಯತಿ ಗ್ರಂಥಾಲಯಕ್ಕೆ ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಖಾಲಿ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳ ಅಂತಿಮ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗಿದೆ.

ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ಖಾಲಿ ಹುದ್ದೆಗಳಿಗೆ ಆಯ್ಕೆಯಾದ ಅರ್ಹ ಅಭ್ಯರ್ಥಿಗಳ ಅಂತಿಮ ಆಯ್ಕೆಪಟ್ಟಿಯನ್ನು davanagere.nic.in ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ ಎಂದು ಜಿ.ಪಂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಗ್ರಾ.ಪಂ ಗ್ರಂಥಾಲಯ ಮೇಲ್ವಿಚಾರಕರ ನೇಮಕಾತಿ ಸಮಿತಿ ಅಧ್ಯಕ್ಷರಾದ ಸುರೇಶ್.ಬಿ.ಇಟ್ನಾಳ್ ತಿಳಿಸಿದ್ದಾರೆ.

# ಅಂತರ್ಜಲ ನಿರ್ವಹಣೆ ತರಬೇತಿ ಕಾರ್ಯಾಗಾರ

**ಹಾಸನ :** ಜಾವಗಲ್‌ನ ರೈತ ಸಂಪರ್ಕ ಕೇಂದ್ರದಲ್ಲಿ ಅಟಲ್ ಭೂ ಜಲ ಯೋಜನೆಯಡಿ ರೈತರಿಗೆ ಅಂತರ್ಜಲ ನಿರ್ವಹಣೆ, ಜಲಭದ್ರತಾ ಯೋಜನೆ ಸಿದ್ದಪಡಿಸುವುದು, ನೀರಿನ ಬೇಡಿಕೆ ಕಡಿಮೆ ಮಾಡುವ ಸೂಕ್ಷ್ಮ ನೀರಾವರಿ ತಾಂತ್ರಿಕತೆಗಳ ಕುರಿತು ಒಂದು ದಿನದ ಕಾರ್ಯಕ್ರಮವನ್ನು ಕೃಷಿ ಇಲಾಖೆ, ಡಿ.ಎ.ಟಿ.ಸಿ ಹಾಗೂ ಜಿಲ್ಲಾ ಕಾರ್ಯಕ್ರಮ ನಿರ್ವಹಣಾ ಘಟಕ, ಅಟಲ್ ಭೂ ಜಲ ಯೋಜನೆ,

ಹಾಸನ ಇವರ ಸಹಭಾಗಿತ್ವದಲ್ಲಿ ಆಯೋಜಿಸಲಾಗಿತ್ತು.ತರಬೇತಿ ಕಾರ್ಯಕ್ರಮವನ್ನು ಸಾಮಾಜಿಕ ಅಭಿವೃದ್ಧಿತಜ್ಞರಾದ ಪ್ರವೀಣ್, ಸಹಾಯಕ ಕೃಷಿ ನಿರ್ದೇಶಕರಾದ ಪ್ರಸನ್ನ, ಜಿಲ್ಲಾ ನೋಡಲ್ ಅಧಿಕಾರಿಗಳಾದ ಸುಂದರರಾಜು,

ನೆಟಾಫಿಮ್ ಕಂಪನಿಯ ಬೇಸಾಯ ತಜ್ಞರಾದ ಅಂಜಿನಪ್ಪ ಹಾಗೂ ರೈತರು ಸೇರಿ ಉದ್ಘಾಟಿಸಿದರು. ರಾಜ್ಯ ಕಾರ್ಯಕ್ರಮ ನಿರ್ವಹಣಾ ಘಟಕದಿಂದ ಆಗಮಿಸಿದ ಪ್ರವೀಣ್‌ರವರು ಅಟಲ್ ಭೂ ಜಲ ಯೋಜನೆಯ ಮಹತ್ವ, ಧ್ಯೇಯೋದ್ದೇಶಗಳು ಹಾಗೂ ಜಲ ಭದ್ರತಾ ಯೋಜನೆ ತಯಾರಿಸುವ ಬಗ್ಗೆ ಮಾಹಿತಿ ನೀಡಿದರು. ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಅಂಜಿನಪ್ಪರವರು ಹನಿ ನೀರಾವರಿ ಮತ್ತು ಸೂಕ್ಷ್ಮ ನೀರಾವರಿ ಪದ್ದತಿಗಳ ಬಗ್ಗೆ ವೈಜ್ಞಾನಿಕವಾಗಿ ಮಾಹಿತಿ ನೀಡಿದರು.

# ಹಕ್ಕಿಜ್ವರ ಬಾರದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಿರಿ

**ಶಿವಮೊಗ್ಗ :** ಜಿಲ್ಲೆಯಲ್ಲಿ ಈವರೆಗೆ ಯಾವುದೇ ಹಕ್ಕಿಜ್ವರ ಪ್ರಕರಣ ವರದಿಯಾಗಿಲ್ಲ. ಆದರೂ ಸಾರ್ವಜನಿಕರು ಹಕ್ಕಿಜ್ವರ ಬಾರದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸಬೇಕು. ಹಾಗೂ ಜ್ವರ, ಉಸಿರಾಟದ ತೊಂದರೆ ಇತರೆ ಲಕ್ಷಣಗಳು ಕಂಡು ಬಂದಲ್ಲಿ ಕೂಡಲೇ ಚಿಕಿತ್ಸೆ ಪಡೆಯಬೇಕೆಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ತಿಳಿಸಿದರು.



ಜಿಲ್ಲಾಡಳಿತ ಕಚೇರಿಯಲ್ಲಿ ಗುರುವಾರ ಏರ್ಪಡಿಸಲಾಗಿದ್ದ ಹೆಚ್5ಎನ್1(ಹಕ್ಕಿಜ್ವರ) ಹಾಗೂ ಇತರೆ ಸಾಂಕ್ರಾಮಿಕ ರೋಗ ತಡೆಗಟ್ಟಲು ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಕ್ಕಿಜ್ವರ ಅಥವಾ ಕೋಳಿ ಶೀತ ಜ್ವರ ಹೆಚ್5ಎನ್1 ವೈರಸ್ನಿಂದ ಹರಡುವ ರೋಗ. ಇದು ಟರ್ಕಿ, ಗಿನಿ ಕೋಳಿ, ಬಾತು ಕೋಳಿ, ಗೀಜಗ ಮುಂತಾದ ಹಕ್ಕಿಗಳಲ್ಲಿ ಕಾಣಿಸಿಕೊಳ್ಳುವ ಖಾಯಿಲೆ. ಇದೊಂದು ಸಾಂಕ್ರಾಮಿಕ ರೋಗವಾಗಿದ್ದು ಸಾಮಾನ್ಯವಾಗಿ ಹಕ್ಕಿಗಳಿಂದ ಹಕ್ಕಿಗಳಿಗೆ ಹರಡುತ್ತದೆ. ಕೆಲವೊಮ್ಮೆ ರೋಗಪೀಡಿತ ಹಕ್ಕಿಗಳ ಸಂಪರ್ಕದಿಂದ ಮನುಷ್ಯರಲ್ಲೂ ಈ ಜ್ವರದ ಲಕ್ಷಣಗಳು ಕಾಣಿಸಿಕೊಳ್ಳುವ ಸಾಧ್ಯತೆ ಇರುತ್ತದೆ ಎಂದರು.

ಜಿಲ್ಲೆಯಲ್ಲಿ ಈವರೆಗೆ ಹಕ್ಕಿಜ್ವರ ಪ್ರಕರಣ ಕಂಡು ಬಂದಿಲ್ಲ. ಆದರೂ ಹಕ್ಕಿಜ್ವರ ಕುರಿತು ಮುಂಜಾಗೃತಿ ವಹಿಸಬೇಕು. ಸಾಮಾನ್ಯವಾಗಿ ಹಕ್ಕಿಜ್ವರ ಹೆಚ್1ಎನ್1 ಜ್ವರದ ಲಕ್ಷಣಗಳಂತೆಯೇ ಇರುತ್ತದೆ. ಜ್ವರ ಮತ್ತು ಕೆಮ್ಮು, ಶೀತ, ತಲೆನೋವು, ಗಂಟಲು ಕೆರೆತ, ನೆಗಡಿ, ಸ್ನಾಯುಗಳಲ್ಲಿ ನೋವು, ಆಯಾಸ ಕಾಣಿಸಿಕೊಳ್ಳುತ್ತದೆ. ಕೆಲವೊಮ್ಮೆ ವಾಂತಿ ಬೇಧಿಯೂ ಆಗಬಹುದು. ಹಾಗೂ ಮುಖ್ಯವಾಗಿ ಉಸಿರಾಟದ ತೊಂದರೆ ಕಾಣಿಸಿಕೊಳ್ಳುತ್ತದೆ.

ಈ ಲಕ್ಷಣಗಳು ಕಂಡು ಬಂದ ತಕ್ಷಣ ಸರ್ಕಾರಿ ಆಸ್ಪತ್ರೆಗಳು ಅಥವಾ ಸಮೀಪದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಬೇಕು. ಮುನ್ನೆಚ್ಚರಿಕೆ ಕ್ರಮವಾಗಿ ಶಂಕಿತ ಹಕ್ಕಿಜ್ವರ ಪೀಡಿತ ಕೋಳಿಗಳು, ಹಕ್ಕಿಗಳು, ಬಾತುಕೋಳಿಗಳ ಸಂಪರ್ಕಕ್ಕೆ ಬಾರದಂತೆ ಎಚ್ಚರಿಕೆ ವಹಿಸಬೇಕು. ಶಂಕಿತ ಹಕ್ಕಿಜ್ವರ ಪೀಡಿತ ಫಾರಂ ಗಳಿಗೆ ಭೇಟಿ ನೀಡಬಾರದು. ಒಂದು ವೇಳೆ ಸಂಪರ್ಕಕೆ ಬಂದಲ್ಲಿ ತಮ್ಮ ಕೈಕಾಲು ಮತ್ತು ಮುಖವನ್ನು ಚೆನ್ನಾಗಿ ತೊಳೆದುಕೊಂಡು ಬಟ್ಟೆ ಬದಲಾಯಿಸಬೇಕು. ಮುಂದಿನ ನಾಲ್ಕು ದಿನಗಳವರೆಗೆ ದೇಹದ ಉಷ್ಣಾಂಶದಲ್ಲಾಗುವ ಬದಲಾವಣೆಯನ್ನು ಗಮನಿಸಬೇಕು. ಒಂದು ವೇಳೆ ಜ್ವರ ಲಕ್ಷಣಗಳು ಕಂಡು ಬಂದಲ್ಲಿ ತಕ್ಷಣ ವೈದ್ಯರನ್ನು ಸಂಪರ್ಕಿಸಬೇಕು.

ಜಿಲ್ಲೆಯಲ್ಲಿನ ಪಕ್ಷಿಧಾಮಗಳು ಮತ್ತು ಪೌಲ್ಟ್ರಿಗಳಲ್ಲಿ ನಿಯಮಿತವಾಗಿ ಪಕ್ಷಿಗಳ ಕಡೆ ನಿಗಾ ವಹಿಸಿ, ಅಗತ್ಯ ಮುಂಜಾಗೃತಾ ಕ್ರಮಗಳನ್ನು ಕೈಗೊಳ್ಳಬೇಕು. ಪಶುಪಾಲನಾ ಇಲಾಖೆಯ ವೈದ್ಯರು ಪಕ್ಷಿಧಾಮ ಮತ್ತು ಪೌಲ್ಟ್ರಿಗಳಿಗೆ ಭೇಟಿ ನೀಡಿ ತಪಾಸಣೆ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು. ಹಾಗೂ ಗ್ರಾಮ ಪಂಚಾಯ್ತಿ ಮಟ್ಟದಲ್ಲೂ ಐಇಸಿ ಮೂಲಕ ಜಾಗೃತಿ ಮೂಡಿಸಿ, ಪಿಡಿಓ ಗಳು ಕೋಳಿ ಜ್ವರದ ಕುರಿತು ಜನರಲ್ಲಿ ಅರಿವು ಮೂಡಿಸಬೇಕು ಎಂದರು.

ಕೋಳಿ ಮಾಂಸ ಸೇವನೆಯಿಂದ ಹಕ್ಕಿ ಜ್ವರ ಬರುವುದಿಲ್ಲ :

ಕೋಳಿ ಮಾಂಸ ಅಥವಾ ಮೊಟ್ಟೆಗಳನ್ನು ಸೇವಿಸುವುದರಿಂದ ಹಕ್ಕಿ ಜ್ವರ ಮನುಷ್ಯರಲ್ಲಿ ಬರುವುದಿಲ್ಲ. ಆದರೆ ಸೋಂಕು ತಗುಲಿದ ಕೋಳಿಯ ಮಾಂಸವನ್ನು ಚೆನ್ನಾಗಿ ಬೇಯಿಸದೇ ಹಾಗೂ ಅವುಗಳ ಹಸಿ ಮೊಟ್ಟೆಯ ಸೇವನೆಯಿಂದ ರೋಗ ತಗಲುವ ಸಾಧ್ಯತೆಗಳಿರುತ್ತವೆ.

ಕೋಳಿ ಮಾಂಸ ಮತ್ತು ಮೊಟ್ಟೆಯನ್ನು 70 ಡಿಗ್ರಿ ಸೆಂಟಿಗ್ರೇಡ್ಗೂ ಅಧಿಕ ಉಷ್ಣಾಂಶದಲ್ಲಿ ಬೇಯಿಸಿದ ನಂತರವೇ ಸೇವಿಸಬೇಕು. ಅಡುಗೆಗಾಗಿ ಕೋಳಿ ಮಾಂಸ ಸಿದ್ದಪಡಿಸಿದ ನಂತರ ಕೈಗಳನ್ನು ನಂಜುನಾಶಕದಿಂದ ಸ್ವಚ್ಛವಾಗಿ ತೊಳೆದುಕೊಳ್ಳಬೇಕು. ಸೋಂಕಿತ ಹಸಿ ಮೊಟ್ಟೆಯನ್ನು ಸೇವಿಸಬಾರದು ಎಂದು ಅವರು ತಿಳಿಸಿದರು. ಡಿಎಸ್‌ಓ ಡಾ.ನಾಗರಾಜ ನಾಯ್ಕ ಮಾತನಾಡಿ, ರೋಗ ಪೀಡಿತ ಕೋಳಿ ಅಥವಾ ಹಕ್ಕಿಗಳ ಮಾಂಸವನ್ನು ಹಾಗೂ ಮೊಟ್ಟೆಯನ್ನು ಸರಿಯಾಗಿ ಬೇಯಿಸದೇ ತಿನ್ನುವುದರಿಂದ, ಸೋಂಕಿರುವ ಹಸಿ ಮೊಟ್ಟೆಗಳನ್ನು ಸೇವಿಸುವುದರಿಂದ ಹಾಗೂ ಕೋಳಿಗಳ ಹಿಕ್ಕೆಗಳು ಮನುಷ್ಯರು ಕುಡಿಯುವ ನೀರಿನೊಂದಿಗೆ ಬೆರೆತು ಕಲುಷಿತಗೊಂಡಾಗ ಈ ಖಾಯಿಲೆ ಹರಡುತ್ತದೆ ಮತ್ತು ಕೆಲವು ಸಂದರ್ಭದಲ್ಲಿ ಗಾಳಿಯ ಮೂಲಕವೂ ಮನುಷ್ಯರಿಗೆ ಹರಡುತ್ತದೆ. ಹಕ್ಕಿಜ್ವರ ಮುನ್ನೆಚ್ಚರಿಕೆಯಿಂದ ತಡೆಯಬಲ್ಲ ಖಾಯಿಲೆ. ಆದ್ದರಿಂದ ಖಾಯಿಲೆ ಲಕ್ಷಣಗಳು ಕೋಳಿಗಳಲ್ಲಿ ಕಾಣಿಸಿಕೊಂಡ ಕೂಡಲೇ ಹತ್ತಿರದ ಮಾಹಿತಿ ಕೇಂದ್ರ ಅಥವಾ ಪಶು ವೈದ್ಯಕೀಯ ಸಂಸ್ಥೆಗೆ ಮಾಹಿತಿಯನ್ನು ನೀಡಬೇಕು. ಜಿಲ್ಲೆಯಲ್ಲಿ 332 ಪೌಲ್ಟ್ರಿ ಮತ್ತು 2 ಪಕ್ಷಿಧಾಮಗಳಿದ್ದು ಅಲ್ಲಿ ಮುಂಜಾಗೃತೆ ಕ್ರಮಗಳನ್ನು ಕೈಗೊಳ್ಳಲು ಹಾಗೂ ಚಲನವಲನ ವೀಕ್ಷಿಸಲು ತಿಳಿಸಲಾಗಿದೆ. 65 ವರ್ಷ ದಾಟಿದ ಹಿರಿಯರು, ಗರ್ಭಿಣಿಯರು, 2 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಇತರೆ ಕೋಮಾರ್ಬಿಡಿಟಿ ಉಳ್ಳ ವ್ಯಕ್ತಿಗಳು ಆದಷ್ಟು ಎಚ್ಚರಿಕೆಯಿಂದ ಇರಬೇಕು. ಜಿಲ್ಲೆಯಲ್ಲಿ ಕೋಳಿಜ್ವರಕ್ಕೆ ಚಿಕಿತ್ಸೆ ನೀಡಲು ಅಗತ್ಯವಾದ ಔಷಧಿಗಳು ಲಭ್ಯವಿದೆ ಎಂದು ತಿಳಿಸಿದರು. ಜಿಲ್ಲಾಧಿಕಾರಿಗಳು, ಜಿಲ್ಲೆಯಲ್ಲಿ ಕೆಎಫ್ಡಿ ನಿಯಂತ್ರಣ ಚಟುವಟಿಕೆಗಳನ್ನು ಸಕ್ರಿಯವಾಗಿ ತೆಗೆದುಕೊಳ್ಳಬೇಕು. ಡೇಪಾ ಆಯಿಲ್ನ್ನು ನಿಯಮಿತವಾಗಿ ಮಲೆನಾಡ ಭಾಗದ ಸಾರ್ವಜನಿಕರಿಗೆ ನೀಡಬೇಕು. ಜನರಲ್ಲಿ ಕೆಎಫ್ಡಿ ಕುರಿತು ಎಚ್ಚರಿಕೆ ನೀಡಿ ಜಾಗೃತಿ ಮೂಡಿಸಬೇಕು. ಪ್ರಸ್ತುತ 6 ಸಕ್ರಿಯ ಪ್ರಕರಣಗಳಿದ್ದು, ನಿಗಾ ವಹಿಸಿ ಚಿಕಿತ್ಸೆ ನೀಡಬೇಕು. ಜಿಲ್ಲೆಯಲ್ಲಿ ನಾಯಿ ಕಡಿತ, ಹಾವು ಕಡಿತಕ್ಕೆ ಅಗತ್ಯವಾದ ಔಷಧಿಗಳನ್ನು ಎಲ್ಲ ಆಸ್ಪತ್ರೆಗಳಲ್ಲಿ ಲಭ್ಯವಿರುವಂತೆ ನೋಡಿಕೊಳ್ಳಬೇಕು. ಹಾಗೂ ಬೀದಿ ನಾಯಿ ಹಾವಳಿ ನಿಯಂತ್ರಿಸಲು ಪಾಲಿಕೆಯೊಂದಿಗೆ ವಿಶೇಷ ಅಭಿಯಾನ ಕೈಗೊಳ್ಳುವಂತೆ ತಿಳಿಸಿದರು.


ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿಇಓ ಹೇಮಂತ್ ಎನ್, ಡಿಹೆಚ್‌ಓ ಡಾ.ನಟರಾಜ್, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಗುಡದಪ್ಪ ಕಸಬಿ ಆರ್‌ಸಿಹೆಚ್ ಅಧಿಕಾರಿ ಡಾ.ಮಲ್ಲಪ್ಪ, ಸಿಮ್ಸ್ ನಿರ್ದೇಶಕ ಡಾ.ವಿರೂಪಾಕ್ಷಪ್ಪ, ಮೆಗ್ಗಾನ್ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ.ತಿಮ್ಮಪ್ಪ, ವಿವಿಧ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳು, ಟಿಹೆಚ್‌ಓ ಗಳು ಹಾಜರಿದ್ದರು.

# ಶ್ರೀ ಕ್ಷೇತ್ರ ಶ್ರೀಆದಿಚುಂಚನಗಿರಿಯಲ್ಲಿ ಜಾತ್ರಾ ಮಹೋತ್ಸವ

**ಶಿವಮೊಗ್ಗ :** ಮಾರ್ಚ್7 ರಿಂದ ಮಾರ್ಚ್ 15 ರ ವರೆಗೆ ಮಹಾಸಂಸ್ಥಾನ ಮಠದಲ್ಲಿ ಭಕ್ತಿ, ಜ್ಞಾನ, ಆಧ್ಯಾತ್ಮಿಕ ,ಸಾಮೂಹಿಕ ವಿವಾಹ, ಕೃಷಿ ಜಾಗೃತಿ, ಶ್ರೀ ಗಂಗಾಧರೇಶ್ವರ ಸ್ವಾಮಿ ರಥೋತ್ಸವ ಮತ್ತು ವಿಚಾರಗೋಷ್ಠಿಗಳ ಕಲರವ.

ಸುಮಾರು 2000 ವರ್ಷಗಳ ಪ್ರಾಚೀನ ಗುರು ಪರಂಪರೆಯನ್ನು ಹೊಂದಿರುವ ಶ್ರೀಕ್ಷೇತ್ರವು ಮಯೂರ ಗಳ ತಾಣವಾಗಿದ್ದು, "ಮಯೂರ ವನ "ಎಂದು ಕರೆಯುವರು.ಪುರಾಣದಲ್ಲಿ ಉಲ್ಲೇಖವಿರುವಂತೆ ಶ್ರೀ ಆದಿಚುಂಚನಗಿರಿ ಪೀಠವು ಸ್ಥಾಪನೆಯಾದುದು ತ್ರೇತ್ರಾಯುಗದಲ್ಲಿ ಪರಮೇಶ್ವರನೇ ಈ ಪೀಠದ ಸ್ಥಾಪಕನು. ಇಲ್ಲಿ ಸಾಕ್ಷಾತ್ ಪರಶಿವನೇ ಶ್ರೀ ಗಂಗಾಧರೇಶ್ವರನಾಗಿ ನೆಲೆ ನಿಂತಿದ್ದಾನೆ. ನಾಥ ಸಂಪ್ರದಾಯದ ದ್ವಾದಶ ಪೀಟಗಳಲ್ಲಿ ಆದಿ ಪೀಠವೇ ಶ್ರೀ ಆದಿಚುಂಚನಗಿರಿ ಪೀಠ. ಶ್ರೀ ಮಠದ ಗುರುಪರಂಪರೆಯು ದೀರ್ಘವಾದುದು,ಇದುವರೆಗೂ 72 ಧರ್ಮಗುರುಗಳು ಮಠಾಧಿಪತಿಗಳಾಗಿದ್ದಾರೆ. 71ನೇ ಪೀಠಾಧ್ಯಕ್ಷರಾದ ಪದ್ಮಭೂಷಣ ಶ್ರೀ ಶ್ರೀ ಶ್ರೀ ಡಾ. ಬಾಲಗಂಗಾಧರನಾಥ ಸ್ವಾಮಿಗಳಿಂದಾಗಿ ಸಾಮಾಜಿಕ,ಶೈಕ್ಷಣಿಕ, ಧಾರ್ಮಿಕ, ಸಾಂಸ್ಕೃತಿಕ ಅಲ್ಲದೆ ಮಕ್ಕಳ ವಸತಿ ಶಾಲೆ, ಅನಾಥಾಶ್ರಮ, ವೃದ್ಧಾಶ್ರಮ, ಮಹಿಳಾ ಸೇವಾಶ್ರಮಗಳನ್ನು ಸ್ಥಾಪಿಸಿ, ನಿರ್ಗತಿಕರ ಬಗ್ಗೆ ವಿಶೇಷ ಮಮತೆಯನ್ನು ತೋರಿದ್ದಾರೆ.

ಜಾತ್ರೆ ಎಂದೊಡನೆ ಕಣ್ಮುಂದೆ ಬರುವುದು ಹೋಮ–ಹವನ,ಮೆರವಣಿಗೆ ರಥೋತ್ಸವ



ಅನ್ನದಾಸೋಹ ಇತ್ಯಾದಿ ಧಾರ್ಮಿಕ ವಿಧಿ – ವಿಧಾನಗಳೊಂದಿಗೆ ಆದಿಚುಂನಗಿರಿ ಜಾತ್ರೆಯೂ ಮೇಲಿನ ಅಂಶಗಳೊಂದಿಗೆ ವೈಚಾರಿಕತೆ,ಕೃಷಿ ಜಾಗೃತಿ ಮಹತ್ವವನ್ನು ಸಾರುತ್ತಾ ಸಮಾಜ ಮುಖಿಯಾಗಿದೆ. ಇಲ್ಲಿ ಧಾರ್ಮಿಕ ವಿಧಿ ವಿಧಾನಗಳ ಜೊತೆಗೆ ನಾಡಿನ ಜನರಿಗೆ ವೈಚಾರಿಕತೆ ಮೂಡಿಸುವ ಗೋಷ್ಠಿ, ಕೃಷಿ ಮೇಳ, ಸರಳವಿವಾಹ,ಪೌರಾಣಿಕ ನಾಟಕಗಳ ಮಹತ್ವ, ಜ್ಞಾನ–ವಿಜ್ಞಾನ ನಡುವಿನ ಸಂಬಂಧವನ್ನು ತಿಳಿಸುತ್ತದೆ.

ಜಾತ್ರೆಗೆ ಹೊಸ ಭಾಷ್ಯವನ್ನು ಬರೆಯುವ ಮೂಲಕ ಜನಪರ ಜಾತ್ರೆಯನ್ನಾಗಿಸುವ ನಿಟ್ಟಿನಲ್ಲಿ ಪೀಠಾಧಿಪತಿಗಳಾದ ಶ್ರೀ ಶ್ರೀ ಶ್ರೀ ಡಾ. ನಿರ್ಮಲಾನಂದನಾಥ ಸ್ವಾಮೀಜಿ ಅವರು ದಿಟ್ಟ ಹೆಜ್ಜೆ ಇಟ್ಟಿದ್ದಾರೆ.ನಾಡಿನ ಪ್ರಮುಖ ಜಾತ್ರೆಗಳಲ್ಲಿ ಒಂದಾಗಿರುವ ಆದಿಚುಂಚನಗಿರಿ ಜಾತ್ರೆಗೆ ವೈಶಿಷ್ಟ ತಂದು ಕೊಡುವರು. ರೈತ ಸಮುದಾಯ,ಇದು ರೈತರ ಜಾತ್ರೆಯೆಂದು ಕರೆಯಿಸಿಕೊಳ್ಳುತ್ತದೆ. ಆದ್ದರಿಂದಲೇ ಆದಿಚುಂಚನಗಿರಿ ಕ್ಷೇತ್ರದಲ್ಲಿ ಪ್ರತಿ ವರ್ಷವೂ ಜಾತ್ರಾಮಹೋತ್ಸವವನ್ನು ರೈತರ ಹೆಸರಿನಲ್ಲಿ ಭೈರವೈಕ್ಯಬಾಲಗಂಗಾಧರನಾಥ ಸ್ವಾಮೀಜಿ ನಡೆಸುತ್ತಿದ್ದರು. ಅದನ್ನ ಈಗಿನ ಸ್ವಾಮೀಜಿಯವರು ಮುಂದುವರಿಸುವ ಮೂಲಕ ಜಾತ್ರೆಯ ಸೊಬಗನ್ನು ಹೆಚ್ಚಿಸಿದ್ದಾರೆ.

ಇಂದಿಗೂ ಪೂಜ್ಯ ಸ್ವಾಮಿಗಳವರ ಅನುಪಸ್ಥಿತಿಯಲ್ಲಿ ಆ ಎಲ್ಲಾ ಸೇವಾ ಕಾರ್ಯಗಳು ಮುಂದುವರಿಯುತ್ತಿವೆ.ಸ್ವಾಮೀಜಿಯವರು ಇಲ್ಲದಿರಬಹುದು, ಆದರೆ ಶ್ರೀಕ್ಷೇತ್ರದಲ್ಲಿ ಹಮ್ಮಿಕೊಳ್ಳುವ ಪ್ರತಿಯೊಂದು ಕಾರ್ಯದ ಯಶಸ್ಸಿನ ಹಿಂದೆ ಸ್ವಾಮಿಗಳವರ ಉಪಸ್ಥಿತಿಯನ್ನು ಇಂದಿಗೂ ಕಾಣಬಹುದು.

**ಒಂಭತ್ತು ದಿನಗಳ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಜಾತ್ರಾ ಮಹೋತ್ಸವ ಕಾರ್ಯಕ್ರಮದಲ್ಲಿ ಧರ್ಮ, ಪೂಜೆ, ಸಾಹಿತ್ಯ, ಸಂಸ್ಕೃತಿ, ದೈವಭಕ್ತಿ ಆಚರಣೆಗಳು, ಕೃಷಿ ಮತ್ತು ಕೈಗಾರಿಕಾ ಬದುಕಿನ ಅನಾವರಣ, ಗೋಮಾತೆಯ ಪರಿಚಯ, ದ್ದೇಶೀಯ ಕ್ರೀಡೆಗಳು, ನಾಟಕ, ಯಕ್ಷಗಾನ, ವಿಶೇಷವಾಗಿ ಸಂಗೀತ, ಸಾಹಿತ್ಯ ಸೇರಿದಂತಹ ಭಿನ್ನ, ವಿಭಿನ್ನ ಬಗೆಯ ಜಾತ್ರಾ ಮಹೋತ್ಸವದಲ್ಲಿ ಸರ್ವಧರ್ಮಗಳನ್ನು ರಕ್ಷಿಸುವ, ಪೂಜಿಸುವ, ಆರಾಧಿಸುವ ಕಾರ್ಯಕ್ರಮಗಳನ್ನು, ನಿರಂತರವಾಗಿ ಶ್ರೀಕ್ಷೇತ್ರ ನಡೆಸುತ್ತಲೇ ಬಂದಿದೆ ಎಂದು ಶ್ರೀಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪ್ರಧಾನ ಕಾರ್ಯದರ್ಶಿಗಳಾದ ––– ಪೂಜ್ಯ ಶ್ರೀ ಪ್ರಸನ್ನನಾಥಸ್ವಾಮೀಜಿ ತಿಳಿಸಿದ್ದಾರೆ.**

# ಆಸ್ತಿ ಮಾಲೀಕರ ಗಮನಕ್ಕೆ

**ಗದಗ :** ರೋಣ ಪುರಸಭೆ ವ್ಯಾಪ್ತಿಯಲ್ಲಿ ಅಧಿಕೃತ, ಅನಧಿಕೃತ ಕಟ್ಟಡಗಳ ಹಾಗೂ ನಿವೇಶನಗಳಿಗೆ ಎ ಖಾತೆ ಮತ್ತು ಬಿ ಖಾತೆ ನೀಡುವ ಕುರಿತು ಮೇ 10 ರವರೆಗೆ ಇ ? ಖಾತಾ ಆಂದೋಲನ ಹಮ್ಮಿಕೊಂಡಿದೆ. ಪಟ್ಟಣದಲ್ಲಿನ ಆಸ್ತಿ ಮಾಲೀಕರು ತಮ್ಮ ಕಟ್ಟಡ– ನಿವೇಶನಗಳಿಗೆ ಸಂಬಂಧಿಸಿದ ದಾಖಲಾತಿ ಪತ್ರಗಳನ್ನು ಕಚೇರಿಗೆ ಸಲ್ಲಿಸಿ ನಮೂನೆ–3 ಮತ್ತು ನಮೂನೆ 3ಎ ಇ–ಖಾತಾ ನಮೂನೆಯನ್ನು ಪಡೆಯಬಹುದಾಗಿದೆ ಎಂದು ರೋಣ ಪುರಸಭೆ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ. ಎ ರಿಜಿಸ್ಟರ್ ನಲ್ಲಿ ದಾಖಲಿಸಿ ಆಸ್ತಿ ಇ–ಖಾತಾ ( ನಮೂನೆ–3 ) ಪಡೆಯಲು ಸಲ್ಲಿಸಬೇಕಾದ ದಾಖಲೆಗಳು ಆಸ್ತಿ ಸಂಬಂಧಿಸಿದಂತೆ ಸ್ವತ್ತಿನ ಮಾಲೀಕತ್ವ ಸಾಬೀತು ಪಡಿಸುವ ನೊಂದಾಯಿತ ಮಾರಾಟ ಪತ್ರಗಳು / ದಾನ ಪತ್ರ / ವಿಭಾಗ ಪತ್ರಗಳು ಅಥವಾ ಸರ್ಕಾರ ಅಥವಾ ನಿಗಮ ಮಂಡಳಿಗಳಿಂದ ನೀಡಲಾದ ಹಕ್ಕು ಪತ್ರಗಳು / ಕಂದಾಯ ಇಲಾಖೆಯಿಂದ ನೀಡಲಾದ ಹಕ್ಕು ಪತ್ರಗಳು, ಸ್ವತ್ತಿನ ಮಾಲೀಕರ ಪಾಸ್ ಪೋರ್ಟ ಅಳತೆಯ ಭಾವಚಿತ್ರ, ಸ್ವತ್ತಿನ ಭಾವಚಿತ್ರ

( ಜಿ.ಪಿ.ಎಸ್), ಮಾಲೀಕರ ಗುರುತಿನ ದಾಖಲೆಪಾವತಿಸುವುದು), ಪ್ರಸಕ್ತ ಸಾಲಿನವರೆಗಿನ ಋಣಭಾರ ಪತ್ರ. ಬಿ ರಿಜಿಸ್ಟರ್‌ನಲ್ಲಿ ದಾಖಲಿಸಿ ಆಸ್ತಿ ಇ– ಖಾತಾ ( ನಮೂನೆ–3ಎ ) ಪಡೆಯಲು ಸಲ್ಲಿಸಬೇಕಾದ ದಾಖಲೆಗಳು: ಆಸ್ತಿಗೆ ಸಂಬಂಧಿಸಿದ ಸ್ವತ್ತಿನ ಮಾಲೀಕತ್ವ ಸಾಬೀತುಪಡಿಸುವ ದಿನಾಂಕ: 10–09–2024 ರ ಪೂರ್ವದಲ್ಲಿ ನೊಂದಾಯಿತ ಮಾರಾಟ ಪತ್ರಗಳು/ದಾನ ಪತ್ರ/ವಿಭಾಗ ಪತ್ರಗಳು/ಹಕ್ಕು ಖುಲಾಸೆ ಪತ್ರಗಳು, ಸ್ವತ್ತಿನ ಮಾಲೀಕರ ಪಾಸ್‌ಪೋರ್ಟ ಅಳತೆಯ ಭಾವಚಿತ್ರ , ಸ್ವತ್ತಿನ ಭಾವಚಿತ್ರ, ಮಾಲೀಕರ ಗುರುತಿನ ದಾಖಲೆ ಇವುಗಳಲ್ಲಿ ಯಾವುದಾದರೊಂದು, ಚಾಲ್ತಿ ಸಾಲಿನ / ಇತ್ತೀಚಿನ ಆಸ್ತಿ ಶುಲ್ಕ ರಶೀದಿ (ಹಿಂದಿನ ಸಾಲುಗಳ ತೆರಿಗೆ ಬಾಕಿ ಇದ್ದಲ್ಲಿ ಪಾವತಿಸುವುದು) ಸಲ್ಲಿಸುವಂತೆ ಮುಖ್ಯಾಧಿಕಾರಿಗಳು ಪುರಸಭೆ ರೋಣ ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೆಣ್ಣು-ಗಂಡು ತಾರತಮ್ಯವಿಲ್ಲದೆ ಸಮಾನವಾಗಿ ಗೌರವಿಸಬೇಕು : ಹನುಮಂತಪ್ಪ

**ಚಿಕ್ಕಮಗಳೂರು:** ಹೆಣ್ಣು ಮಕ್ಕಳನ್ನು ಭ್ರೂಣದಲ್ಲಿ ಹತ್ಯೆ ಮಾಡುವುದು ಕಾನೂನಾತ್ಮಕ ಅಪರಾಧವಾಗಿದೆ. ಹೆಣ್ಣು ಮತ್ತು ಗಂಡು ಎಂಬ ತಾರತಮ್ಯವಿಲ್ಲದೆ ಎಲ್ಲರನ್ನೂ ಸಮಾನವಾಗಿ ಗೌರವಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳಾದ ವಿ.ಹನುಮಂತಪ್ಪ ಹೇಳಿದರು.

ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾಘಟಕ ಹಾಗೂ ಡಿ.ಎ.ಸಿ.ಜಿ ಸರ್ಕಾರಿ ಪಾಲಿಟೆಕ್ನಿಕ್, ಚಿಕ್ಕಮಗಳೂರು ಇವರ ಸಂಯುಕ್ತಾಶ್ರಯದಲ್ಲಿ ಇಂದು ನಗರದ ಡಿ.ಎ.ಸಿ.ಜಿ ಸರ್ಕಾರಿ ಪಾಲಿಟೆಕ್ನಿಕ್ ಸಭಾಂಗಣದಲ್ಲಿ "ಭ್ರೂಣ ಹತ್ಯೆ ನಿಷೇಧ ಮತ್ತು ನಿಯಂತ್ರಣ ಕಾಯ್ದೆ ಹಾಗೂ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆಕಾಯ್ದೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳು ಮೊಬೈಲ್ ಬಳಕೆಯಿಂದ ದಾರಿ ತಪ್ಪುತ್ತಿದ್ದು, ಮಕ್ಕಳು ಶಾಲಾ ಅವಧಿಯಲ್ಲಿ ಶಿಕ್ಷಣದ ಕಡೆಗೆ ಗಮನ ನೀಡಬೇಕು. ಜೀವನದಲ್ಲಿ ಮಕ್ಕಳು ಗುರಿಗಳನ್ನು ಇಟ್ಟುಕೊಂಡು ವಿದ್ಯಾಭ್ಯಾಸ ಮಾಡಬೇಕು. ಗುರಿ ಸಾಧಿಸುವವರೆಗೆ ಪ್ರಯತ್ನ ಬಿಡಬಾರದು, ಸಂವಿಧಾನದ ಆಶಯದಂತೆ ಸಂವಿಧಾನದ ಅಡಿಯಲ್ಲಿ ಕಾನೂನಾತ್ಮಕವಾಗಿ ಮಕ್ಕಳನ್ನು ರಕ್ಷಣೆ ಮಾಡಬೇಕು. ಸರ್ಕಾರವು ಮಕ್ಕಳ ರಕ್ಷಣೆ ಕುರಿತು ಹಲವಾರು ಯೋಜನೆಗಳನ್ನು ಜಾರಿ ಮಾಡಿದ್ದು, ಮಕ್ಕಳು ಬೆಳೆದು ಸಮುದಾಯ ರಾಜ್ಯ, ದೇಶವನ್ನು ಮುನ್ನಡೆಸಬೇಕು. ಗ್ರಾಮೀಣ ಭಾಗಗಳಲ್ಲಿ ಬಾಲ್ಯ ವಿವಾಹದ ಪ್ರಕರಣಗಳು ಹೆಚ್ಚಾಗಿ ಕಂಡುಬರುತ್ತಿದ್ದು, 18 ವರ್ಷದೊಳಗಿನ



ಹೆಣ್ಣು ಹಾಗೂ 21 ವರ್ಷದೊಳಗಿನ ಗಂಡು ಮಕ್ಕಳಿಗೆ ವಿವಾಹ ಮಾಡಿಸುವುದು ಶಿಕ್ಷಾರ್ಹ ಅಪರಾಧವಾಗಿದೆ ಎಂದರು.

ಮಕ್ಕಳು ನಮ್ಮ ನಡುವೆ ಓಡಾಡುವ ಚೇತನಗಳು, ಅವರ ರಕ್ಷಣೆ ಪ್ರತಿಯೊಬ್ಬರ ಜವಬ್ದಾರಿಯಾಗಿದೆ. ಮಕ್ಕಳನ್ನು ರಕ್ಷಣೆ ಮಾಡುವುದು ತಾಯಿಯ ಗರ್ಭದಲ್ಲಿರುವಾಗಲೇ ಹಲವಾರು ಕಾನೂನಾತ್ಮಕ ರಕ್ಷಣೆ ಹಾಗೂ ಯೋಜನೆಗಳ ಫಲವನ್ನು ಪಡೆದು ಜನಿಸುತ್ತದೆ. ಮಕ್ಕಳು ದೇಶದ ಆಸ್ತಿ, ಮಕ್ಕಳು ನಂಬಿಕೆ, ನೆಮ್ಮದಿ, ಸುಖ-ಸಂತೋಷದ ಹಾಗೂ ಕಲಿಯುವ ವಾತಾವರಣದಲ್ಲಿ ಬೆಳೆದು ಬಂದರೆ ಅವರಿಗೆ ಅರ್ಥಪೂರ್ಣ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯವಾಗುತ್ತದೆ. ಹುಟ್ಟುವ ಪ್ರತಿ ಮಗುವನ್ನು ಅಕ್ಕರೆಯಿಂದ ಜಾಗರೂಕತೆಯಿಂದ ಬೆಳೆಸಿ ಎಂದು ಹೇಳಿದರು.

ಡಿ.ಎ.ಸಿ.ಜಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಶುಂಪಾಲರಾದ ಶ್ರೀಧರಮೂರ್ತಿ ಟಿ. ಆರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ನಮ್ಮ ಕಾಲೇಜಿನಲ್ಲಿ ಕಾರ್ಯಕ್ರಮ ಆಯೋಜನೆ ಮಾಡಿರುವುದು ತುಂಬಾ ಉಪಯುಕ್ತವಾಗಿದೆ. ನಾವು ಪ್ರತಿದಿನ ಮಕ್ಕಳಿಗೆ ಪಠ್ಯದ ಬಗ್ಗೆ ಮಾಹಿತಿಯನ್ನು ನೀಡುತ್ತಿರುತ್ತೇವೆ ಆದರೆ ಇಂದು ನ್ಯಾಯಾಧೀಶರು ಮಕ್ಕಳಿಗೆ ತಮ್ಮ ಅನುಭವ ಮತ್ತು ಪ್ರಕರಣದ ಉದಾಹರಣೆ ನೀಡಿ ಅರ್ಥ ಗರ್ಭಿತವಾಗಿ ಮಾಹಿತಿ ನೀಡಿರುತ್ತಾರೆ. ಎಲ್ಲಾ ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ತಿಳಿಸಿದರು.

ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಮಹಾಂತೇಶ್ ಭಜಂತ್ರಿ ಮಾತನಾಡಿ, ಸಂವಿಧಾನದ ಅಡಿಯಲ್ಲಿ ಮಕ್ಕಳಿಗೂ ಕೂಡಾ ಹಕ್ಕುಗಳಿದ್ದು ಅವುಗಳನ್ನು ರಕ್ಷಣೆ ಮಾಡುವುದು ನಮ್ಮೆಲ್ಲರ ಜವಬ್ದಾರಿಯಾಗಿದೆ.

ಮಕ್ಕಳಿಗೆ ಸಮಸ್ಯೆಗಳು ಬಂದ ಸಮಯದಲ್ಲಿ ಮಕ್ಕಳ ಸಹಾಯವಾಣಿ-1098ಗೆ ಕರೆಮಾಡಿದ್ದಲ್ಲಿ ತುರ್ತಾಗಿ ಸ್ಪಂದಿಸಿ ಮಕ್ಕಳ ರಕ್ಷಣೆಯನ್ನು ಮಾಡಲಾಗುತ್ತದೆ. ಮಕ್ಕಳು ಮೊಬೈಲ್ ಬಳಕೆಗಳನ್ನು ಕಡಿಮೆ ಮಾಡಿ ಓದಿನ ಕಡೆ ಗಮನಹರಿಸಬೇಕು ಪ್ರತಿದಿನ ಮಕ್ಕಳು ಯೋಗ, ಧ್ಯಾನ ಮಾಡುವುದರಿಂದ ಹೆಚ್ಚಿನ ಜ್ಞಾನವನ್ನು ಪಡೆಯಬಹುದು. ಮಕ್ಕಳು ವಾಹನಗಳನ್ನು ಚಲಾಯಿಸುವಾಗ ಅಪಘಾತವಾಗಬಹುದು ಆದ್ದರಿಂದ 18 ವರ್ಷದ ನಂತರ ಲೈಸೆನ್ಸ್ ಪಡೆದು ವಾಹನ ಚಲಾಯಿಸಬೇಕು ಎಂದು ತಿಳಿಸಿದರು.

ಜಿಲ್ಲಾ ನಿರೂಪಣಾಧಿಕಾರಿ ಲೋಕೇಶ್ವರಪ್ಪ ಪಿ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಸಂತೋಷ್, ಡಿ.ಎ.ಸಿ.ಜಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಯಾಂತ್ರಿಕ ವಿಭಾಗ ವಿಬಾಗಾಧಿಕಾರಿ, ಡಾ.ಸುನೀಲ್‌ಕುಮಾರ್ ಹೆಚ್.ಎಸ್ . ಹಾಜರಿದ್ದರು.

### ಅಸಮರ್ಪಕ ವಿದ್ಯುತ್ ಸರಬರಾಜು ಖಂಡಿಸಿ

# ಬೇಲೂರು ತಾಲ್ಲೂಕು ರೈತ ಸಂಘ ರಸ್ತೆ ತಡೆ ನಡೆಸಿ ಆಕ್ರೋಶ

**ಬೇಲೂರು:** ರಾಜ್ಯದಲ್ಲಿ ಈಗಾಗಲೇ ಬೇಸಿಗೆ ಬರದಿಂದ ಕುಡಿಯುವ ನೀರಿನ ಅಭಾವ ಸೃಷ್ಟಿಯ ಜೊತೆಗೆ ರೈತರ ಬೆಳೆಗಳಿಗೆ ಅಸಮರ್ಪಕ ವಿದ್ಯುತ್ ಪೂರೈಕೆಯಿಂದ ರೈತರು ಸಂಕಷ್ಟ ಸ್ಥಿತಿಯಲ್ಲಿದ್ದಾರೆ.

ಸಮರ್ಪಕ ವಿದ್ಯುತ್ ಪೂರೈಕೆ ಮಾಡಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘದ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಪ್ರವಾಸಿ ಮಂದಿರದಿಂದ ಹೊರಟ ಪ್ರತಿಭಟನಾಕಾರರು ಪಟ್ಟಣದ ಹೃದಯ ಭಾಗದ ಬಸವೇಶ್ವರ ವೃತ್ತದಲ್ಲಿ ರಸ್ತೆತಡೆ ನಡೆಸಿ ತಮ್ಮ ಆಕ್ರೋಶ ವ್ಯಕ್ತಪಡಿಸಿದ ಬಳಿಕ ನೇರ ಚೆಸ್ಕಾಂ ಕಚೇರಿಗೆ ಮುತ್ತಿಗೆ ಹಾಕಿ, ಸರಿಯಾದ ವಿದ್ಯುತ್ ನೀಡುವಂತೆ ಒತ್ತಾಯಿಸಿ, ಕಚೇರಿ ಮುಂದೆ ಠಿಕಾಣಿ ಹಾಕಿ ಸರ್ಕಾರ ಮತ್ತು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿ, ಬೇಲೂರು ತಾಲ್ಲೂಕು ರೈತ ಸಂಘದ ಅಧ್ಯಕ್ಷ ಬೋಗಮಲ್ಲೇಶ, ರಾಜ್ಯದಲ್ಲಿ ಈಗಾಗಲೇ ಸರ್ಕಾರ ರೈತರ ವಿರೋಧಿಯಾಗಿದೆ. ಒಂದು ಕಡೆ ಅತಿವೃಷ್ಟಿ- ಅನಾವೃಷ್ಟಿ ಮತ್ತು ಕಾಡಾನೆ ದಾಳಿಯಿಂದ ರೈತರ ಬದುಕು ಮೂರಾಬಟ್ಟೆಯಾಗಿದೆ. ಇಷ್ಟಾದರೂ ಸರ್ಕಾರ ಮತ್ತು ಅಧಿಕಾರಿಗಳು ರೈತರ ಮೇಲೆ ದೌರ್ಜನ್ಯ ಮತ್ತು ದಬ್ಬಾಳಿಕೆ



ಮಾಡುತ್ತಿದ್ದಾರೆ. ಮಲೆನಾಡು ಭಾಗದಲ್ಲಿ ಕಾಫಿಗೆ ಈ ವೇಳೆ ನೀರಿನ ಪೂರೈಕೆ ಅತ್ಯಂತ ಪ್ರಮುಖವಾಗಿದೆ.

ವಿದ್ಯುತ್ ಕಣ್ಣು ಮುಚ್ಚಾಲೆ ಮೂಲಕ ರೈತರನ್ನು ಶೋಷಣೆ ಮಾಡುತ್ತಿದ್ದಾರೆ. ಇನ್ನೂ ಬಯಲು ಸೀಮೆಯ ರೈತರ ಗೋಳು ದೇವರಿಗೆ ಪ್ರೀತಿಯಾಗಿದೆ. ವೈಜ್ಞಾನಿಕ ವಿದ್ಯುತ್ ಇಲ್ಲದೆ ಕಾಫಿ ಬೆಳೆಗಾರರ ಸ್ಥಿತಿ ತ್ರಿಶಂಕು ಪರಿಸ್ಥಿತಿ ಇದೆ. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಸಮರ್ಪಕವಾಗಿ ವಿದ್ಯುತ್ ಪೂ-ರೈಕೆ ಮಾಡದ ವೇಳೆ ಉಗ್ರಹೋರಾಟ ನಡೆಸಲಾಗುತ್ತದೆ ಎಂದು ಎಚ್ಚರಿ-ಕೆ ನೀಡಿದರು.

ಹಾಸನ ಎಲ್ಲಾ ರೈತ ಸಂಘದ ಪ್ರಧಾನ ಕಾರ್ಯದರ್ಶಿ ಬಳ್ಳೂರು ಸ್ವಾಮಿಗೌಡ ಮಾತನಾಡಿ, ಮಲೆನಾಡು ಭಾಗಕ್ಕೆ 24 ಗಂಟೆ ಅರೆಮಲೆನಾಡಿಗೆ ಹನ್ನೆರಡು ಗಂಟೆ ಬಯಲುಸೀಮೆಗೆ ಏಳು ಗಂಟೆ ಎಂದು ವಿದ್ಯುತ್ ಪೂರೈಕೆ ಮಾಡಲು ಚೆಸ್ಕಾಂ ನಿಯಮ ನಿಬಂಧನೆಗಳನ್ನು ರೂಪಿಸಿದೆ, ಆದರೆ ಬೇಸಿಗೆ ಹತ್ತಿರವಾದಂತೆ ವಿದ್ಯುತ್ ಇಲಾಖೆ ಮಲೆನಾಡಿಗೆ ಕೇವಲ ಮೂರು ಗಂಟೆ, ಅರೆಮಲೆನಾಡಿಗೆ ಎರಡು ಗಂಟೆ, ಬಯಲುಸೀಮೆಗೆ ಒಂದು ಗಂಟೆ, ವಿದ್ಯುತ್ ನೀಡುವ ನಿಟ್ಟಿನಲ್ಲಿ ಮುಂದಾಗಿರುವುದು ನಿಜಕ್ಕೂ ಶೋಚನೀಯ ಎಂದರು.

# ನಗರಸಭೆಯ ಸ್ಥಾಯಿ ಸಮಿತಿ ಆಯ್ಕೆ ಸಂಬಂಧ ಸಭೆಯ ಮಧ್ಯೆ ಹೊರ ನಡೆದ ಆಡಳಿತಾರೂಡ ಬಿಜೆಪಿ

**ಸಾಗರ :** ನಗರಸಭೆಯ ಸ್ಥಾಯಿ ಸಮಿತಿ ಆಯ್ಕೆ ಸಂಬಂಧ ಗುರುವಾರ ನಡೆದ ನಗರಸಭೆ ಸಾಮಾನ್ಯಸಭೆಯಲ್ಲಿ ಬಿಜೆಪಿ ಹಾಗೂ ಕಾಂಗ್ರೆಸ್ ಎರಡೂ ಪಕ್ಷಗಳಿಂದ ಆಯ್ಕೆಯು ನಡೆದು ಬಹುಮತದ ಆದಾರದ ಮೇಲೆ ಸಮಿತಿಯನ್ನು ರಚನೆ ಮಾಡುವಂತೆ ಕಾಂಗ್ರೆಸ್ ಒತ್ತಾಯವನ್ನು ಮಾಡಿದರೂ ಆಡಳಿತರೂಡ ಬಿಜೆಪಿ ತಮ್ಮ ಪಕ್ಷದವರನ್ನೇ ಆಯ್ಕೆ ಮಾಡಿ ಸಭೆಯಿಂದ ಹೊರ ನಡೆದ ಘಟನೆ ನಡೆಯಿತು.

ಮೈತ್ರಿ ಪಾಟೀಲ್ ಅಧ್ಯಕ್ಷತೆಯಲ್ಲಿ ಗುರುವಾರ ನಗರಸಭೆ ಮೊದಲ ಸಾಮಾನ್ಯಸಭೆ ಆಯೋಜನೆಗೊಂಡಿತ್ತು. ಸಭೆಯಲ್ಲಿ ಮೊದಲ ವಿಷಯವಾಗಿ ಸ್ಥಾಯಿ ಸಮಿತಿ ಆಯ್ಕೆ ವಿಷಯ ಪ್ರಸ್ತಾಪಿಸಲಾಯಿತು. ಆಡಳಿತ ಪಕ್ಷದ ಪರವಾಗಿ ಸದಸ್ಯ ಟಿ.ಡಿ.ಮೇಘರಾಜ್ ಮಾತನಾಡಿ, ಕಾನೂನುಪ್ರಕಾರವಾಗಿ ನಿಯಮಾನುಸಾರ ಸ್ಥಾಯಿ ಸಮಿತಿ ಸದಸ್ಯರನ್ನು ನೇಮಕ ಮಾಡುವಂತೆ ಮನವಿ ಮಾಡಿದರು. ಬಿಜೆಪಿ ಸದಸ್ಯ ಗಣೇಶ್ ಪ್ರಸಾದ್ ಕೆ.ಆರ್. ಆಡಳಿತ ಮತ್ತು ವಿಪಕ್ಷ ಸದಸ್ಯರನ್ನು ಒಳಗೊಂಡ 11 ಸದಸ್ಯರ ಹೆಸರನ್ನು ಘೋಷಣೆ ಮಾಡಿದರು. ಆದರೆ ವಿರೋದಪಕ್ಷವಾದ ಕಾಂಗ್ರೆಸ್ ಕೂಡ ತಮ್ಮ ಪಕ್ಷದವರನ್ನು ಆಯ್ಕೆ ಮಾಡಿ ಬಹುಮತದ ಆದಾರದ ಮೇಲೆ ಸ್ಥಾಯಿ ಸಮಿತಿಯನ್ನುರಚನೆ ಮಾಡಿ ಎಂದು ಸದಸ್ಯರಾದ ಗಣಪತಿ ಮಂಡಗಳಲೆ, ಮಧುಮಾಲತಿ, ಸೈಯದ್ ಜಾಕೀರ್, ತಸ್ರೀಫ್, ರವಿಕುಮಾರ್ ಇನ್ನಿತರರು ಒತ್ತಾಯಿಸಿ ಡಿಸೆಂಟ್ ನೋಟ್ ನೀಡಿದರು.ಪೌರಾಯುಕ್ತ ಹೆಚ್ ನಾಗಪ್ಪ ಸಭೆಯಲ್ಲಿ ಮಾತನಾಡಿ ಆಡಳಿತ ಹಾಗೂ ವಿರೋದಪಕ್ಷದವರು ಇಬ್ಬರೂ ಸಮಿತಿ ಆಯ್ಕೆಯನ್ನು ಮಾಡಿದ್ದರಿಂದ ಗುಪ್ತ ಮತದಾನದ ಮೂಲಕ ಸಮಿತಿ ರಚನೆ ಮಾಡುವುದು ಇದು ನಗರಸಭೆಯ ಕಾನೂನಿನಲ್ಲಿರುವ ಅಂಶ ಎಂದು ತಿಳಿಸಿದರು. ಆದರೆ ಇದಕ್ಕೆ ಒಪ್ಪದ ಬಿಜೆಪಿ ಅಧ್ಯಕ್ಷೆ ಹಾಗೂ ಚುನಾವಣಾಧಿಕಾರಿಯಾದ ಮೈತ್ರಿ ಪಾಟೀಲ್ ಬಿಜೆಪಿಯ 11 ಸದಸ್ಯರನ್ನು ಆಯ್ಕೆ ಮಾಡಿದ್ದಾಗಿ ಘೋಷಣೆ ಮಾಡಿದರು. ಈ ಸಂದರ್ಭದಲ್ಲಿ ವಿಪಕ್ಷ ಸದಸ್ಯರು ಹೆಸರು ಘೋಷಣೆ ಮಾಡಲು ಅಡ್ಡಿಪಡಿಸಿದರು. ಆದರೂ ಮೈತ್ರಿ ಪಾಟೀಲ್ ಹೆಸರು ಘೋಷಣೆ ಮಾಡಿ ಸಭೆಯಿಂದ ಹೊರಗೆ ನಡೆದರು.

### ಎಸ್‌ಓಜಿ ಕಾಲೋನಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ 310 ತಟ್ಟೆಗಳ ಕೊಡುಗೆ

# ವಿದ್ಯಾರ್ಥಿಗಳು ಭಯಪಡೆಯದೆ ಸಮಚಿತ್ತದಿಂದ ಪರೀಕ್ಷೆ ಎದುರಿಸಿ : ಪಾಮೇನಹಳ್ಳಿ ನಾಗರಾಜ್




**ದಾವಣಗೆರೆ :** ನಗರದ ದಕ್ಷಿಣ ವಲಯದ ಎಸ್‌ಓಜಿ ಕಾಲೋನಿಯಲ್ಲಿನ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ಶುಕ್ರವಾರ ಶಾರದಾ ಪೂಜೆ ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಪಾಲಿಕೆ 31ನೇ ವಾರ್ಡ್‌ನ ಪಾಮೇನಹಳ್ಳಿ ನಾಗರಾಜ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳಿಗೆ ಮುಂಬರುವ ಪರೀಕ್ಷೆಗಳಲ್ಲಿ ಉತ್ತಮವಾಗಿ ಬರೆಯಲು ಶುಭ ಹಾರೈಸಿದರು.

ಹಿರಿಯ ಪ್ರಾಥಮಿಕ ಶಾಲೆ ಹಾಗೂ ಪ್ರೌಢಶಾಲೆ ಎಸ್.ಎಂ. ಬಡಾವಣೆ ಈ ಎರಡೂ ಶಾಲೆಯ ವಿದ್ಯಾರ್ಥಿಗಳಿಗೆ ಮಧ್ಯಾಹ್ನ ಊಟದ ಅನುಕೂಲಕ್ಕಾಗಿ 310 ತಟ್ಟೆಗಳನ್ನು ವಿತರಿಸಿದ ಮಹಾನಗರ ಪಾಲಿಕೆ ಮಾಜಿ ಸದಸ್ಯರೂ, ನಗರ ಯೋಜನೆ ಮತ್ತು ಸುಧಾರಣೆ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷರೂ ಆದ ಶ್ರೀಮತಿ ಸವಿತಾ ಗಣೇಶ್ ಹುಲ್ಲುಮನೆ, ಪಾಮೇನಹಳ್ಳಿ ನಾಗರಾಜ್, ಶ್ರೀಮತಿ ಗೀತಾ ಮಾರುತಿ, ಎಸ್.ಎಂ ಬಡಾವಣೆ ಸ ಹಿ ಪ್ರಾ ಶಾಲೆ ಎಸ್‌ಡಿಎಂಸಿ ಸದಸ್ಯ ಎಸ್. ನಾಗರಾಜ್ ಇವರನ್ನು ಅಭಿನಂದಿಸಲಾಯಿತು.

ಈ ಸಂದರ್ಭದಲ್ಲಿ ಹದಡಿ ವೆಂಕಟೇಶಪ್ಪ, ಡಿ.ಜಿ. ಶಿವಕುಮಾರ್, ರೇವಣಸಿದ್ದಪ್ಪ, ಮುನಿಯಪ್ಪ, ಶಾಲೆಯ ಪ್ರಭಾರಿ ಮುಖ್ಯೋಪಾಧ್ಯಾಯರು, ಶಿಕ್ಷಕ ಸಿಬ್ಬಂದಿ ವರ್ಗ, ಶಾಲಾಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿ ಅಧ್ಯಕ್ಷರು, ಸದಸ್ಯರು ಉಪಸ್ಥಿತರಿದ್ದರು.

# ಸಿರಿಧಾನ್ಯ ಬಳಕೆ ಉತ್ತಮ ಆರೋಗ್ಯಕ್ಕೆ ಸಹಕಾರಿ : ಕೋಟಾ ಶ್ರೀನಿವಾಸ ಪೂಜಾರಿ



**ಚಿಕ್ಕಮಗಳೂರು:** ಕಲಬೆರಕೆ ಆಹಾರ ಪದಾರ್ಥಗಳ ಹಾವಳಿಯಿಂದ ಆತಂಕಪಡುತ್ತಿರುವ ಸಂದರ್ಭದಲ್ಲಿ ಸಿರಿಧಾನ್ಯ ಉತ್ಪನ್ನಗಳ ಬಳಕೆಯಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳಲು ಸಾಧ್ಯ ಎಂದು ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದ ಕೋಟಾ ಶ್ರೀನಿವಾಸ ಪೂಜಾರಿ ಹೇಳಿದರು.

ಅವರು ನಗರದ ಪಾಂಚಜನ್ಯ ಸಭಾಂಗಣದಲ್ಲಿ ಬೆಳವಾಡಿಯ ತೃಪ್ತಿ ಸಿರಿಧಾನ್ಯ ಸಿರಿ ಸಂಸ್ಥೆ, ಚಿಕ್ಕಮಗಳೂರು ಆರ್ಟ್ ಸೊಸೈಟಿ ಹಾಗೂ ಚಿತ್ರಕಲಾ ಶಿಕ್ಷಕರ ಸಂಘದ ವತಿಯಿಂದ ಏರ್ಪಡಿಸಲಾಗಿದ್ದ ತೃಪ್ತಿ ಸಿರಿಧಾನ್ಯ ಸರಿ ಉತ್ಪನ್ನಗಳ ಬಿಡುಗಡೆ ಹಾಗೂ ಚಿತ್ರಕಲಾ ಸ್ಪರ್ಧೆಯನ್ನು ಉದ್ಘಾಟಿಸಿ ಮಾತನಾಡಿದರು.

ಕಲಬೆರಕೆ ಇಲ್ಲದ ವಸ್ತುಗಳನ್ನು ಮಾರಾಟ ಮಾಡಲು ಸಾಧ್ಯವೇ ಇಲ್ಲ ಎನ್ನುವ ಸ್ಥಿತಿಗೆ ವ್ಯವಸ್ಥೆ ತಲುಪಿದೆ. ಮುಖಕ್ಕಿಂತ ಮುಖವಾಡಕ್ಕೆ ಹೆಚ್ಚು ಪ್ರಚಾರ ಸಿಗುವಂತಾಗಿದೆ. ನಮ್ಮ ಯೋಚನೆ ಮತ್ತು ವಿಚಾರ ಎರಡೂ ವ್ಯವಸ್ಥೆಯ ಹತ್ತಿರಕ್ಕಿರಬೇಕು ಎಂದು ಅವರು ತಿಳಿಸಿದರು.

ಕರ್ನಾಟಕ ಸರ್ಕಾರದಲ್ಲಿ ಆಹಾರ ಉತ್ಪನ್ನಗಳ ಗುಣಮಟ್ಟ ಪರೀಕ್ಷೆಗೆ ನಾಲ್ಕು ಪ್ರಯೋಗಾಲಯಗಳಿವೆ. ಹಣ್ಣುಗಳಿಗೆ ವಿಷಯುಕ್ತ ರಾಸಾಯನಿಕಗಳನ್ನು ಬೆರೆಸಿ ಬಣ್ಣ ಹೆಚ್ಚಿಸುವುದು ಸೇರಿದಂತೆ ಇತರೆ ಕಲಬೆರಕೆಗಳನ್ನು ಅದು ಪರೀಕ್ಷಿಸಬೇಕು. ಆದರೆ ಆ ನಾಲ್ಕೂ ಲ್ಯಾಬ್‌ಗಳು ಸಹ ಹಾಳಾಗಿವೆ ಸರಿಯಾದ ವರದಿ ಕೊಡುವ ಸ್ಥಿತಿಯಲ್ಲಿಲ್ಲ ಎಂದು ವರದಿಗಳು ಹೇಳುತ್ತವೆ. ಈ ರೀತಿ ಹಾಳುವ ಮಾಡುವ ವರ್ಗವೇ ಇದೆ. ಇಂತಹ ಪರಿಸ್ಥಿತಿಯಲ್ಲಿ ನಾವು ಆಹಾರದ ಬಗ್ಗೆ ಆತಂಕಪಡುತ್ತಿರುವ ಸಂದರ್ಭದಲ್ಲಿ ಸಿರಿಧಾನ್ಯ ಉತ್ಪನ್ನಗಳ ಬಳಕೆ ಸೂಕ್ತ ಎಂದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಮಾತನಾಡಿ, ನಮ್ಮ ನಿಜವಾದ ಆಹಾರ ಪದ್ಧತಿಯನ್ನು ಮರೆತ ಕಾರಣಕ್ಕೆ ಜಿಗಿದಾಡಬೇಕಾದ ವಯಸ್ಸಿನಲ್ಲೇ ಕಾಯಿಲೆ ತಂದುಕೊಳ್ಳುತ್ತಿದ್ದೇವೆ. ಆಹಾರ ಔಷಧಿ ಆಗುವ ಬದಲಿಗೆ, ಔಷಧಿಯೇ ಆಹಾರವಾಗಿ ಬದಲಾಗಿರುವುದರ ಪರಿಣಾಮ ಇದು. ಮತ್ತೆ ಪ್ರಕೃತಿಯ ಜೊತೆಗೆ ನಮ್ಮ ಬದುಕನ್ನು ಪುನರ್ ಸ್ಥಾಪಿಸುವುದೊಂದೇ ಅದಕ್ಕಿರುವ ಪರಿಹಾರ ಎಂದು ಹೇಳಿದರು.

ವಾತಾ, ಪಿತ್ತ, ಕಫ ಮೂರೂ ಸಮಚಿತ್ತದಲ್ಲಿದ್ದರೆ ನಮಗೆ ಇನ್ನಾವ ವೈದ್ಯರೂ ಬೇಕಿಲ್ಲ, ನಮ್ಮ ಆರೋಗ್ಯ ಕೆಟ್ಟಿತೆಂದು ಮೊದಲು ಸೂಚನೆ ಕೊಡುವುದೇ ಈ ಮೂರು ಸಂಗತಿ. ಅದನ್ನು ನಾವು ಆಹಾರದಲ್ಲೇ ನಿಯಂತ್ರಿಸಿಕೊಳ್ಳಲು ಸಾಧ್ಯವಿದೆ, ಆದರೆ ದುರ್ದೈವ ಆಹಾರವನ್ನೂ ನಾವು ವಿಷಯ ಮಾಡಿಬಿಟ್ಟಿದ್ದೇವೆ. ಅಕ್ಕಿ, ತರಕಾರಿ, ಹಣ್ಣು ಬೆಳೆಯುವುದು ಮತ್ತು ಸಂಸ್ಕರಿಸುವ ವೇಳೆ ಬಳಸುವ ರಾಸಾಯನಿಕಗಳು ವಿಷವಾಗಿ ಪರಿಣಮಿಸುತ್ತಿದೆ. ಇದಕ್ಕೆ ಪರಿಹಾರ ಹುಡುಕಿಕೊಳ್ಳಬೇಕಿದೆ. ವಿಚಾರ, ಆಹಾರ ಮತ್ತು ವಿಹಾರಗಳನ್ನು ಸರಿಪಡಿಸಿಕೊಂಡರೆ ಆರೋಗ್ಯ ಸರಿಯಾಗಿಟ್ಟಿಕೊಳ್ಳಲು ಉತ್ತಮ ಮಾರ್ಗ ಎಂದು ಹೇಳಿದರು.

ವಿಷಮಯ ಆಹಾರದಿಂದ ತಪ್ಪಿಸಿಕೊಳ್ಳುವ ಪುಟ್ಟ ಪ್ರಯತ್ನವನ್ನು ತೃಪ್ತಿ ಸಿರಿಧಾನ್ಯ ಸರಿ ಸಂಸ್ಥೆ ಮಾಡುತ್ತಿದೆ. ಅದನ್ನು ಪ್ರೋತ್ಸಾಹಿಸಿ ಆರೋಗ್ಯ ಸುರಕ್ಷತೆಗೆ ಆದ್ಯತೆ ನೀಡೋಣ ಎಂದರು.

ತೃಪ್ತಿ ಸಿರಿಧಾನ್ಯ ಸರಿ ಸಂಸ್ಥೆಯ ರವೀಂದ್ರ ಬೆಳವಾಡಿ ಮಾತನಾಡಿದರು. ಚಿಕ್ಕಮಗಳೂರು ಆರ್ಟ್ ಸೊಸೈಟಿ ಅಧ್ಯಕ್ಷೆ ಲತಾರವೀಂದ್ರ ಅಧ್ಯಕ್ಷತೆ ವಹಿಸಿದ್ದರು. ಕೆನರಾ ಬ್ಯಾಂಕ್ ಅಧಿಕಾರಿ ಮನೋಜ್, ಜಂಟೀ ಕೃಷಿ ನಿರ್ದೇಶಕಿ ಎಚ್.ಎಲ್.ಸುಜಾತ, ಶಾಂತಿನಿಕೇತನ ಚಿತ್ರಕಲಾ ವಿದ್ಯಾಲಯದ ಪ್ರಾಂಶುಪಾಲ ವಿಶ್ವಕರ್ಮ ಆಚಾರ್ಯ, ಸಿರಿ ನೇಚರ್ಸ್‌ರೂಟ್ಸ್‌ನ ರಮೇಶ್ ಇತರರು ಉಪಸ್ಥಿತರಿದ್ದರು.

ಚಿತ್ರಕಲಾ ಶಿಕ್ಷಕರ ಸಂಘದ ಅಧ್ಯಕ್ಷ ನಾಗರಾಜು ಸ್ವಾಗತಿಸಿದರು.

# ಜನರ ಮೂಗಿಗೆ ತುಪ್ಪ ಸವರಿದ ಬಜೆಟ್:ಜಿಲ್ಲಾ ಬಿಜೆಪಿ ಟೀಕೆ

**ಚಿಕ್ಕಮಗಳೂರು:** ಮುಖ್ಯ ಮಂತ್ರಿ ಸಿದ್ಧರಾಮಯ್ಯ ಅವರು ಇಂದು ಮಂಡಿಸಿರುವ ರಾಜ್ಯ ಬಜೆಟ್ ಮುಸ್ಲಿಮರ ತುಷ್ಠೀಕರಣದ ಬಜೆಟ್ ಆಗಿದೆಯಲ್ಲದೆ, ಬಜೆಟ್ ಮೂಲಕ ರಾಜ್ಯದ ಜನರ ಮೂಗಿಗೆ ತುಪ್ಪ ಸವರಿದ್ದಾರೆ ಎಂದು ಜಿಲ್ಲಾ ಬಿಜೆಪಿ ಟೀಕಿಸಿದೆ ಎಂದು ಪಕ್ಷದ ವಕ್ತಾರ ಹಿರೇಮಗಳೂರು ಪುಟ್ಟಸ್ವಾಮಿ ತಿಳಿಸಿದ್ದಾರೆ.

ಕಳೆದ ವರ್ಷ ಮಂಡಿಸಿದ್ದ 3.71 ಲಕ್ಷ ರೂ.ಗಳ ಬಜೆಟ್‌ನಲ್ಲಿ ನೀಡಿದ್ದ ಭರವಸೆಗಳಲ್ಲಿ ಶೇ.50 ರಷ್ಟನ್ನು ಅನುಷ್ಠಾನಕ್ಕೆ ತರುವಲ್ಲಿ ವಿಫಲವಾಗಿರುವ ರಾಜ್ಯ ಸರ್ಕಾರ, ಈ ಬಾರಿ 4.9 ಲಕ್ಷ ಕೋಟಿ ರೂ.ಗಳ ಗಾತ್ರದ ಬಜೆಟ್‌ನಲ್ಲಿ ಹಲವು ಭರವಸೆಗಳೊಂದಿಗೆ ಜನರ ಮೂಗಿಗೆ ತುಪ್ಪ ಸವರಿದ್ದಾರೆ, ಅದೊಂದು ಹುಸಿ ಬಜೆಟ್ ಆಗಿದೆ ಎಂದು ಟೀಕಿಸಿದ್ದಾರೆ.

ವಕ್ಫ್ ಆಸ್ತಿ ರಕ್ಷಣೆಗೆ 150 ಕೋಟಿ ರೂ.ಗಳನ್ನು ಮೀಸಲಿಡಲಾಗಿದೆ. ಮುಸ್ಲಿಮರ ಶಿಕ್ಷಣಕ್ಕೆ ಹೆಚ್ಚಿನ ಅನುದಾನವನ್ನು ತೆಗೆದಿಡಲಾಗಿದೆ. ಗುತ್ತಿಗೆಯಲ್ಲಿ ಶೇ.4 ಮೀಸಲು ಮತ್ತು ಕೆಐಎಡಿಬಿಯಲ್ಲಿ ಶೇ.20 ರಷ್ಟು ಮೀಸಲಾತಿಯನ್ನು ಒದಗಿಸಿರುವುದು ಸೇರಿದಂತೆ ಮುಸ್ಲಿಮರಿಗೆ ಹೆಚ್ಚಿನ ಒತ್ತು ನೀಡುವ ಮೂಲಕ ತನ್ನ ತುಷ್ಠೀಕರಣ ನೀತಿಯನ್ನು ಮುಖ್ಯ ಮಂತ್ರಿಯವರು ಸಾಬೀತುಪಡಿಸಿದ್ದಾರೆ ಎಂದು ಹೇಳಿದ್ದಾರೆ.

ಬಜೆಟ್‌ಗೂ ಮುನ್ನ ಶಾಸಕರ ವೇತನ ಮತ್ತು ಇತ-ರೆ ಸೌಲಭ್ಯಗಳನ್ನು ಶೇ.50 ರಷ್ಟು ಹೆಚ್ಚಿಸಿಕೊಂಡಿರುವ ಸರ್ಕಾರ, ಈ ಬಾರಿ ಬಜೆಟ್‌ನಲ್ಲಿ ಅಂಗನವಾಡಿ ಕಾರ್ಯಕರ್ತೆಯರಿಗೆ ಕೇವಲ ಒಂದು ಸಾವಿರ ಮತ್ತು ಸಹಾಯಕಿಯರಿಗೆ 750 ರೂ.ಗಳ ವೇತನ ಹೆಚ್ಚಿಸುವ ಮೂಲಕ ಅವರುಗಳ ನಿರೀಕ್ಷೆ ಮತ್ತು ಬೇಡಿಕೆಯನ್ನು ಹುಸಿಗೊಳಿಸಲಾಗಿದೆ. ಅವರುಗಳಿಗೆ ಕನಿಷ್ಠ 3 ಸಾವಿರ ಮತ್ತು 2 ಸಾವಿರ ರೂ.ಗಳನ್ನು ಹೆಚ್ಚಿಸಬೇಕಿತ್ತು ಎಂದು ತಿಳಿಸಿದ್ದಾರೆ.

# ಪರಿಶ್ರಮ ವಹಿಸಿ ಮುನ್ನಡೆದರೆ ಉದ್ಯೋಗ ಕ್ಷೇತ್ರದಲ್ಲಿ ಯಶಸ್ಸು




**ಶಿವಮೊಗ್ಗ:** ಉದ್ಯೋಗ ಕ್ಷೇತ್ರದಲ್ಲಿ ಅನೇಕ ಅವಕಾಶಗಳಿದ್ದು, ವಿದ್ಯಾರ್ಥಿಗಳು ಪರಿಶ್ರಮ ವಹಿಸಿ ಮುನ್ನಡೆದಾಗ ಉದ್ಯೋಗ ಕ್ಷೇತ್ರದಲ್ಲಿ ಯಶಸ್ಸು ಸಾಧಿಸಬಹುದು ಎಂದು ದೇಶೀಯ ವಿದ್ಯಾಶಾಲಾ ಸಮಿತಿ ಕಾರ್ಯದರ್ಶಿ ಎಸ್. ರಾಜಶೇಖರ್ ಹೇಳಿದರು.

ದೇಶೀಯ ವಿದ್ಯಾಶಾಲಾ ಸಮಿತಿಯ ಡಿವಿಎಸ್ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜಿನಲ್ಲಿ ಬೆಂಗಳೂರಿನ ಅಪ್ಟಂ ಹೆಲ್ತ್ ಮತ್ತು ಟೆಕ್ನಾಲಜೀಸ್ ಸಹಯೋಗದಲ್ಲಿ ವಿಜ್ಞಾನ ವಿಭಾಗದ ಪದವಿ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಅಪ್ಟಂ ಕ್ಯಾಂಪಸ್ ಡ್ರೈವ್ ಮತ್ತು ವಿಶೇಷ ನೇಮಕಾತಿ ಆಯ್ಕೆ ಪ್ರಕ್ರಿಯೆ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಡಿವಿಎಸ್ ವಿದ್ಯಾಸಂಸ್ಥೆಯ ಕಾಲೇಜಿನಲ್ಲಿ ನಾಲ್ಕು ವರ್ಷಗಳಿಂದ ವಿಶೇಷ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳುತ್ತಿದ್ದು, ಅಪ್ಟಂ ಸಂಸ್ಥೆಯು ಅನೇಕ ವಿದ್ಯಾರ್ಥಿಗಳನ್ನು ತರಬೇತಿಗೊಳಿಸಿ ಶೇ. 99ರಷ್ಟು ವಿದ್ಯಾರ್ಥಿಗಳು ಉದ್ಯೋಗ ಪಡೆದುಕೊಳ್ಳುವಲ್ಲಿ ನೆರವಾಗಿದೆ. ಎಲ್ಲ ವಿದ್ಯಾರ್ಥಿಗಳು ಅಗತ್ಯ ತರಬೇತಿ ಪಡೆದುಕೊಂಡು ಉದ್ಯೋಗ ಪಡೆಯುವಲ್ಲಿ ಯಶಸ್ವಿಯಾಗಬೇಕು ಎಂದು ತಿಳಿಸಿದರು.

ದೇಶೀಯ ವಿದ್ಯಾಶಾಲಾ ಸಮಿತಿ ಅಧ್ಯಕ್ಷ ಕೆ. ಎನ್.ರುದ್ರಪ್ಪ ಕೊಳಲೆ ಮಾತನಾಡಿ, ವಿದ್ಯಾರ್ಥಿಗಳಿಗೆ ಅತ್ಯಂತ ಶ್ರದ್ಧೆಯಿಂದ ಮತ್ತು ಇಂದಿನ ತಾಂತ್ರಿಕ ಯುಗದ ಪರಿಣಿತಿಯನ್ನು ಕರಗತ ಮಾಡಿಕೊಂಡು ಎಲ್ಲ ರೀತಿಯ ಉದ್ಯೋಗಗಳಿಗೂ ಸನ್ನದ್ಧರಾಗಬೇಕು ಎಂದು ಸಲಹೆ ನೀಡಿದರು.ಡಿವಿಎಸ್ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜಿನ ಪ್ರಾಚಾರ್ಯ ಡಾ. ಎಂ.ವೆಂಕಟೇಶ್ ಮಾತನಾಡಿ, ಇಂದಿನ ವಿದ್ಯಾರ್ಥಿಗಳಿಗೆ ಹೆಚ್ಚಿನ ಉದ್ಯೋಗ ಅವಕಾಶಗಳು ಲಭಿಸಲು ಪೂರಕವಾಗಿ ಸರ್ಕಾರಗಳು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಬೇಕು. ಬಹಳ ಮುಖ್ಯವಾಗಿ ಉದ್ಯೋಗ ಆಕಾಂಕ್ಷಿಗಳು ತಮ್ಮ ಪ್ರಯತ್ನವನ್ನು ನಿರಂತರವಾಗಿ ಮುಂದುವರಿಸಬೇಕು.

# ಜಲಜೀವನ್ ಮಿಷನ್: ಅನುಷ್ಠಾನ, ಕಾರ್ಯಾಚರಣೆ ಜವಾಬ್ದಾರಿಯುತವಾಗಿರಲಿ : ಬಸನಗೌಡ ಪಾಟೀಲ್

**ಚಿತ್ರದುರ್ಗ :** ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಅಧ್ಯಕ್ಷರು ಮತ್ತು ಇಲಾಖೆಯವರು ಒಟ್ಟಾಗಿ ಪಂಚಾಯಿತಿ ಮಟ್ಟದಲ್ಲಿ ಜಲ ಜೀವನ್ ಮಿಷನ್ ಅನುಷ್ಠಾನ ಮತ್ತು ಕಾರ್ಯಚರಣೆ, ನಿರ್ವಹಣೆ ಜವಾಬ್ದಾಯುತವಾಗಿ ಮಾಡಬೇಕು ಎಂದು ಗ್ರಾಮೀಣ ಕುಡಿಯುಬ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ಬಸನಗೌಡ ಪಾಟೀಲ್ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಈಚೆಗೆ ಜಿಲ್ಲಾ ಪಂಚಾಯತ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಜಲ ಜೀವನ್ ಮಿಷನ್ ಮತ್ತು ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಗಳನ್ನು ಉತ್ತಮ ಅನುಷ್ಠಾನಕ್ಕಾಗಿ ವಾಶ್ ಕಾರ್ಯಕ್ರಮಗಳ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತು ಚಳ್ಳಕೆರೆ ಮತ್ತು ಮೊಳಕಾಲ್ಮೂರು ತಾಲ್ಲೂಕುಗಳ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಗಳಿಗೆ ಸಾಮರ್ಥ್ಯ ಅಭಿವೃದ್ಧಿಗೊಳಿಸುವ ಕುರಿತು ಒಂದು ದಿನದ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆಗಳನ್ನು ಪ್ರತಿ ಮೂರು ತಿಂಗಳಿಗೊಮ್ಮೆ ಕಡ್ಡಾಯವಾಗಿ ಮಾಡಿ ಅದರ ನಡಾವಳಿಯನ್ನು ಜಿಲ್ಲಾ ಪಂಚಾಯಿತಿ ಕಛೇರಿಗೆ ಸಲ್ಲಿಸಬೇಕು. ಮುಂದಿನ ದಿನಗಳಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ 24*7 ನೀರು ಸರಬರಾಜು ಮಾಡುವ ನಿಟ್ಟಿನಲ್ಲಿ ಕ್ರಮ ವಹಿಸಬೇಕು ಎಂದು ತಿಳಿಸಿದರು.

ಜಿ.ಪಂ ಮುಖ್ಯ ಯೋಜನಾಧಿಕಾರಿ ಸಿ ಎನ್ ಗಾಯಿತ್ರಿ ಮಾತನಾಡಿ, ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಗಳ ಪುನರ್ ರಚನೆ ಮತ್ತು ಖಾತೆಗಳನ್ನು ತೆರೆಯುವುದು ಮತ್ತು



ತಾಂತ್ರಿಕ ಕೌಶಲ್ಯಗಳನ್ನು ಉಪಯೋಗಿಸಿಕೊಂಡು ಐಇಸಿ ಮತ್ತು ತರಬೇತಿ ಕಾರ್ಯಕ್ರಮಗಳನ್ನು ಗ್ರಾಮೀಣ ಸಮುದಾಯದಲ್ಲಿ ವ್ಯಾಪಕವಾದ ಅರಿವು ಮೂಡಿಸಬೇಕಾಗಿದೆ ಎಂದು ಹೇಳಿದರು.

ಪ್ರತಿ ಮನೆ-ಮನೆಗೂ ನಳ ಸಂಪರ್ಕದ ಮೂಲಕ ಶುದ್ದ ಕುಡಿಯುವ ನೀರು ಪೂ-ರೈಕೆ ಮಾಡುವುದು ಸರ್ಕಾರದ ಉದ್ದೇಶವಾಗಿದೆ ಈ ನಿಟ್ಟಿನಲ್ಲಿ ಎಲ್ಲಾ ಕಡೆಯಲ್ಲೂ ಒವರ್ ಹೆಡ್ ಟ್ಯಾಂಕ್‌ಗಳ ಗಳ ನಿರ್ಮಾಣ ಸೇರಿದಂತೆ ಜಲ ಜೀವನ್ ಮಿಷನ್ ನಿಂದ ಅಗತ್ಯ ಸಿದ್ದತೆ ಕೈಗೊಳ್ಳಲಾಗಿದ್ದು, ಪೂರ್ಣಗೊಂಡ ಕಾಮಗಾರಿಗಳನ್ನು ಗ್ರಾಮ ಪಂಚಾಯಿತಿಗಳಿಗೆ ಹಸ್ತಾಂತರಿಸಬೇಕು ಬಳಿಕ ನಿರ್ವಹಣೆ ಮಾಡಲು ಅಗತ್ಯ ಕೈಗೊಳ್ಳಬೇಕೆಂದು ತಿಳಿಸಿದರು.

ರಾಜ್ಯ ಸಂಪನ್ಮೂಲ ವ್ಯಕ್ತಿಯಾದ ಜೋಸೆಫ್ ಜಿ.ಎಂ ರೆಬೆಲ್ಲೋ ಅವರು ವಿಡಬ್ಲ್ಯೂಎಸ್‌ಸಿ ಸಮಿತಿ, ಜಲ ಮೂಲಗಳ ಸಂರಕ್ಷಣೆ, ಘನ ದ್ರವ ತ್ಯಾಜ್ಯಗಳ ನಿರ್ವಹಣೆ, ಕಾರ್ಯಚರಣೆ, ಶೌಚಾಲಯದ ಮಹತ್ವ, ನೀರಿನ ಮಹತ್ವ, ಶುಚಿತ್ವ ಬೂದು ನೀರು ನಿರ್ವಹಣೆ ಮಳೆ ನೀರು ಕೊಯ್ಲು ಜಲ ಸಂಪನ್ಮೂಲ ಮತ್ತು ಜಲ ಕ್ಷಾಮ ನೀರಿನ ಶುದ್ಧತೆ ಮತ್ತು ನೀರಿನ ಮಲಿನತೆ ನೀರಿನ ದುರ್ಬಳಕೆ ಮತ್ತು ಸದ್ಬಳಕೆ ಬಾವಿ ಕೆರೆ ನದಿ ಮತ್ತು ಕೊಳವೆ ಬಾವಿ ನೀರಿನ ವ್ಯತ್ಯಾಸ. ಜಲ ಸಂರಕ್ಷಣಾ ವಿಧಾನಗಳು ಮತ್ತು ಪ್ರಾಮುಖ್ಯತೆ. ಬೂದು ನೀರು ಮತ್ತು ಕಪ್ಪು ನೀರು ಸಮಸ್ಯೆ ಮತ್ತು ಪರಿಹಾರ ನೀರಿನ ಸುಸ್ಥಿರತೆ ಕಾಪಾಡುವಲ್ಲಿ ಸಮುದಾಯ ಸಹಬಾಗಿತ್ವ ಮಳೆ ನೀರು ಕೊಯ್ಲು ವೈಜ್ಞಾನಿಕ ರಚನೆ ಮತ್ತು ನಿರ್ವಹಣೆ ಮುಂತಾದ ವಿಷಯಗಳ ಬಗ್ಗೆ ಮಾಹಿತಿ ನೀಡಿದರು.

ತರಬೇತಿಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಚಳ್ಳಕೆರೆ ಮತ್ತು ಮೊಳಕಾಲ್ಮೂರು ತಾಲ್ಲೂಕುಗಳ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ದಯಾನಂದಸ್ವಾಮಿ, ಲಿಂಗರಾಜು, ಕಿರಿಯ ಅಭಿಯಂತರರಾದ ಕಾರ್ತಿಕ್, ಭಾರತಿ, ತಿಪ್ಪೇಸ್ವಾಮಿ, ಎಎಒ ಜಿಲ್ಲಾ ವ್ಯವಸ್ಥಾಪಕರಾದ ಮುಂಜುನಾರ್ ನಾಡರ್, ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯ ಜಿಲ್ಲಾ ಸಮಾಲೋಚಕರಾದ ಬಿ.ಸಿ. ನಾಗರಾಜ್, ವಿನಯ್ ಕುಮಾರ್, ಶಶಿಧರ್ ಮತ್ತು ಪ್ರಮೀಳ, ಲೆಕ್ಕ ಸಹಾಯಕರಾದ ಶೃತಿ. ಬಿ.ಜೆ ಕರ್ನಾಟಕ ಸುಸ್ಥಿರ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆ ಸಮಾಲೋಚಕ, ಕಿರಣ್ ಪಾಟೀಲ್, ಗೀತಾಲಕ್ಷೀ ಇದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**